ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 21, ಸಂಚಿಕೆ: 297, ಪುಟಗಳು: 8, ಭಾನುವಾರ, 4 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3


ವೇಣು ಸಾರಥ್ಯದಲ್ಲಿ...




### ಸುಭಾಷಿತ

ನಮ್ಮ ಉತ್ಸಾಹ ಹುಲ್ಲಿನ ಬೆಂಕಿಯಾಗಬಾರದು. ಕಲ್ಲಿದ್ದಲ ಕಾವಾಗಬೇಕು.

। ಕುವೆಂಪು

### ಪಂಚಾಂಗ

(ಭಾನುವಾರ 4, ಆಗಸ್ಟ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ಗ್ರೀಷ್ಮ ಋತು, ದಕ್ಷಿಣಾಯನ
- ಆಷಾಢ ಮಾಸ, ಕೃಷ್ಣ ಪಕ್ಷ,
- ಅಮಾವಾಸ್ಯೆ, ಪುಷ್ಯ ನಕ್ಷತ್ರ
- ರಾಹುಕಾಲ - 05:10 ರಿಂದ 6:45
- ಗುಳಿಕಕಾಲ - 03:35 ರಿಂದ 5:10
- ಯಮಗಂಡಕಾಲ - 12:25 ರಿಂದ 2:00

## ಸಂಕ್ಷಿಪ್ತ ಸುದ್ದಿ

### ಕುಡಿದ ಮತ್ತಿನಲ್ಲಿ ಪತ್ನಿಯ ಕುತ್ತಿಗೆ ಕಡಿದು ಡ್ಯಾನ್ಸ್!



**ಉಡುಪಿ:** ಕುಡಿದ ಮತ್ತಿನಲ್ಲಿ ಪತ್ನಿಯ ಕುತ್ತಿಗೆಗೆ ಕತ್ತಿಯಿಂದ ಕಡಿದು ಡ್ಯಾನ್ಸ್ ಮಾಡಿ ಪತಿ ವಿಕೃತಿ ಮೆರೆದಿರುವ ಘಟನೆ ಉಡುಪಿ ಜಿಲ್ಲೆ ಕುಂದಾಪುರ ತಾಲೂಕಿನ ಬಸ್ರೂರಿನಲ್ಲಿ ನಡೆದಿದೆ. ಪತ್ನಿ ಅನಿತಾ (38) ಮೇಲೆ ಕತ್ತಿಯಿಂದ ಹಲ್ಲೆ ಮಾಡಿ ಪತಿ ಲಕ್ಷ್ಮಣ ನರ್ತನ ಮಾಡಿ ಅಟ್ಟಹಾಸ ಮೆರೆದಿದ್ದಾನೆ. ಗಂಭೀರವಾಗಿ ಗಾಯಗೊಂಡ ಅನಿತಾಗೆ ಮಣಿಪಾಲ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಲಾಗುತ್ತಿದೆ. ಬಸ್ರೂರು ಕಾಶಿ ಮಠ, ರೆಸಿಡೆನ್ಶಿಯಲ್ ಬ್ಲಾಕ್‌ನ ಬಾಡಿಗೆ ಮನೆಯಲ್ಲಿ ವಾಸವಾಗಿದ್ದ ಸೊರಬ ತಾಲೂಕು ಮೂಲದ ದಂಪತಿ, ಪುಟ 2

### ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ; ಯಾದಗಿರಿ ಡಿಹೆಚ್‌ಒ ಅಮಾನತು

**ಯಾದಗಿರಿ:** ಆದಾಯಕ್ಕಿಂತ ಹೆಚ್ಚು ಆಸ್ತಿ ಹೊಂದಿದ ಆರೋಪದ ಹಿನ್ನೆಲೆ ಯಾದಗಿರಿ ಡಿಹೆಚ್‌ಒ ಡಾ.ಪ್ರಭುಲಿಂಗ್ ಮಾನಕರ್ ಅವರನ್ನು ಅಮಾನತು ಮಾಡಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಡಳಿತಾಧಿಕಾರಿ ಆದೇಶ ಹೊರಡಿಸಿದ್ದಾರೆ. ಇಲಾಖೆ ವಿಚಾರಣೆ ಹಾಗೂ ಕ್ರಿಮಿನಲ್ ಪ್ರಕರಣ ಬಾಕಿ ಇರಿಸಿ ಅಮಾನತು ಜೊತೆಗೆ ವರ್ಗಾವಣೆ ಮಾಡಲಾಗಿದೆ. ಡಿಎಚ್‌ಒ ಯಿಂದ ನೇರವಾಗಿ ಕಲಬುರಗಿ ತಾಲೂಕಿನ ಆಳಂದ



ಸಾರ್ವಜನಿಕ ತಾಲೂಕು ಆಸ್ಪತ್ರೆಗೆ ವರ್ಗಾವಣೆ ಮಾಡಲಾಗಿದೆ. ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ದೂರು ಹಿನ್ನೆಲೆ ಕಳೆದ ಕೆಲ ತಿಂಗಳ ಹಿಂದೆ ಆಲೂಔ ಮನೆ ಮೇಲೆ ಲೋಕಾಯುಕ್ತ ದಾಳಿ ನಡೆದಿತ್ತು. ಯಾದಗಿರಿಯ ಕಚೇರಿ, ಮನೆ, ಕಲಬುರಗಿ ಮನೆ ಮೇಲೆ ದಾಳಿ ನಡೆದಿತ್ತು. ಸದ್ಯ ಇದೀಗ ಅಮಾನತು ಮಾಡಲಾಗಿದೆ. ಪುಟ 2

### 104 ಸಂಭವನೀಯ ಭೂಕುಸಿತ, ಪ್ರವಾಹ ಪ್ರದೇಶಗಳ ಗುರುತು

## 2,995 ಕುಟುಂಬಗಳ ಸ್ಥಳಾಂತರಕ್ಕೆ ಪ್ಲ್ಯಾನ್

**ಮಡಿಕೇರಿ:** ದೇವರನಾಡು ಕೇರಳ ರಾಜ್ಯದ ವಯನಾಡಿನಲ್ಲಿ ಸಂಭವಿಸಿದ ಜಲಸ್ಫೋಟ-ಗುಡ್ಡ ಕುಸಿತದ ನಂತರ ಕೊಡಗು ಜಿಲ್ಲೆಯಲ್ಲೂ ಆತಂಕದ ಕರಿಛಾಯೆ ಆವರಿಸಿದೆ. 2018ರಲ್ಲಿ ಸಂಭವಿಸಿದ ದುರಂತಗಳು ಕಣ್ಣ ಮುಂದೆ ಬರುತ್ತಿವೆ. 'ಗುಡ್ಡದ ಭೂತ'ದ ಭಯವೂ ಮೂಡಿದೆ. ಮುಂಗಾರು ಅಬ್ಬರಿಸಿ ಬೊಬ್ಬಿರಿಯುತ್ತಿರುವುದರಿಂದ ಮುಂಜಾಗ್ರತ ಕ್ರಮವಾಗಿ ಬೆಟ್ಟ-ಗುಡ್ಡ, ನದಿ ಅಂಚಿನಲ್ಲಿ ಸೇರಿದಂತೆ ಅಪಾಯದ ಸ್ಥಳದಲ್ಲಿ ನೆಲೆನಿಂತಿರುವವರ ಸ್ಥಳಾಂತರ ಒಂದೇ ಪರಿಹಾರ ಎಂಬ ಚರ್ಚೆಯೂ ಎದ್ದಿದೆ.

ಕಳೆದ ಜು.31 ರಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ನೀಡಿರುವ ನಿರ್ದೇಶನವನ್ನು ಜಿಲ್ಲಾಡಳಿತ ಗಂಭೀರವಾಗಿ ತೆಗೆದುಕೊಂಡಿದೆ. ವಿಜ್ಞಾನಿಗಳ ವರದಿ, ಈ ಹಿಂದೆ ಅಪಾಯ ಸಂಭವಿಸಿದ




ಪ್ರದೇಶಗಳ ಆಧಾರದಲ್ಲಿ 104 ಸಂಭವನೀಯ ಭೂಕುಸಿತ-ಪ್ರವಾಹ ಪ್ರದೇಶಗಳನ್ನು 'ಮ್ಯಾಪಿಂಗ್' ಮಾಡಲಾಗಿದ್ದು, ಅಪಾಯದ ಸ್ಥಳದಲ್ಲಿರುವ 2,995 ಕುಟುಂಬಗಳು ಸ್ಥಳಾಂತರಕ್ಕೆಂದು ಗುರುತು ಮಾಡಲಾಗಿದೆ.

ಈಗಾಗಲೇ ಸುಮಾರು 313 ಕುಟುಂಬಗಳನ್ನು ಸ್ಥಳಾಂತರ ಮಾಡಲಾಗಿದ್ದು, ಸದ್ಯ 10 ಪರಿಹಾರ ಕೇಂದ್ರಗಳನ್ನು ಜಿಲ್ಲೆಯಲ್ಲಿ ತೆರೆಯಲಾಗಿದೆ. ಅಪಾಯದಲ್ಲಿರುವ ಕೆಲವರು ಪರಿಹಾರ ಕೇಂದ್ರಗಳಲ್ಲಿ ಆಶ್ರಯ ಪಡೆದಿದ್ದಾರೆ. ಇನ್ನೂ ಹಲವರು ತಮ್ಮ ಸಂಬಂಧಿಕರ ಮನೆಗೆ ಸ್ಥಳಾಂತರಗೊಂಡಿದ್ದಾರೆ.

ಆಗಸ್ಟ್ ಆತಂಕ

ಜಿಲ್ಲೆಯಲ್ಲಿ ವಾಡಿಕೆಗಿಂತ 24% ಹೆಚ್ಚಿನ ಮಳೆಯಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಮಳೆಯಾಗುವ ಸಾಧ್ಯತೆ ಹೆಚ್ಚಿದೆ. ಇದರೊಂದಿಗೆ 'ಆಗಸ್ಟ್ ಆತಂಕ'ವೂ ಹುಟ್ಟಿಕೊಂಡಿದೆ. ಆಗಸ್ಟ್ ಬಂತೆಂದರೆ ಜಿಲ್ಲೆಯ ಜನರಲ್ಲಿ ಆತಂಕ, ದುಗುಡ ಹೆಚ್ಚಾಗುತ್ತದೆ. ಬಿರುಸಿನ ಮಳೆ, ಮೈಕೊರೆಯುವ ಚಳಿಯಲ್ಲಿಯೂ ಬೆವರುವಂತಹ ಭಯ ಸೃಷ್ಟಿಯಾಗುತ್ತದೆ. ಪುಟ 2

### ಪರಶುರಾಮ ಥೀಮ್ ಪಾರ್ಕ್ ಹಗರಣ

## ಬೆಂಗಳೂರಿನ ಗೋಡೌನ್‌ನಲ್ಲಿ ಕಾರ್ಕಳ ಪೊಲೀಸರಿಂದ ಮಹಜರು

**ಬೆಂಗಳೂರು:** ಕಾರ್ಕಳ ಪರಶುರಾಮ ಥೀಮ್ ಪಾರ್ಕ್ ಹಗರಣ ಸಂಬಂಧ ಬೆಂಗಳೂರಿನ ಗೋಡೌನ್‌ನಲ್ಲಿ ಕಾರ್ಕಳ ಪೊಲೀಸರು ಸ್ಥಳ ಮಹಜರು ಮಾಡಿದ್ದಾರೆ.

ಬೆಂಗಳೂರಿಗೆ ಆಗಮಿಸಿದ ಕಾರ್ಕಳ ಟೌನ್ ಠಾಣೆ ಪೊಲೀಸರ ತಂಡ ಕೆಂಗೇರಿ ಬಳಿಯ ಗೋಡೌನ್‌ನಲ್ಲಿ ಸ್ಥಳಮಹಜರು ನಡೆಸಿದ್ದಾರೆ. ಕೆಂಗೇರಿ ಬಳಿಯ ಗೋಡೌನ್‌ನಲ್ಲಿ ಸಂಗ್ರಹಿಸಿದ್ದ ಪ್ರತಿಮೆಗೆ ಬೇಕಾದ ವಸ್ತುಗಳು ಸೇರಿದಂತೆ ಪ್ರತಿಮೆ ನಿರ್ಮಾಣಕ್ಕೆ ಬಳಸಿದ್ದ ವಸ್ತುಗಳ ಪರಿಶೀಲನೆ ನಡೆಸಿದ್ದಾರೆ. ಪರಶುರಾಮ ಮೂರ್ತಿ ನಿರ್ಮಾಣದ ಬಗ್ಗೆ ವಿವಾದ ಕೇಳಿ ಬಂದ ಹಿನ್ನೆಲೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಕಾರ್ಕಳ ಟೌನ್



ಪೊಲೀಸರು ಈ ಕುರಿತು ತನಿಖೆ ನಡೆಸುತ್ತಿದ್ದಾರೆ.

**ಏನಿದು ಪ್ರಕರಣ :** ಕಾರ್ಕಳ ಮಾಜಿ ಸಚಿವ, ಹಾಲಿ ಶಾಸಕ ಸುನೀಲ್ ಕುಮಾರ್ ಪರಶುರಾಮ ಥೀಮ್ ಪಾರ್ಕ್ ನಿರ್ಮಿಸಿದ್ದರು. ಕಾಮಗಾರಿ ಪೂರ್ಣಗೊಳ್ಳದೇ ಈ ಥೀಮ್ ಪಾರ್ಕ್ ಉದ್ಘಾಟನೆ ಮಾಡಲಾಗಿದೆ ಎಂದು ಕಾಂಗ್ರೆಸ್ ಆರೋಪಿಸಿತ್ತು. ಪುಟ 2

### ಸೋಮಾಲಿಯಾದ ಹೋಟೆಲ್‌ನಲ್ಲಿ ಆತ್ಮಾಹುತಿ ಬಾಂಬ್ ದಾಳಿ

# 32 ಮಂದಿ ಸಾವು, 63 ಜನರಿಗೆ ಗಾಯ

**ಸೋಮಾಲಿ:** ಸೋಮಾಲಿಯಾದ ರಾಜಧಾನಿ ಮೊಗಾದಿಶುವಿನ ಬೀಚ್ ಹೋಟೆಲ್ ನಲ್ಲಿ ಆತ್ಮಾಹುತಿ ಬಾಂಬ್ ದಾಳಿ ನಡೆದಿದ್ದು, ಪರಿಣಾಮ 32 ಮಂದಿ ಸಾವನ್ನಪ್ಪಿದ್ದು, 63 ಜನರು ಗಾಯಗೊಂಡಿದ್ದಾರೆ. ಅಲ್-ಖೈದಾದ ಪೂರ್ವ ಆಫ್ರಿಕಾದ ಅಂಗಸಂಸ್ಥೆ ಅಲ್-ಶಬಾಬ್ ತನ್ನ ರೇಡಿಯೋ ಸ್ಟೇಷನ್ ಮೂಲಕ ತನ್ನ ಹೋರಾಟಗಾರರು ದಾಳಿ ನಡೆಸಿದ್ದಾರೆ ಎಂದು ಹೇಳಿದೆ.

ದಾಳಿಯಲ್ಲಿ ಓರ್ವ ಯೋಧ ಸಾವನ್ನಪ್ಪಿದ್ದು, ಉಳಿದವರು ನಾಗರಿಕರು ಎಂದು ಪೊಲೀಸ್ ವಕ್ತಾರ ಮೇಜರ್ ಅಬ್ದಿಫತಾ ಆದಾನ್ ಹಸನ್ ಪತ್ರಕರ್ತರಿಗೆ ತಿಳಿಸಿದ್ದಾರೆ. ದಾಳಿಯಲ್ಲಿ ಮತ್ತೊಬ್ಬ ಯೋಧ ಕೂಡ ಗಾಯಗೊಂಡಿದ್ದಾರೆ ಎಂದು ಹಾಸನ ತಿಳಿಸಿದ್ದಾರೆ. ಪ್ರತ್ಯಕ್ಷದರ್ಶಿಗಳು ಸ್ಫೋಟದ ನಂತರ ಗುಂಡಿನ ದಾಳಿಯೂ ನಡೆದಿರುವುದಾಗಿ ತಿಳಿಸಿದ್ದಾರೆ.

ಸೊಮಾಲಿಯಾದಲ್ಲಿ ಅಂತಾರಾಷ್ಟ್ರೀಯ ಬೆಂಬಲ ಪಡೆದಿರುವ ಫೆಡರಲ್ ಸರ್ಕಾರದ ವಿರುದ್ಧ ಬಂಡೆದ್ದಿರುವ ಅಲ್ ಖೈದಾದ ಜತೆ ಸಂಪರ್ಕವಿರುವ ಅಲ್ -ಶದಾಬ್ ಈ ದಾಳಿಯ ಹೊಣೆ ಹೊತ್ತುಕೊಂಡಿದೆ.



ಓರ್ವ ಪ್ರತ್ಯಕ್ಷದರ್ಶಿ ಮೊಹಮ್ಮದ್ ಮೊಲಿದ್ ಎಂಬುವವರು, ಆ ವ್ಯಕ್ತಿ ಹೋಟೆಲ್ ನನ್ನು ತನ್ನನ್ನು ತಾನು ಸ್ಫೋಟಿಸಿಕೊಳ್ಳುವುದಕ್ಕೂ ಮುನ್ನ ಸ್ಫೋಟಕ ಉಡುಪನ್ನು ಧರಿಸಿದ ದಾಳಿಕೋರನನ್ನು ತಾನು ನೋಡಿದ್ದಾಗಿ ವಿವರಿಸಿದ್ದಾರೆ.

ಹೋಟೆಲ್ ನಲ್ಲಿ ಅವರೊಂದಿಗಿದ್ದ ಕೆಲವು ಸ್ನೇಹಿತರು ಸಾವನ್ನಪ್ಪಿದ್ದಾರೆ ಮತ್ತು ಇತರರು ಗಾಯಗೊಂಡಿದ್ದಾರೆ. ಕಳೆದ ವರ್ಷ ನಡೆದ ದಾಳಿಯಲ್ಲಿ 9 ಮಂದಿ ಸಾವನ್ನಪ್ಪಿದ್ದರು. ಅಲ್ ಶಬಾಬ್ ದಕ್ಷಿಣ ಮತ್ತು ಮಧ್ಯ ಸೊಮಾಲಿಯಾದ ಭಾಗಗಳನ್ನು ನಿಯಂತ್ರಿಸುತ್ತಿದೆ.

### 1993 ಮುಂಬೈ ಸ್ಫೋಟ ಅಪರಾಧಿ ಅಬು ಸಲೇಂನನ್ನು ದೆಹಲಿಯಿಂದ ಮನ್ಮಾಡ್‌ಗೆ ರೈಲಿನಲ್ಲಿ

## ಕರೆತಂದ ಪೊಲೀಸರು

**ಮುಂಬೈ:** 1993ರ ಮುಂಬೈ ಬಾಂಬ್ ಸ್ಫೋಟದ ಪ್ರಮುಖ ಅಪರಾಧಿ ಅಬು ಸಲೇಂನನ್ನು ಪೊಲೀಸರು ದೆಹಲಿಯಿಂದ ಮನ್ಮಾಡ್ ಗೆ ರೈಲಿನಲ್ಲಿ ಕರೆತಂದಿದ್ದಾರೆ. ಈ ವಿಡಿಯೋ ಎಲ್ಲೆಡೆ ವೈರಲ್ ಆಗುತ್ತಿದೆ, ಮನ್ಮಾಡ್ ನಿಲ್ದಾಣದಲ್ಲಿ ಇಳಿದ ನಂತರ ಅವರನ್ನು ಪೊಲೀಸ್ ವ್ಯಾನ್‌ನಲ್ಲಿ ನಾಸಿಕ್ ರಸ್ತೆಯ ಕೇಂದ್ರ ಕಾರಾಗೃಹಕ್ಕೆ ಕರೆದೊಯ್ಯಲಾಯಿತು.

ಸಲೇಂನನ್ನು ಮನ್ಮಾಡ್‌ಗೆ ಕರೆತರಲಾಗುತ್ತಿದೆ ಎನ್ನುವ ಮಾಹಿತಿಯನ್ನು ಪೊಲೀಸರು ಗೌಪ್ಯವಾಗಿಟ್ಟಿದ್ದರು. ಪೊಲೀಸರು ಸಲೇಂ ಜತೆಗೆ ರೈಲು



ನಿಲ್ದಾಣಕ್ಕೆ ಬಂದಿಳಿದ ಕೂಡಲೇ ಆತನನ್ನು ನೋಡಲು ಜನಸಮೂಹವೇ ನೆರೆದಿತ್ತು. ಪುಟ 2

## ಮಿತಿ ಮೀರಿದ ಕಳ್ಳರ ಹಾವಳಿ

### ಆನ್‌ಲೈನ್ ಡೆಲಿವರಿ ಬಾಯ್‌ಗಳೇ ಟಾರ್ಗೆಟ್

**ಬೆಂಗಳೂರು:** ಬೆಂಗಳೂರಿನಲ್ಲಿ ಕಳ್ಳರ ಹಾವಳಿ ಮಿತಿ ಮೀರಿದ್ದು, ಆನ್‌ಲೈನ್ ಡೆಲಿವರಿ ನೀಡುವವರೇ ಇವರ ಮುಖ್ಯ ಟಾರ್ಗೆಟ್. ಭಯವಿಲ್ಲದೆ ಗಾಡಿ ನಿಲ್ಲಿಸಿದರೆ ಕಳ್ಳರ ಕಾಟ ತಪ್ಪಿದ್ದಲ್ಲ. ಹೀಗಾಗಿ ಆಲ್‌ಲೈನ್ ಡೆಲಿವರಿ ಮಾಡುವವರು ಎಚ್ಚರಿಕೆವಹಿಸಬೇಕು ಎಂದು ಪೊಲೀಸರು ತಿಳಿಸಿದ್ದಾರೆ.

ಡೆಲಿವರಿ ನೀಡುವ ಭರದಲ್ಲಿ ಎಲ್ಲೆಂದರಲ್ಲಿ ಗಾಡಿ ನಿಲ್ಲಿಸಿದರೆ ಕ್ಷಣ ಮಾತ್ರದಲ್ಲಿ ಬ್ಯಾಗ್ ಮಾಯವಾಗುತ್ತದೆ. ವೈಟ್ ಫೀಲ್ಡ್ ಭಾಗದಲ್ಲಿ ಆ. 1ರಂದು ರಸ್ತೆ ಪಕ್ಕ ನಿಂತಿದ್ದ ಡೆಲಿವರಿ ಬಾಯ್ ಬೈಕ್‌ನಲ್ಲಿದ್ದ ಬ್ಯಾಗ್ ಅನ್ನು ಖದೀಮರು ಹಾಡಹಗಲೇ ಎಗರಿಸಿದ್ದಾರೆ. ಈ ಬಗ್ಗೆ ಪೊಲೀಸ್ ಇಲಾಖೆಗೆ ಟ್ಯಾಗ್ ಮಾಡಿ ಸಾರ್ವಜನಿಕರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ. ಪುಟ 2



## ಕರಾವಳಿಗೆ ಆರೆಂಜ್ ಮಲೆನಾಡಿಗೆ ಯೆಲ್ಲೋ ಅಲರ್ಟ್

**ಬೆಂಗಳೂರು:** ನೈರುತ್ಯ ಮುಂಗಾರು ಮತ್ತೆ ಸಕ್ರಿಯವಾಗಿದೆ. ಕರಾವಳಿ ಭಾಗದಲ್ಲಿ ಗುಡುಗು ಸಹಿತ ಭಾರೀ ಮಳೆಯಾಗಲಿದ್ದು, ಮಲೆನಾಡಿನಲ್ಲಿ ವ್ಯಾಪಕ ಮಳೆಯಾಗುವ ಸಾಧ್ಯತೆ ಇದೆ. ಉತ್ತರ ಒಳನಾಡಿನ ಚದುರಿದಂತೆ ಹಗುರದಿಂದ ಲಘು ಮಳೆಯಾಗುವ ಸಾಧ್ಯತೆಯಿದೆ. ಪ್ರತ್ಯೇಕ ಸ್ಥಳಗಳಲ್ಲಿ ಮಧ್ಯಮ ಮಳೆಯಾಗುವ ಸಾಧ್ಯತೆಯಿದೆ. ದಕ್ಷಿಣ ಒಳನಾಡಿನ ಪ್ರತ್ಯೇಕವಾಗಿ ಚದುರಿದಂತೆ ಹಗುರದಿಂದ ಕೂಡಿದ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆಯನ್ನು ನೀಡಿದೆ.



ಮಲೆನಾಡಿನ ಚಿಕ್ಕಮಗಳೂರು, ಶಿವಮೊಗ್ಗ, ಹಾಸನ, ಕೊಡಗಿನಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಪ್ರತ್ಯೇಕವಾಗಿ ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಕರಾವಳಿಯ ದಕ್ಷಿಣ ಕನ್ನಡದಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಉಡುಪಿ, ಉತ್ತರ ಕನ್ನಡದಲ್ಲಿ ಸಾಧಾರಣ ಮಳೆಯಾಗಲಿದೆ. ಪುಟ 2

### ವಯನಾಡು ದುರಂತ

## ಪ್ರೈವೇಟ್ ಟ್ರಾವೆಲ್ಸ್ ಏಜೆನ್ಸಿಗಳಿಗೆ ಭಾರೀ ನಷ್ಟ

**ಬೆಂಗಳೂರು:** ಮಳೆಗಾಲದಲ್ಲಿ ದೇವರ ನಾಡು ಕೇರಳ ಸೌಂದರ್ಯ ಸವಿಯಬೇಕೇ ಬೆಂಗಳೂರು ವಯನಾಡ್-ಮುನ್ನಾರ್-ಕೊಚ್ಚಿ- ಅತಿರಪಲ್ಲಿ ಪ್ರವಾಸ ಎಂಜಾಯ್ ಮಾಡೋಬೇಕು ಅಂತಾ ರಾಜಧಾನಿ ಬೆಂಗಳೂರಿನ ಜನರು ಪ್ರತಿ ವರ್ಷ ಪ್ಲಾನ್ ಮಾಡ್ತಾರೆ.

ಆದರೆ ಈ ವರ್ಷ ವಯನಾಡು ಭೂ ಕುಸಿತ ಹಿನ್ನಲೆ ಪ್ರವಾಸೋದ್ಯಮ ದಿಢೀರ್ ಕುಸಿತ ಕಂಡಿದೆ. ರಾಜಧಾನಿಯಿಂದ ಕೇರಳ ವಯನಾಡು ಮುನ್ನಾರ್ ಪ್ರವಾಸಕ್ಕೆ ಬುಕ್ಕಿಂಗ್ ಆಗಿದ್ದ ಸಂಪೂರ್ಣ ಟಿಕೆಟ್‌ಗಳು ಕ್ಯಾನ್ಸಲ್ ಆಗಿದ್ದು ಪ್ರವಾಸೋದ್ಯಮ ಹಾಗೂ ಖಾಸಗಿ ಟೂರಿಸ್ಟ್ ಮಾಲೀಕರು ಮತ್ತು ಬಸ್ ಮಾಲೀಕರಿಗೆ ಆರ್ಥಿಕ ಸಂಕಷ್ಟ ತಂದಿದೆ.

**ಟೂರಿಸ್ಟ್ ಮಾಲೀಕರಿಗೆ ಆರ್ಥಿಕ ಸಂಕಷ್ಟ ತಂದಿಟ್ಟ ವಯನಾಡು ಭೂ ಕುಸಿತ:** ಮಳೆಗಾಲದಲ್ಲಿ ಅತಿ ಹೆಚ್ಚು ಜನರು ವಯನಾಡು ಟ್ರಿಪ್‌ಗೆ ಬುಕ್ಕಿಂಗ್ ಮಾಡ್ತಾರೆ. ವಯನಾಡು ಜೊತೆಗೆ ಮುನ್ನಾರ್-ಕೊಚ್ಚಿ- ಅತಿರಪಲ್ಲಿ ಊಟಿ ಪ್ರವಾಸ ಪ್ಲಾನ್ ಮಾಡ್ತಾರೆ. ಆದರೆ ಭೂ ಕುಸಿತದ ಬಳಿಕ ಎಲ್ಲ ಬುಕ್ಕಿಂಗ್ ಕ್ಯಾನ್ಸಲ್ ಆಗಿದ್ದು ಶೇ 90% ಕೇರಳ ಬುಕ್ಕಿಂಗ್ ಎಲ್ಲವೂ ರದ್ದಾಗಿದೆ. ಇನ್ನು ಮಳೆಗಾಲದಲ್ಲಿ



ವಯನಾಡು ಸೇರಿದ್ದಂತೆ ಕೇರಳ ಪ್ರವಾಸಿ ತಾಣಗಳಿಗೆ ಹೆಚ್ಚು ಬುಕ್ಕಿಂಗ್ ಬರುತ್ತೆ ಅಂತಾ ಮೊದಲೆ 90 ದಿನಗಳಿಗೆ 4 ಲಕ್ಷ ಕೇರಳ ಹಾಗೂ ಕರ್ನಾಟಕ ಟ್ಯಾಕ್ಸ್ ಕಟ್ಟಿ ಪರ್ಮಿಟ್ ಪಡೆದಿದ್ದ ಬಸ್ ಮಾಲೀಕರಿಗೆ ಈಗ ಸಂಕಷ್ಟ ತಂದಿದೆ. ಯಾಕಂದ್ರೆ ಎಲ್ಲ ಬುಕ್ಕಿಂಗ್ ಕ್ಯಾನ್ಸಲ್ ನಿಂದ ಕಟ್ಟಿದ್ದ ಎಲ್ಲ ಟ್ಯಾಕ್ಸ್ ಹಣ ನಷ್ಟ ಆಗಿದೆ ಎಂದು ಶ್ರೀ ಶಕ್ತಿ ಟ್ರಾವೆಲ್ಸ್ ಮಾಲೀಕ ಚಂದ್ರು ಸಮಸ್ಯೆ ಹೇಳಿಕೊಂಡಿದ್ದಾರೆ.

**ಕರ್ನಾಟಕದಲ್ಲಿಯೂ ಕುಸಿತ ಕಂಡ ಪ್ರವಾಸೋದ್ಯಮ:** ಕಳೆದ ಒಂದು ವಾರದಿಂದ ರಾಜ್ಯದಲ್ಲಿಯೂ ವ್ಯಾಪಕ ಮಳೆ ಹಿನ್ನಲೆ ಬಹುತೇಕ ಪ್ರವಾಸಿ ತಾಣಗಳಿಗೆ ನಿರ್ಬಂಧ ಹೇರಲಾಗಿದೆ. ಹೀಗಾಗಿ ಚಿಕ್ಕಮಗಳೂರು, ಮಡಿಕೇರಿ, ಮಂಗಳೂರು ಟೂರ್ ಬುಕ್ಕಿಂಗ್ ರದ್ದಾಗಿದ್ದು ಟ್ಯಾಕ್ಸಿ ಮಾಲೀಕರಿಗೂ ಸಮಸ್ಯೆ ಎದುರಾಗಿದೆ. ಪುಟ 2

### ಭೂಕುಸಿತದಲ್ಲಿ ಸಿಲುಕಿರುವ ಪ್ರಾಣಿಗಳ ರಕ್ಷಣೆ

## ಸುರಕ್ಷತೆಗೆ ಕಂಟ್ರೋಲ್ ರೂಂ

**ವಯನಾಡ:** ಕೇರಳದ ವಯನಾಡಿನಲ್ಲಿ ಸಂಭವಿಸಿದ ಭೂಕುಸಿತದಲ್ಲಿ ಸಿಲುಕಿರುವ ಪ್ರಾಣಿಗಳ ರಕ್ಷಣೆಗಾಗಿ ಕೇರಳ ಸರ್ಕಾರವು ಕಂಟ್ರೋಲ್ ರೂಂ ತೆರೆದಿದೆ. ಭೂಕುಸಿತದಲ್ಲಿ ಸಿಲುಕಿರುವ ಜಾನುವಾರುಗಳು ಸೇರಿದಂತೆ ಈ ಪ್ರಾಣಿಗಳು ಇನ್ನು ಮುಂದೆ ಅನಾಥವಾಗುವುದಿಲ್ಲ ಎಂದು ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಹೇಳಿದ್ದಾರೆ.

ಗಾಯಗೊಂಡ ಜಾನುವಾರುಗಳಿಗೆ ಅಗತ್ಯ ಚಿಕಿತ್ಸೆ ನೀಡಿದ ನಂತರ, ಅವುಗಳನ್ನು ಸ್ವಾಧೀನಪಡಿಸಿಕೊಳ್ಳಲು ಸಿದ್ಧರಿರುವ ಸಮೀಪದ ಪ್ರದೇಶಗಳ ಹೈನುಗಾರರಿಗೆ ಪ್ರಾಣಿ ಕಲ್ಯಾಣ ಇಲಾಖೆ ಹಸ್ತಾಂತರಿಸಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಎನ್‌ಜಿಒಗಳು ಮತ್ತು ಸ್ವಯಂಸೇವಕರ ಮೂಲಕ ಪ್ರಾಣಿಗಳಿಗೆ ಆಹಾರ ಮತ್ತು ನೀರನ್ನು ಒದಗಿಸುತ್ತಿವೆ. ಚೂರಲ್ಮಲಾ ದುರಂತದ ಸ್ಥಳದಿಂದ ಚೇತರಿಸಿಕೊಂಡ



ಎರಡು ಸಣ್ಣ ನಾಯಿಗಳನ್ನು ಮಿಲಿಟರಿ ಮತ್ತು ಪೊಲೀಸ್ ವಿಶೇಷ ರಕ್ಷಣಾ ತಂಡಕ್ಕೆ ಹಸ್ತಾಂತರಿಸಲಾಯಿತು. ಚೂರಲ್ಮಳ, ಮುಂಡಕ್ಕೈ ಸೇರಿದಂತೆ ವಿಕೋಪ ಪೀಡಿತ ಸ್ಥಳಗಳಲ್ಲಿ ಜೀವಂತವಾಗಿ ಮತ್ತು ಸತ್ತಿರುವ ಸಾಕುಪ್ರಾಣಿಗಳು ಮತ್ತು ಪಕ್ಷಿಗಳನ್ನು ನಿಯಂತ್ರಣ ಕೊಠಡಿಗೆ ಕರೆತಂದು ಮುಂದಿನ ಕ್ರಮ ಕೈಗೊಳ್ಳಲಾಗುವುದು. ಇದೇ ವೇಳೆ ಪಶು ವೈದ್ಯಾಧಿಕಾರಿಗಳು, ಕ್ಷೇತ್ರಾಧಿಕಾರಿಗಳನ್ನೊಳಗೊಂಡ ತಂಡ 2 ಬ್ಯಾಚ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. ಪುಟ 2

## ಬಿಜೆಪಿ ನಾಯಕ ವಿವಾದಾತ್ಮಕ ಹೇಳಿಕೆ

**ವಯನಾಡು/ಜೈಪುರ:** ಭೀಕರ ಭೂಕುಸಿತಕ್ಕೆ ದೇವರನಾಡೇ ನಲುಗಿ ಹೋಗಿದೆ. ಸಾವಿನ ಸುರಿಮಳೆಗೆ ವಯನಾಡಲ್ಲಿ ಮೃತರ ಸಂಖ್ಯೆ 350ರ ಗಡಿ ದಾಟಿದ್ದು, 6ನೇ ದಿನಕ್ಕೆ ಸೇನಾ ಕಾರ್ಯಾಚರಣೆ ಕಾಲಿಟ್ಟಿದೆ.



ಘಟನಾ ಸ್ಥಳಗಳಲ್ಲಿ ಹೃದಯವಿದ್ರಾವಕ ದೃಶ್ಯಗಳು ಕಣ್ಣಿಗೆ ರಾಚುತ್ತಿವೆ. ಇಡೀ ದೇಶವನ್ನೇ ಈ ದೃಶ್ಯ ಕಂಡು ಕಂಬನಿ ಮಿಡಿದಿದೆ. ಆದ್ರೆ ರಾಜಸ್ಥಾನದ ಬಿಜೆಪಿ ನಾಯಕರೊಬ್ಬರು ನೀಡಿರುವ ಹೇಳಿಕೆ ಭಾರೀ ಆಕ್ರೋಶಕ್ಕೆ ಕಾರಣವಾಗಿದೆ. ಪುಟ 2

# ಡಿಕೆ ಶಿವಕುಮಾರ ಬಗ್ಗೆ ಮಾತಾಡದಿದ್ರೆ, ಕುಮಾರಸ್ವಾಮಿಗೆ ತಿಂದಿದ್ದು ಅರಗುವುದಿಲ್ಲ

**ಬೆಂಗಳೂರು:** ಮುಡಾ ಹಗರಣ ಎಂದು ನಮ್ಮ ಮೇಲೆ ಆರೋಪ ಮಾಡಿ ಏನೂ ಬಿಂಬಿಸಲು ಹೊರಟಿದೆ. ಅವರ ಹಗರಣವನ್ನ ನಮ್ಮ ಮೂತಿಗೆ ಒರೆಸುವ ಕೆಲಸ ಮಾಡ್ತಿದ್ದಾರೆ ಎಂದು ಮಾಜಿ ಸಂಸದ ಡಿಕೆ ಸುರೇಶ್ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.



ಮಾಧ್ಯಮಗಳೊಂದಿಗೆ ಮಾತನಾಡಿದದ ಅವರು, ಬಿಜೆಪಿ-ಜೆಡಿಎಸ್ ಕುತಂತ್ರವನ್ನ ಜನರು ಅರ್ಥ ಮಾಡಿಕೊಳ್ಳಬೇಕು. ಹಾಗಾಗಿ ನಾವು ಜನಾಂದೋಲನ ಕಾರ್ಯಕ್ರಮ ಮಾಡಿದ್ದೇವೆ. ನಮ್ಮ ಮೇಲೆ ಆರೋಪ ಸಿಎಂ ಸಿದ್ದರಾಮಯ್ಯರ ವಿರುದ್ಧ ರಾಜ್ಯಪಾಲರ ನೋಟಿಸ್ ನೀಡಿರುವುದು ದುರುದ್ದೇಶದಿಂದ ನೀಡಲಾಗಿದೆ. ರಾಜ್ಯಪಾಲರು ತಮ್ಮ ಹುದ್ದೆ ದುರುಪಯೋಗ ಮಾಡಿಕೊಳ್ಳುತ್ತಿದ್ದಾರೆ. ಕೇಂದ್ರ, ಬಿಜೆಪಿ ಎಷ್ಟರಪಟ್ಟಿಗೆ ಅಧಿಕಾರ ದುರುಪಯೋಗ ಮಾಡಿಕೊಳ್ತಿದೆ ಅಂತಾ ಇದರಿಂದ ಗೊತ್ತಾಗುತ್ತಿದೆ ಎಂದರು. ಪ್ರಾಸಿಕ್ಯೂಷನ್ ನೀಡಲು ಅವರ ಬಳಿ ಇನ್ನು ಅನೇಕ ಅರ್ಜಿಗಳಿವೆ. ಆದರೆ ಇದಕ್ಕೇ ಯಾಕೆ ಅಷ್ಟೊಂದು ಪ್ರಾಮುಖ್ಯತೆ ನೀಡಬೇಕು ಒಬ್ಬ ಖಾಸಗಿ ವ್ಯಕ್ತಿ ಕೊಟ್ಟಿರೋ ಅರ್ಜಿಗೆ ನೋಟಿಸ್ ಕೊಟ್ಟಿದ್ದಾರೆ. ಇದು ಆ ಹುದ್ದೆಗೆ ಗೌರವ ತರುವಂತದ್ದಲ್ಲ. ಸಚಿವ ಸಂಪುಟದಲ್ಲಿ ಈ ಬಗ್ಗೆ ನಾಯಕರು ಉತ್ತರ ಕೊಟ್ಟಿದ್ದಾರೆ ಎಂದರು. ಇದೇ ಕೇಂದ್ರ, ಸಚಿವ ಕುಮಾರಸ್ವಾಮಿ ವಿರುದ್ಧ ಹರಿಹಾಯ್ದ ಮಾಜಿ ಸಂಸದರು. ಕುಮಾರಸ್ವಾಮಿಗೆ ಡಿಕೆ ಶಿವಕುಮಾರ ವಿಚಾರ ಮಾತನಾಡದಿದ್ರೆ ನಿದ್ದೆ ಬರೊಲ್ಲ, ಊಟ ಸೇರಲ್ಲ ಅದಕ್ಕಾಗಿ ಪದೇಪದೆ ಅವರ ಬಗ್ಗೆ ಮಾತಾಡ್ತಾರೆ. ಅವರಿಗೆ ಪಿಕ್ಚರ್ ತೆಗೆದು ಅಭ್ಯಾಸ ಇದೆ. ಅವರು ಪ್ರೊಡ್ಯೂಸರ್, ನಟನೆ, ಹಂಚಿಕೆ ಎಲ್ಲವೂ ಗೊತ್ತಿದೆ. ಹಾಗಾಗಿ ಸುಳ್ಳನ್ನು ಸತ್ಯ ಮಾಡುವುದು ಅವರಿಗೆ ಗೊತ್ತಿದೆ ಎಂದು ವಾಗ್ದಾಳಿ ನಡೆಸಿದರು.

# ವಯನಾಡು ಸಂತ್ರಸ್ತರಿಗೆ ಕರ್ನಾಟಕದಿಂದ 100 ಮನೆ ನಿರ್ಮಾಣ



**ಬೆಂಗಳೂರು:** ವಯನಾಡು ಸಂತ್ರಸ್ತರಿಗೆ 100 ಮನೆಗಳನ್ನು ನಿರ್ಮಿಸಿಕೊಡುವುದಾಗಿ ಕರ್ನಾಟಕ ಸರ್ಕಾರ ಘೋಷಿಸಿದೆ. ಸಿಎಂ ಸಿದ್ದರಾಮಯ್ಯನವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿ ಈ ಮಹತ್ವದ ನಿರ್ಧಾರ ತಿಳಿಸಿದ್ದಾರೆ.

**ಪೋಸ್ಟ್‌ನಲ್ಲಿ ಏನಿದೆ :** ವಯನಾಡಿನಲ್ಲಿ ಸಂಭವಿಸಿದ ದುರಂತ ಭೂಕುಸಿತದ ಬೆಳಕಿನಲ್ಲಿ, ಕರ್ನಾಟಕವು ಕೇರಳದೊಂದಿಗೆ ಒಗ್ಗಟ್ಟಿನಿಂದ ನಿಂತಿದೆ. ನಾನು ಕೇರಳ ಸಿಎಂ ಪಿಣರಾಯಿ ವಿಜಯನ್ ಜೊತೆ ಮಾತನಾಡಿ ಬೆಂಬಲ ವ್ಯಕ್ತಪಡಿಸಿದ್ದೇನೆ. ಕರ್ನಾಟಕವು ಸಂತ್ರಸ್ತರಿಗೆ 100 ಮನೆಗಳನ್ನು ನಿರ್ಮಿಸಿ ಕೊಡಲಿದೆ. ಒಟ್ಟಾಗಿ ನಾವು ಪುನರ್ ನಿರ್ಮಾಣ ಮಾಡುತ್ತೇವೆ ಮತ್ತು ಭರವಸೆಯನ್ನು ಪುನಃಸ್ಥಾಪಿಸುತ್ತೇವೆ.

# ಮುಡಾ ಹಗರಣದಲ್ಲಿ ನೈತಿಕ ಹೊಣೆ ಹೊತ್ತು ಸಿಎಂ ರಾಜೀನಾಮೆ ಕೊಡಬೇಕು



**ಬೆಂಗಳೂರು:** ಮುಡಾ ಹಗರಣದ ಕಾರಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಹೇಳಿದ್ದಾರೆ.

ಈ ಕುರಿತು ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಸರ್ಕಾರದ ಭ್ರಷ್ಟಾಚಾರ ವಿರುದ್ಧ ಐತಿಹಾಸಿಕ ಪಾದಯಾತ್ರೆ ಹಮ್ಮಿಕೊಂಡಿದ್ದೇವೆ. ಬೆಂಗಳೂರಿನಿಂದ ಮೈಸೂರಿನವರೆಗೂ ಪಾದಯಾತ್ರೆ ನಡೆಸುತ್ತೇವೆ. ಪ್ರತಿಯೊಂದು ಕಡೆ 8 ರಿಂದ 10 ಸಾವಿರ ಜನ ಸೇರುತ್ತಾರೆಂಬ ವಿಶ್ವಾಸ ಇದೆ. ಸಿದ್ದರಾಮಯ್ಯ ಅವರಿಗೆ ಇದು ಕೊನೆ ಅವಕಾಶ. ಅವರೇ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ರಾಜೀನಾಮೆ ಅವರಾಗಿಯೇ ಕೊಟ್ಟರೆ ಅವರಿಗೆ ಅದು ಶೋಭೆ ತರುತ್ತದೆ, ಪಕ್ಷಕ್ಕೆ ಗೌರವ ಸಿಗುತ್ತದೆ. ಇಲ್ಲದಿದ್ದರೆ ಅನಿವಾರ್ಯವಾಗಿ ರಾಜ್ಯಪಾಲರೇ ಕ್ರಮ ತೆಗೆದುಕೊಳ್ಳಬಹುದು. ಇದಕ್ಕೆ ಅವಕಾಶ ಕೊಡದೇ ಸಿದ್ದರಾಮಯ್ಯ ರಾಜೀನಾಮೆ ಕೊಡಲಿ ಎಂದು ನಾನು ಸಲಹೆ ಕೊಡುತ್ತೇನೆ ಎಂದರು.

ಸರ್ಕಾರದ ಭ್ರಷ್ಟಾಚಾರದ ಬಗ್ಗೆ ಜಗತ್ತಿಗೆ ವಾಸ್ತವ ಸ್ಥಿತಿ ತಿಳಿದಿದೆ. ಹೀಗಾಗಿ ಅವರು ಯಾವುದೇ ಆರೋಪಗಳಿಂದ ಮುಕ್ತಿ ಪಡೆಯಲು ಸಾಧ್ಯವಿಲ್ಲ. ರಾಜ್ಯಪಾಲ ಕಚೇರಿ ದುರ್ಬಳಕೆ ಎಂದು ಕಾಂಗ್ರೆಸ್ ಆರೋಪ ಮಾಡುತ್ತಿದೆ. ವಾಸ್ತವಿಕ ಸತ್ಯ ಸಂಗತಿ ದೇಶದ ಜನರಿಗೆ ಗೊತ್ತಿದೆ. ಈ ರೀತಿಯ ಆರೋಪ ಮಾಡುವುದರಿಂದ ಅವರು ಆರೋಪದಿಂದ ಮುಕ್ತ ಆಗಲು ಆಗುವುದಿಲ್ಲ. ಈ ರೀತಿಯ ಮಾತುಗಳಿಂದ ಅವರು ಬಚಾವ್ ಆಗಲು ಸಾಧ್ಯವಿಲ್ಲ ಎಂದು ಹೇಳಿದರು.

## ಮೈಸೂರು ಚಲೋ ಸಮಾವೇಶದಲ್ಲಿ ಕಾಣಿಸಿಕೊಳ್ಳದ ಪ್ರೀತಂ ಗೌಡ

**ಬೆಂಗಳೂರು:** ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಮುಡಾ) ನಿವೇಶನ ಹಂಚಿಕೆ ಹಗರಣ ರಾಜ್ಯ ರಾಜಕೀಯದಲ್ಲಿ ಸಂಚಲನ ಸೃಷ್ಟಿಸಿದೆ. ಈ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಕುಟುಂಬ ಭಾಗಿಯಾಗಿದೆ ಎಂಬ ಆರೋಪ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಕೂಡಲೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜಿನಾಮೆ ನೀಡಬೇಕೆಂದು ಬಿಜೆಪಿ ಮತ್ತು ಜೆಡಿಎಸ್ ಜಂಟಿಯಾಗಿ ಬೆಂಗಳೂರಿನಿಂದ ಮೈಸೂರಿನವರೆಗೆ ಪಾದಯಾತ್ರೆ ಆರಂಭಿಸಿವೆ. ಪಾದಯಾತ್ರೆ ಉದ್ಘಟನಾ ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ ಕಾಣಿಸಿಕೊಂಡಿಲ್ಲ. ಈ ಮೂಲಕ ಕೇಂದ್ರ, ಸಚಿವ ಹೆಚ್‌ಡಿ ಕುಮಾರಸ್ವಾಮಿ ಅವರ ಷರತ್ತನ್ನು ಬಿಜೆಪಿ ಪಾಲಿಸಿದೆ.



**ಏನದು ಷರತ್ತು, ಪ್ರೀತಂ ಗೌಡ ಬರದೆ ಇರಲು ಕಾರಣವೇನು :** ರಾಜ್ಯ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ವಿರುದ್ಧ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜಿನಾಮೆ ಆಗ್ರಹಿಸಿ ಬಿಜೆಪಿ, ಜೆಡಿಎಸ್ ನಾಯಕರು ಮೈಸೂರು ಚಲೋ ಪಾದಯಾತ್ರೆ ನಡೆಸುತ್ತಿದ್ದಾರೆ. ಮೈಸೂರು ಚಲೋ ಪಾದಯಾತ್ರೆ ಸಿದ್ಧತೆ ಸಮಯದಲ್ಲೇ ಅಪಸ್ವರ ಕೇಳಿಬಂದಿತ್ತು. ಜೆಡಿಎಸ್ ನಾಯಕರು ಪಾದಯಾತ್ರೆಗೆ ಬೆಂಬಲ ಸೂಚಿಸುವುದಿಲ್ಲ ಎಂದು ಹೇಳಿದ್ದರು.

ಆರಂಭದಲ್ಲಿ ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿದೆ, ಹೀಗಾಗಿ ಪಾದಯಾತ್ರೆ ನಡೆಸುವುದು ಬೇಡ ಅಂತ ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್‌ಡಿ ಕುಮಾರಸ್ವಾಮಿ ಸೇರಿದಂತೆ ಎಲ್ಲ ಜೆಡಿಎಸ್ ನಾಯಕರು ಪುನರ್ ಉಚ್ಚರಿಸಿದ್ದರು. ಆದರೆ ಬಿಜೆಪಿ ಇದನ್ನು ಕಿವಿಗೆ ಹಾಕಿಕೊಳ್ಳದೆ ತಯಾರಿಯನ್ನು ಜೋರಾಗಿಯೇ ನಡೆಸಿತ್ತು. ಪಾದಯಾತ್ರೆಗೆ ಪೂರ್ವ ಸಿದ್ಧತೆ ಸಭೆಗೆ ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಆಹ್ವಾನಿಸಲಾಗಿತ್ತು. ಈ ಸಭೆಯಲ್ಲಿ ಬಿಜೆಪಿ ಮಾಜಿ ಶಾಸಕ ಪ್ರೀತಂ ಗೌಡ ಕೂಡ ಭಾಗಿಯಾಗಿದ್ದರು. ಅಲ್ಲದೆ, ಪಾದಯಾತ್ರೆ ಕೂಡ ಪ್ರೀತಂ ಗೌಡ ನೇತೃತ್ವದಲ್ಲೇ ನಡೆಯಲಿದೆ ಎಂಬ ಮಾತುಗಳು ಕೇಳಿ ಬಂದಿದ್ದವು.

ಪ್ರೀತಂ ಗೌಡ ನೇತೃತ್ವದಲ್ಲಿ ಪಾದಯಾತ್ರೆ ಮತ್ತು ಸಭೆಯಲ್ಲಿ ಭಾಗಿಯಾಗಿದ್ದಕ್ಕೆ ಮಾಜಿ ಮುಖ್ಯಮಂತ್ರಿ ಹೆಚ್‌ಡಿ ಕುಮಾರಸ್ವಾಮಿ ನಿಗಿ ನಿಗಿ ಕೆಂಡದಂತಾಗಿದ್ದರು. ಬಿಜೆಪಿ ವಿರುದ್ಧ ಬಹಿರಂಗವಾಗಿಯೇ ಆಕ್ರೋಶ ವ್ಯಕ್ತಪಡಿಸಿದ್ದರು.

**ಕುಮಾರಸ್ವಾಮಿ ಆಕ್ರೋಶಕ್ಕೆ ಕಾರಣ:** ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾಗಿರುವ ಅಶ್ಲೀಲ ವಿಡಿಯೋಗಳ ಪೆನ್‌ಡ್ರೈವ್ ಅನ್ನು ಪ್ರೀತಂ ಗೌಡ ಅವರು ತಮ್ಮ ಬೆಂಬಲಿಗರ ಮೂಲಕ ಹಂಚಿದ್ದಾರೆ. ದೇವೇಗೌಡರ ಕುಟುಂಬಕ್ಕೆ ವಿಷ ಹಾಕಲು ಹೊರಟಿದ್ದವರನ್ನು ಪಕ್ಕದಲ್ಲಿ ಕೂರಿಸಿಕೊಂಡಿದ್ದಾರೆ. ಮತ್ತು ಪಾದಯಾತ್ರೆ ಬಗ್ಗೆ ನಮಗೆ ಯಾವ ಮಾಹಿತಿ ನೀಡಲ್ಲ, ನಾವು ಪಾದಯಾತ್ರೆಗೆ ಬೆಂಬಲಿಸಲ್ಲ ಎಂದು ಬಹಿರಂಗವಾಗಿ ಹೇಳಿದ್ದರು.

**ಹೈಕಮಾಂಡ್ ರಾಜಿ ಸಂಧಾನ:** ಪಾದಯಾತ್ರೆಗೆ ಆರಂಭದಲ್ಲೇ ವಿಘ್ನ ಬಂದಿದ್ದರಿಂದ, ಎಚ್ಚತ್ತ ಬಿಜೆಪಿ ಹೈಕಮಾಂಡ್ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಮತ್ತು ಹೆಚ್‌ಡಿ ಕುಮಾರಸ್ವಾಮಿ ಅವರನ್ನು ದೆಹಲಿಗೆ ಕರೆಸಿಕೊಂಡು ರಾಜಿಸಂಧಾನ ಮಾಡಿದರು. ಈ ವೇಳೆ ಹೆಚ್‌ಡಿ ಕುಮಾರಸ್ವಾಮಿ ಹೈಕಮಾಂಡ್ ಮುಂದೆ ಪ್ರೀತಂ ಗೌಡ ಪಾದಯಾತ್ರೆಯಲ್ಲಿ ಭಾಗಿಯಾಗದಂತೆ ಷರತ್ತು ವಿಧಿಸಿದ್ದರು. ಅದರಂತೆ ಇದೀಗ ಮೈಸೂರು ಚಲೋ ಕಾರ್ಯಕ್ರಮದಲ್ಲಿ ಪ್ರೀತಂಗೌಡ ಭಾಗಿಯಾಗಲಿಲ್ಲ.

## ಬ್ಲ್ಯಾಕ್ ವೈಟ್ ಟಿವಿ, ಡಿವಿಡಿ ಇಟ್ಟುಕೊಂಡು ದೊಡ್ಡಾಲಹಳ್ಳಿಯಲ್ಲಿ ಏನು ಪ್ರದರ್ಶಿಸುತ್ತಿದ್ದರು



**ಬೆಂಗಳೂರು:** ಮುಡಾ ಹಗರಣ ಸಂಬಂಧ ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಹಾಗೂ ಜೆಡಿಎಸ್ ಜಂಟಿಯಾಗಿ ಮೈಸೂರಿಗೆ ಹಮ್ಮಿಕೊಂಡಿರುವ ಪಾದಯಾತ್ರೆಯ ಉದ್ಘಾಟನಾ ಸಮಾರಂಭದಲ್ಲಿ ಕೆಂಗೇರಿಯಲ್ಲಿ ಮಾತನಾಡಿದ ಕೇಂದ್ರ, ಸಚಿವ ಹೆಚ್‌ಡಿ ಕುಮಾರಸ್ವಾಮಿ ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ಪರೋಕ್ಷವಾಗಿ ವಾಗ್ದಾಳಿ ನಡೆಸಿದರು. ಜೈಲಿಗೆ ಹೋಗಲು ಸಿದ್ಧ ಎಂದು ಅವರೇ (ಡಿಕೆ ಶಿವಕುಮಾರ್ ಉದ್ದೇಶಿಸಿ) ಹೇಳಿದ್ದಾರೆ. ರಾಜಕಾರಣಕ್ಕೆ ಬರುವ ಮುಂಚೆ ಅವರ ಆಸ್ತಿ ಏನಿತ್ತು ಎಂಬುದನ್ನು ಅವರ ಗುರುಗಳು ಸೋಷಿಯಲ್ ಮೀಡಿಯಾದಲ್ಲಿ ಹೇಳಿದ್ದಾರೆ. ಬ್ಲಾಕ್ ಅಂಡ್ ವೈಟ್ ಟಿವಿ ಮತ್ತು ಡಿವಿಡಿ ಇಟ್ಟುಕೊಂಡು ದೊಡ್ಡಾಲಹಳ್ಳಿ ಮತ್ತು ಕೋಡಿ ಹಳ್ಳಿಯಲ್ಲಿ ಏನು ಪ್ರದರ್ಶನ ಮಾಡುತ್ತಿದ್ದರು, ಅದರಿಂದ ಏನು ಹಣ ಸಂಪಾದನೆ ಮಾಡುತ್ತಿದ್ದರು ಎಂಬುದಾಗಿ ಹೇಳಿದ್ದಾರೆ ಎಂದು ಕುಮಾರಸ್ವಾಮಿ ವ್ಯಂಗ್ಯವಾಡಿದರು.

ಪಾದಯಾತ್ರೆಯಲ್ಲಿ ಎರಡು ಪಕ್ಷಗಳ ಕಾರ್ಯಕರ್ತರು ಮಾತ್ರ ಇಲ್ಲ, ನಾಡಿನ ಜನರ ಅಭಿಪ್ರಾಯ ಇಲ್ಲಿದೆ. ನಿನ್ನೆ ಬಿಡದಿಯಲ್ಲಿ ಕಾಂಗ್ರೆಸ್‌ನವರು ನನಗೆ ಹಲವು ಪ್ರಶ್ನೆಗಳನ್ನು ಕೇಳಿದ್ದಾರೆ. ಅವರ ಪ್ರಶ್ನೆಗಳಿಗೆ ಬಿಡದಿ, ರಾಮನಗರದಲ್ಲಿ ಉತ್ತರ ಕೊಡುತ್ತೇನೆ ಎಂದು ಕುಮಾರಸ್ವಾಮಿ ತಿರುಗೇಟು ನೀಡಿದರು.

ಆಸ್ತಿ ಬಗ್ಗೆ ಹೇಳುವಂತೆ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಕೇಳಿದ್ದಾರೆ. ಅವರ ವಿರುದ್ಧ ದಾಖಲೆ ತೆಗೆದುಕೊಂಡು ಹೋಗಿ ಕೊಟ್ಟಿದ್ದೇನಂತೆ. ಜೈಲಿಗೆ ಹೋಗಲು ಸಿದ್ಧ ಎಂದಿದ್ದಾರೆ. ರಾಜಕಾರಣಕ್ಕೆ ಬರುವ ಮೊದಲು ಅವರ ವ್ಯವಹಾರ ಏನಿತ್ತು ಎಂಬುದನ್ನು ಅವರ ಗುರು ಸಾಮಾಜಿಕ ಮಾಧ್ಯಮದಲ್ಲಿ ಬಹಿರಂಗಪಡಿಸಿದ್ದಾರೆ ಎಂದು ಕುಮಾರಸ್ವಾಮಿ ಟೀಕಿಸಿದರು.

ಗೃಹ ಸಚಿವ ಪರಮೇಶ್ವರ್ ವಿರುದ್ಧವೂ ವಾಗ್ದಾಳಿ ನಡೆಸಿದ ಕುಮಾರಸ್ವಾಮಿ, ಪರಮೇಶಣ್ಣ ಯಾದಗಿರಿಯಲ್ಲಿ ನಿಮ್ಮ ಇಲಾಖೆಯ ಪಿಎಸ್‌ಐ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಉತ್ತರ ಕೊಡಿ. ಸಿದ್ದರಾಮಯ್ಯ ಹಿಂದೆ ಸಿಎಂ ಆಗಿದ್ದಾಗ ಡಿವೈಎಸ್ಪಿ ಕಲ್ಲಪ್ಪ ಹಂಡಿಭಾಗ್ ಆತ್ಮಹತ್ಯೆಗೆ ಯಾಕೆ ಶರಣಾದರು ಪೊಲೀಸ್ ಅಧಿಕಾರಿಗಳಿಗೆ ರಕ್ಷಣೆ ಕೊಡದ ಸರ್ಕಾರ ಹಿಂದುಳಿದ ವರ್ಗಗಳಿಗೆ ರಕ್ಷಣೆ ಕೊಡಲು ಸಾಧ್ಯವೇ ಎಂದು ಹಿಂದುಳಿದ ವರ್ಗಗಳ ಮುಖಂಡರು ತಿಳಿದುಕೊಳ್ಳಬೇಕು ಎಂದು ಹೇಳಿದರು.

# ಸಿದ್ದರಾಮಯ್ಯ, ಡಿಕೆಶಿಗೆ ತಾಕತ್ ಇದ್ರೆ ವಿಜಯೇಂದ್ರ ಭ್ರಷ್ಟಾಚಾರ ಹೊರಗೆ ತರಲಿ

**ವಿಜಯಪುರ:** ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್‌ಗೆ ಧಮ್, ತಾಕತ್ ಇದ್ರೆ ವಿಜಯೇಂದ್ರ ಭ್ರಷ್ಟಾಚಾರ ಹೊರಗೆ ತರಲಿ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸವಾಲು ಹಾಕಿದರು.



ವಿಜಯಪುರದಲ್ಲಿ ಮಾತನಾಡಿದ ಅವರು, ವಿಜಯೇಂದ್ರ ಕೊರೊನಾ ಸಂದರ್ಭದಲ್ಲಿ ಮಾಡಿದ ಭ್ರಷ್ಟಾಚಾರ ಹೊರಗೆ ಬರಲಿ. ಭ್ರಷ್ಟಾಚಾರ ಮಾಡಿದವರು ಭ್ರಷ್ಟಾಚಾರ ವಿರುದ್ಧ ಮಾಡುತ್ತಿರುವ ಹೋರಾಟಕ್ಕೆ ಬೆಂಬಲ ಇಲ್ಲ ಎಂದು ಬಿಜೆಪಿ ಪಾದಯಾತ್ರೆಗೆ ಟಾಂಗ್ ನೀಡಿದರು.

ಡಿಕೆಶಿ-ವಿಜಯೇಂದ್ರ ನಡುವೆ ಅಡ್ಜೆಸ್ಟ್‌ಮೆಂಟ್ ಇದೆ. ಅಡ್ಜೆಸ್ಟ್‌ಮೆಂಟ್ ಇದೆ ಅನ್ನೋದು 100% ನಿಜ. ಭೋವಿ, ತಾಂಡಾ ನಿಗಮಗಳ ತನಿಖೆ ಆಗಲಿ. ಭ್ರಷ್ಟ ಕುಟುಂಬವನ್ನ ಬಿಜೆಪಿ ಅಧ್ಯಕ್ಷರನ್ನಾಗಿ ಮುಂದುವರಿಸಬೇಡಿ. ಸಿದ್ದರಾಮಯ್ಯ, ಡಿಕೆಶಿಗೆ ಧಮ್, ತಾಕತ್ ಇದ್ದರೆ ವಿಜಯೇಂದ್ರ ಭ್ರಷ್ಟಾಚಾರ ಹೊರಗೆ ತರಲಿ ಎಂದು ಸವಾಲೆಸೆದರು.

ವಿಜಯೇಂದ್ರ ಹಾಗೂ ಡಿಕೆಶಿ ಇಬ್ಬರೂ ಭ್ರಷ್ಟರು. ಇಬ್ಬರು ಸೇರಿಯೇ ಬಿಜಿನೆಸ್ ಮಾಡ್ತಿದ್ದಾರೆ. ಯಡಿಯೂರಪ್ಪ ಸಹ ಯಾವುದೇ ಪಕ್ಷದ ವೇದಿಕೆಗೆ ಬರಬಾರದು. ಯಡಿಯೂರಪ್ಪ ಮೇಲೆ ಗಂಭೀರ ಆರೋಪಗಳಿವೆ. ಅವರು ವೇದಿಕೆಗೆ ಬರಲೇಬಾರದು ಎಂದು ಕಿಡಿಕಾರಿದರು.

ಬಿಜೆಪಿ ವಾಲ್ಮೀಕಿ ಹಗರಣದ ಬಗ್ಗೆ ಯಾಕೆ ಮೌನವಾಗಿದೆ ವಾಲ್ಮೀಕಿಯಲ್ಲಿ ಡಿಕೆಶಿ ಇದ್ದಾರೆ. ರಾಹುಲ್ ಗಾಂಧಿ ಡೈರೆಕ್ಷನ್ ಇದೆ. ಇದೆ ಕಾರಣಕ್ಕೆ ವಾಲ್ಮೀಕಿ ಹಗರಣ ಮುಚ್ಚಿಡಲಾಗ್ತಿದೆ. ಯಡಿಯೂರಪ್ಪ ಶಿಷ್ಯ ರಾಜು ಪ್ರಕರಣದಲ್ಲಿದ್ದಾನೆ. ಇದನ್ನ ಬಿಟ್ಟು ಮೈಸೂರು ಹಗರಣಕ್ಕೆ ಬೆನ್ನು ಹತ್ತಿದ್ದಾರೆ ಎಂದು ಬಿಎಸ್‌ವೈ ಕುಟುಂಬದ ವಿರುದ್ಧ ಯತ್ನಾಳ್ ಆಕ್ರೋಶ ವ್ಯಕ್ತಪಡಿಸಿದರು.

ದಲಿತರ ಹತ್ಯೆ ಸಿದ್ದು ಸರ್ಕಾರದಲ್ಲೇ ಹೆಚ್ಚಾಗುತ್ತಿದೆ. ವಾಲ್ಮೀಕಿ ಹಗರಣದಲ್ಲಿ ಅಧಿಕಾರಿ ಸಾವಿಗೆ ಶರಣಾದ. ಈಗ ಪಿಎಸ್‌ಐ ನೇಣಿಗೆ ಶರಣಾದ. ಶಾಸಕರ ಭ್ರಷ್ಟಾಚಾರವೇ ಇದಕ್ಕೆ ಕಾರಣ ಎಂದು ಕುಟುಂಬಸ್ಥರು ಆರೋಪ ಮಾಡಿದ್ದಾರೆ. ಪೊಲೀಸ್ ಅಧಿಕಾರಿಗಳೇ ಆತ್ಮಹತ್ಯೆ ಮಾಡಿಕೊಳ್ಳುವಂತಾಗಿದೆ. ಇತರರ ಗತಿ ಏನು ಎಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ರಾಜೀನಾಮೆ ನೀಡಬೇಕು. ಸಿಎಂ ಮಾತ್ರ ರಾಜೀನಾಮೆ ನೀಡಿದರೆ ಸಾಲದು. ಸಿಎಂ ರಾಜೀನಾಮೆ ಕೊಟ್ಟರೆ, ಡಿಕೆ ಶಿವಕುಮಾರ್ ಸಿಎಂ ಆಗಲು ಅನುಕೂಲವಾಗುತ್ತದೆ. ಹಾಗಾಗಿ ಇಡೀ ಸರ್ಕಾರವೇ ಅಧಿಕಾರದಿಂದ ಹಿಂದೆ ಸರಿದು ರಾಜೀನಾಮೆ ನೀಡಬೇಕು. ಮತ್ತೆ ಚುನಾವಣೆಗೆ ಹೋಗೋಣ. ನಾವೂ ನಮ್ಮ ಭ್ರಷ್ಟ ರಾಜ್ಯಾಧ್ಯಕ್ಷರು ಬೇಡಾ ಎಂದು ಹೇಳುತ್ತೇವೆಂದು ವಿಜಯೇಂದ್ರ ವಿರುದ್ಧವೂ ಕಿಡಿಕಾರಿದರು.

## ಮೊದಲನೇ ಪುಟದಿಂದ...

### ಸ್ಥಳಾಂತರಕ್ಕೆ ಪ್ಲಾನ್

2018 ಆಗಸ್ಟ್ 16 ರಂದು ಜಿಲ್ಲೆಯಲ್ಲಿ ಹಿಂದೆಂದು ಕಾಣದಂತೆ ಸುರಿದ ಮಹಾಮಳೆ, ಸಂಭವಿಸಿದ ಪ್ರಾಕೃತಿಕ ವಿಕೋಪ ಇವೆಕ್ಕಲ್ಲ ಕಾರಣವಾಗಿವೆ. ಈ ವರ್ಷವೂ ಆತಂಕದ ವಾತಾವರಣ ಸೃಷ್ಟಿಯಾಗಿದ್ದು, ಅಪಾಯದಂಚಿನಲ್ಲಿರುವವರು ಮುಂದೇನು ಎಂಬ ತ್ರಿಶಂಕು ಸ್ಥಿತಿಯಲ್ಲಿ ಸಿಲುಕಿದ್ದಾರೆ.

### ಪೊಲೀಸರಿಂದ ಮಹಜರು

ಈ ಸಂಬಂಧ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾಗಿರುವ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಶಿಫಾರಸ್ಸಿನಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಿಐಡಿ ತನಿಖೆಗೆ ಆದೇಶಿಸಿದ್ದರು.

ಉದ್ಘಾಟನೆಯಾದ ಬಳಿಕ ಸಿಡಿಲು ನಿರೋಧಕ ಅಳವಡಿಕೆ ಮತ್ತು ಇನ್ನಿತರ ಬಾಕಿ ಕಾಮಗಾರಿ ಪೂರ್ಣಗೊಳಿಸುವ ನಿಟ್ಟಿನಲ್ಲಿ ಥೀಮ್ ಪಾರ್ಕ್ ಬಂದ್ ಮಾಡಿರುವ ವಿಚಾರವಾಗಿ, ಸ್ಥಳೀಯರು ಅನುಮಾನ ವ್ಯಕ್ತಪಡಿಸಿದ್ದರು. ಪರಶುರಾಮನ ಮೂರ್ತಿ ನಕಲಿ ಎನ್ನುವ ಮೂಲಕ ಹೊಸ ವಿವಾದ ಆರಂಭವಾಗಿತ್ತು. ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಪರಿಶೀಲನೆ ಮಾಡಿದ್ದರು. ಅಧಿಕಾರಿಗಳು ಸ್ಪಷ್ಟ ಮಾಹಿತಿ ನೀಡದ ಹಿನ್ನೆಲೆಯಲ್ಲಿ ತನಿಖೆಗೆ ಆದೇಶ ನೀಡಿದ್ದರು.

### ಕರೆತಂದ ಪೊಲೀಸರು

ರಾಷ್ಟ್ರ ರಾಜಧಾನಿಯಿಂದ ನವದೆಹಲಿ-ಬೆಂಗಳೂರು-ಕರ್ನಾಟಕ ಎಕ್ಸ್‌ಪ್ರೆಸ್ ಮೂಲಕ ಸೇಲಂ ರೈಲಿನಿಂದ ಇಳಿಸಿದ ನಂತರ ಅವರು ಪೊಲೀಸ್ ಕಾರಿನಲ್ಲಿ ಹೋಗುತ್ತಿರುವ ದೃಶ್ಯ ವೈರಲ್ ಆಗಿದೆ.

ಪ್ರಸ್ತುತ ಬಾಂಬ್ ಸ್ಫೋಟಗಳಲ್ಲಿ ಭಾಗಿಯಾಗಿದ್ದಕ್ಕಾಗಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಸಲೇಂ ಕಳೆದ ತಿಂಗಳು 'ಸುರಕ್ಷತಾ ಕಾಳಜಿ'ಯನ್ನು ಉಲ್ಲೇಖಿಸಿ ಬಾಂಬೆ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸುವ ಮೂಲಕ ತಲೋಜಾ ಕೇಂದ್ರ ಕಾರಾಗೃಹದಿಂದ ನಾಸಿಕ್ ಕೇಂದ್ರ ಕಾರಾಗೃಹಕ್ಕೆ ತನ್ನ ವರ್ಗಾವಣೆಯನ್ನು ತಡೆಯಲು ಕಳೆದ ತಿಂಗಳು ಪ್ರಯತ್ನಿಸಿದ್ದರು.

ಆರಂಭಿಕ ಮೇಲ್ಮನವಿಯನ್ನು ಸೆಷನ್ಸ್ ನ್ಯಾಯಾಲಯವು ಜೂನ್ 25 ರಂದು ನಿರಾಕರಿಸಿತು, ಆದರೆ ನ್ಯಾಯಾಲಯವು ಜುಲೈ 3 ರವರೆಗೆ ಅವರ ವರ್ಗಾವಣೆಯನ್ನು ವಿಳಂಬಗೊಳಿಸುವಂತೆ ಜೈಲು ಅಧಿಕಾರಿಗಳಿಗೆ ಸೂಚಿಸಿತು.

**1993 ಬಾಂಬ್ ಸ್ಫೋಟದ ವಿವರ:** ಅಂದು 1993ರ ಮಾರ್ಚ್ 12. ಮುಂಬೈ ನಗರ ಬಾಂಬ್ ದಾಳಿಯಿಂದ ನಡುಗಿ ಹೋಗಿತ್ತು. ಮಹಾನಗರದ 12 ಕಡೆ ಶಕ್ತಿಶಾಲಿ ಬಾಂಬ್‌ಗಳು ಸ್ಫೋಟಗೊಂಡು 250ಕ್ಕೂ ಹೆಚ್ಚು ಜನ ಅಸುನೀಗಿದ್ದರು. ಮುಂಬೈ ನಗರದಲ್ಲಿ ಡಿಸೆಂಬರ್-1992ರಿಂದ ಜನವರಿ-1993ರ ಅವಧಿಯಲ್ಲಿ ನಡೆದ ರಕ್ತಸಿಕ್ತ ದಂಗೆಗೆ ಪ್ರತಿಯಾಗಿ ಈ ದಾಳಿ ನಡೆದಿತ್ತು. 1992ರ ಡಿಸೆಂಬರ್ 6ರಂದು ಅಯೋಧ್ಯೆಯಲ್ಲಿ ಹಿಂದೂಪರ ಸಂಘಟನೆಗಳಿಂದ ನಡೆದ ಬಾಬರಿ ಮಸೀದಿ ಧ್ವಂಸ ಪ್ರಕರಣದ ನಂತರ ಮುಂಬೈನಲ್ಲಿ ಈ ಸರಣಿ ಬಾಂಬ್ ಸ್ಫೋಟ ನಡೆದಿತ್ತು.

### ಕಳ್ಳರ ಹಾವಳಿ

ಅಮೇಜಾನ್, ಫ್ಲಿಫ್‌ಕಾರ್ಟ್ ಡೆಲಿವರಿ ಬಾಯ್‌ಗಳೇ ಇವರ ಮುಖ್ಯ ಟಾರ್ಗೆಟ್. ಆನ್‌ಲೈನ್ ಡೆಲಿವರಿ ಬಾಯ್‌ಗಳನ್ನು ಟಾರ್ಗೆಟ್ ಮಾಡುವ ಖತರ್ನಾಕ್ ಗ್ಯಾಂಗ್ ಅವರನ್ನು ಬೈಕ್‌ನಲ್ಲಿ ಹಿಂಬಾಲಿಸಿಕೊಂಡು ಬಂದು ಕ್ಷಣಮಾತ್ರದಲ್ಲಿ ಬ್ಯಾಗ್ ಅಪಹರಿಸಿ ಮಾಯವಾಗುತ್ತದೆ. ಪ್ರಾಡಕ್ಟ್ ಡೆಲಿವರಿ ಮಾಡಿ ಬರುವಷ್ಟರಲ್ಲಿ ಬೈಕ್‌ನಲ್ಲಿದ್ದ ಬ್ಯಾಗ್ ಜತೆ ಪರಾರಿ ಆಗುತ್ತದೆ.

ಕಳೆದ ಮೂರ್ನಾಲ್ಕು ದಿನಗಳಲ್ಲಿ ವೈಟ್ ಫೀಲ್ಡ್, ಮಹದೇವಪುರ ಸೇರಿ ಮೂರು ಕಡೆ ಇದೇ ರೀತಿ ಕೈ ಚಳಕ ತೋರಿಸಿರುವ ಕಳ್ಳರ ಕೃತ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಸೋಷಿಯಲ್ ಮೀಡಿಯಾದಲ್ಲಿ ಈ ವಿಡಿಯೊಗಳನ್ನು ಹರಿಯಬಿಟ್ಟು ಎಚ್ಚರದಿಂದಿರುವಂತೆ ಹಲವರು ಮನವಿ ಮಾಡಿದ್ದಾರೆ.

### ಯೆಲ್ಲೋ ಅಲರ್ಟ್

ದಕ್ಷಿಣ ಒಳನಾಡಿನ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬಳ್ಳಾರಿ, ಚಿತ್ರದುರ್ಗ, ಬಳ್ಳಾರಿ, ಮೈಸೂರು, ಮಂಡ್ಯ, ರಾಮನಗರ, ಚಾಮರಾಜನಗರ, ತುಮಕೂರು ಹಾಗೂ ದಾವಣಗೆರೆ, ಕೋಲಾರ, ವಿಜಯನಗರದಲ್ಲಿ ಪ್ರತ್ಯೇಕವಾಗಿ ಹಗುರದಿಂದ ಕೂಡಿದ ಮಳೆಯಾಗುವ ಸಾಧ್ಯತೆಯಿದೆ.

ಉತ್ತರ ಒಳನಾಡಿನ ಚದುರಿದಂತೆ ಹಗುರವಾದ ಮಳೆಯಾಗುವ ಸಾಧ್ಯತೆಯಿದೆ. ಬೀದರ್, ಕಲಬುರಗಿ, ಯಾದಗಿರಿ, ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಹಾವೇರಿ, ವಿಜಯಪುರ, ಗದಗ, ಕೊಪ್ಪಳ, ರಾಯಚೂರು, ಬಾಗಲಕೋಟೆಯಲ್ಲಿ ಮಳೆಯಾಗಲಿದೆ.

ಬೆಂಗಳೂರಿನಲ್ಲಿ ವ್ಯಾಪಕವಾಗಿ ಹಗುರದಿಂದ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ಉಷ್ಣಾಂಶ 28 ಡಿಗ್ರಿ ಸೆಲ್ಸಿಯಸ್ ಇರಲಿದ್ದು, ಕನಿಷ್ಠ ಉಷ್ಣಾಂಶ 21 ಡಿಗ್ರಿ ಸೆಲ್ಸಿಯಸ್ ಇರಲಿದೆ.

**ಕರಾವಳಿಗೆ ಆರೆಂಜ್ ಅಲರ್ಟ್:** ಗುಡುಗು ಸಹಿತ ಭಾರಿ ಮಳೆಯಾಗಲಿದ್ದು, ಗಾಳಿ ವೇಗವು 30-40 ಕಿ.ಮೀ ಬೀಸಲಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಣೆ ಮಾಡಲಾಗಿದೆ. ಬೆಳಗಾವಿ, ಚಿಕ್ಕಮಗಳೂರು, ಕೊಡಗು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

### ಕಂಟ್ರೋಲ್ ರೂಂ

ಪಶು ಸಂಗೋಪನಾ ಇಲಾಖೆಯ ಜಿಲ್ಲಾ ಅಧಿಕಾರಿ ಡಾ.ರಾಜೇಶ್ ಮಾತನಾಡಿ, ಅಗ್ನಿಶಾಮಕ ದಳದ ನೆರವಿನಿಂದ ವೈದ್ಯರು ಹಾಗೂ ಕ್ಷೇತ್ರಾಧಿಕಾರಿಗಳು ಚಿಕ್ಕ ಪ್ರಾಣಿಗಳನ್ನು ಬೋನಿನಲ್ಲಿಟ್ಟು ದೊಡ್ಡ ಪ್ರಾಣಿಗಳನ್ನು ಆಂಬ್ಯುಲೆನ್ಸ್‌ನಲ್ಲಿ ಮೆಪ್ಪಾಡಿಯ ಪಂಚಾಯತ್ ಆಸ್ಪತ್ರೆಗೆ ಸಾಗಿಸುತ್ತಿದ್ದಾರೆ ಎಂದರು.

ಕೇರಳದ ವಯನಾಡಿನಲ್ಲಿ ಸಂಭವಿಸಿದ ಭೂಕುಸಿತದಲ್ಲಿ 200ಕ್ಕೂ ಹೆಚ್ಚು ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಇನ್ನೂ ರಕ್ಷಣಾ ಕಾರ್ಯ ಮುಂದುವರೆದಿದೆ.

### ವಿವಾದಾತ್ಮಕ ಹೇಳಿಕೆ

ವಿವಾದಿತ ಹೇಳಿಕೆಗಳಿಂದಲೇ ಸುದ್ದಿಯಾಗಿರುವ ಬಿಜೆಪಿ ಮಾಜಿ ಸಂಸದರೂ ಆಗಿರುವ ನಾಯಕ ಜ್ಞಾನದೇವ್ ಅಹುಜಾ, ವಯನಾಡು ದುರಂತಕ್ಕೆ ಕೇರಳದಲ್ಲಿನ ಗೋ ಹತ್ಯೆ ಚಟುವಟಿಕೆಗಳು ಕಾರಣ ಎಂದು ನಾಲಿಗೆ ಹರಿಬಿಟ್ಟಿದ್ದಾರೆ. ಎಲ್ಲೆಲ್ಲಿ ಗೋಹತ್ಯೆಗಳು ನಡೆಯುತ್ತವೆಯೋ, ಅಂತಹ ಸ್ಥಳಗಳಲ್ಲಿ ಈ ರೀತಿಯ ಘಟನೆಗಳು ನಡೆಯುವುದು ಮುಂದುವರಿಯುತ್ತದೆ ಎಂದು ಭವಿಷ್ಯವನ್ನೂ ನುಡಿದಿದ್ದಾರೆ.

ಮುಂದುವರಿದು ಮಾತನಾಡಿರುವ ಅವರು, ವಯನಾಡಿನಲ್ಲಿ ಸಂಭವಿಸಿರುವ ಭೂಕುಸಿತ ದುರಂತಗಳು ಗೋಹತ್ಯೆಯ ನೇರ ಪರಿಣಾಮವಾಗಿದೆ. ಕೇರಳದಲ್ಲಿ ಗೋಹತ್ಯೆಯ ಚಟುವಟಿಕೆಗಳನ್ನು ನಿಲ್ಲಿಸದೇ ಹೋದಲ್ಲಿ ಇದೇ ರೀತಿಯ ದುರಂತಗಳು ಸಂಭವಿಸುತ್ತಲೇ ಇರುತ್ತವೆ. ಉತ್ತರಾಖಂಡ ಹಾಗೂ ಹಿಮಾಚಲ ಪ್ರದೇಶಗಳಂತಹ ಭಾಗಗಳಲ್ಲಿ ಕೂಡ ಮೇಘ ಸ್ಫೋಟ ಹಾಗೂ ಭೂ ಕುಸಿತದಂತಹ ನೈಸರ್ಗಿಕ ವಿಕೋಪಗಳು ಪದೇ ಪದೇ ಸಂಭವಿಸುತ್ತಲೇ ಇರುತ್ತವೆ. ಆದರೆ ಕೇರಳದಲ್ಲಿ ಸಂಭವಿಸಿದ ಘಟನೆಯಷ್ಟು ವಿನಾಶಕಾರಿ ಪರಿಣಾಮ ಅವು ಉಂಟುಮಾಡುವುದಿಲ್ಲ ಎಂದು ತಮ್ಮ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ.

### ಭಾರೀ ನಷ್ಟ

ಟ್ಯಾಕ್ಸಿ ಮಾಲೀಕರು ಅಷ್ಟೇ ಅಲ್ಲದೆ ವ್ಯಾಪಕ ಮಳೆ ಅತಿವೃಷ್ಟಿ ಟ್ಯಾಕ್ಸಿ ಚಾಲಕರ ಆದಾಯಕ್ಕೂ ಕುತ್ತು ತಂದಿದೆ. ಕಳೆದ ಹದಿನೈದು ದಿನದಿಂದ ಯಾವುದೇ ಬುಕ್ಕಿಂಗ್ ಇಲ್ಲದೆ ಟ್ಯಾಕ್ಸಿ, ಕಾರ್ ಗಳನ್ನ ಹೊರಗಡೆಯೇ ತಗೆದಿಲ್ಲ ಎಂದು ಚಾಲಕ ಮುತ್ತುರಾಜ್ ತಿಳಿಸಿದ್ದಾರೆ.

ಒಟ್ನಲ್ಲಿ ಗಾಡ್ಸ್ ಓನ್ ಕಂಟ್ರಿಯ ಆಹ್ಲಾದಕರವಾದ ಕಡಲತೀರಗಳು, ಹಿನ್ನೀರಿನಿಂದ ಕೂಡಿದ ಸೊಗಸಾದ ಗಿರಿಧಾಮಗಳಿಗೆ ಹೆಚ್ಚಾಗಿ ನವ ಜೋಡಿಗಳಿಗೆ, ಸ್ನೇಹಿತರ ಜೊತೆ ಪ್ರವಾಸ ಮಾಡಲು ಅಥವಾ ಕುಟುಂಬದ ಜೊತೆ ಆನಂದಮಯವಾಗಿ ಸಮಯ ಕಳೆಯಲು ಬೆಂಗಳೂರು ಜನರು ಕೇರಳದ ರಮಣೀಯ ಪ್ರವಾಸಿ ತಾಣಗಳನ್ನ ಆಯ್ಕೆ ಮಾಡಿಕೊಂಡು ಎಂಜಾಯ್ ಮಾಡ್ತೀದ್ರು. ಆದರೆ ಈಗ ವಯನಾಡು ದುರಂತ, ಕೇರಳ ಅಂದ್ರೆ ಭಯ ಪಡುವಂತೆ ಮಾಡಿದ್ದು ಆದಷ್ಟು ಬೇಗ ಎಲ್ಲವೂ ಸುವ್ಯವಸ್ಥಿತ ಸ್ಥಿತಿಗೆ ಬರಬೇಕು.

### ಡ್ಯಾನ್ಸ್!

ಕಾಶಿ ಮಠದ ತೋಟ ನೋಡಿಕೊಳ್ಳುತ್ತಿದ್ದರು. ನಾಲ್ಕು ತಿಂಗಳ ಹಿಂದಷ್ಟೇ ತೋಟ ನೋಡಿಕೊಳ್ಳಲು ಉಡುಪಿ ಜಿಲ್ಲೆಗೆ ಬಂದಿದ್ದರು. ನಿನ್ನೆ ರಾತ್ರಿ ಕುಡಿದ ಮತ್ತಿನಲ್ಲಿದ್ದ ಪತಿ ಲಕ್ಷ್ಮಣ ತನ್ನ ಪತ್ನಿಯ ಕುತ್ತಿಗೆ ಕಡಿದು ಮಾರಣಾಂತಿಕವಾಗಿ ಗಾಯಗೊಳಿಸಿದ್ದಾನೆ. ಮನೆಯ ಅಡುಗೆ ಕೋಣೆಯಲ್ಲಿ ರಕ್ತದ ಮಡುವಿನಲ್ಲಿ ಬಿದ್ದಿದ್ದ ಅನಿತಾಳನ್ನು ಮನೆಯಲ್ಲೇ ಬಿಟ್ಟು ಮನೆಯ ಬಾಗಿಲ ಚಿಲಕ ಹಾಕಿ ಹಾಲ್ ನಲ್ಲಿ ಕೈಯಲ್ಲಿ ಕತ್ತಿ ಹಿಡಿದು ನರ್ತನೆ ಮಾಡಿ ಅಟ್ಟಹಾಸ ಮೆರೆದಿದ್ದಾನೆ.

ಕೆಲ ಕ್ಷಣದ ಬಳಿಕ ಸ್ಥಳೀಯರಿಗೆ ವಿಚಾರ ತಿಳಿದಿದ್ದು ಕೂಡಲೇ ಕಿಟಕಿ ಒಡೆದು ಅಡುಗೆ ಕೋಣೆಗೆ ತೆರಳಿ ಮಹಿಳೆಯನ್ನು ಹೊರತಂದಿದ್ದಾರೆ. ಚಿಂತಾಜನಕ ಸ್ಥಿತಿಯಲ್ಲಿ ಮಹಿಳೆಯನ್ನು ಮಣಿಪಾಲ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಇಷ್ಟಾದರೂ ಮೈ ಮೇಲೆ ದೈವ ಬಂದವರಂತೆ ಕೈಯಲ್ಲಿ ಕತ್ತಿ ಹಿಡಿದು ನರ್ತಿಸುತ್ತಿದ್ದ ಪತಿ ಯಾವುದಕ್ಕೂ ಕ್ಯಾರೇ ಎಂದಿಲ್ಲ. ಸದ್ಯ ಸ್ಥಳಕ್ಕೆ ಬಂದ ಪೊಲೀಸರು ಮತ್ತು ಅಗ್ನಿಶಾಮಕ ಸಿಬ್ಬಂದಿ ಪರಿಸ್ಥಿತಿಯನ್ನು ಹತೋಟಿಗೆ ತರಲು ಹರಸಾಹಸ ಪಟ್ಟಿದ್ದು ಒಂದೂವರೆ ಗಂಟೆಯ ಬಳಿಕ ಆರೋಪಿ ಪೊಲೀಸರ ಕೈಗೆ ಸಿಕ್ಕಿದ್ದಾನೆ. ಕಂಡ್ಲೂರು ಪೊಲೀಸ್ ಠಾಣೆಯಲ್ಲಿ ಈ ಕುರಿತು ಪ್ರಕರಣ ದಾಖಲಾಗಿದೆ. ಇಂದು ಭೀಮನ ಅಮಾವಸ್ಯೆ ಬೇರೆ ಇದ್ದು ತಡ ರಾತ್ರಿ ವ್ಯಕ್ತಿಯ ವರ್ತನೆ ನೋಡಿ ಜನರಲ್ಲಿ ಭಯ ಮೂಡಿದೆ.

### ಅಮಾನತು

**ಕೇಂದ್ರೀಯ ವಿವಿ ಕುಲಪತಿ, ಕುಲಸಚಿವರ ವಿರುದ್ಧ ಎಫ್‌ಐಆರ್ :** ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನ ಕಡಗಂಚಿ ಬಳಿಯಿರುವ ಕೇಂದ್ರಿಯ ವಿಶ್ವವಿದ್ಯಾಲಯ ಕುಲಪತಿ ಮತ್ತು ಕುಲಸಚಿವರ ಮೇಲೆ ಎಫ್‌ಐಆರ್ ದಾಖಲಾಗಿದೆ. ಕುಲಪತಿ ಬಟ್ಟೂ ಸತ್ಯನಾರಾಯಣ, ಕುಲ ಸಚಿವ ರುದ್ರಗೌಡ ಬಿರಾದಾರ್ ಅವರ ಮೇಲೆ ಎಫ್‌ಐಆರ್ ದಾಖಲಾಗಿದೆ. ವಿವಿಯ ಸಂಶೋಧನಾ ವಿದ್ಯಾರ್ಥಿ ನಂದಕುಮಾರ್ ಜಾತಿ ನಿಂದನೆ ಅಡಿಯಲ್ಲಿ ಕಲಬುರಗಿ ಜಿಲ್ಲೆ ಆಳಂದ ತಾಲೂಕಿನ ನರೋಣಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಈ ದೂರಿನ ಮೇರೆಗೆ ಎಫ್ ಐಆರ್ ದಾಖಲಾಗಿದೆ.

ಆಗಸ್ಟ್ 1 ರಂದು ವಿವಿಯಲ್ಲಿ ನಡೆದ ಬೀಳ್ಕೊಡುಗೆ ಸಮಾರಂಭದ ಸಲುವಾಗಿ ನಂದಕುಮಾರ್ ವಿವಿಗೆ ಆಗಮಿಸಿದ್ದರು. ಈ ವೇಳೆ ನಂದಕುಮಾರ್ ಅವರನ್ನಿ ವಿವಿಯ ಹೊರಗಡೆ ಗೇಟ್ ಬಳಿಯೇ ತಡೆದು ವಿವಿಯ ಆವರಣದ ಒಳಗಡೆ ಬಿಡದೆ ಸೆಕ್ಯೂರಿಟಿ ತಡೆದಿದ್ದಾರೆ. ವಿವಿಯ ಒಳಗಡೆ ಬಿಡದಂತೆ ಕುಲಪತಿ ಮತ್ತು ಕುಲ ಸಚಿವರು ಹೇಳಿದ್ದಾರೆ ಎಂದ ಸೆಕ್ಯೂರಿಟಿ ತಿಳಿಸಿದ್ದಾರೆ. ಕೀಳು ಜಾತಿಯವನು ಅಂತಾ ನನ್ನ ಒಳಗಡೆ ಬಿಟ್ಟಿಲ್ಲ ಅಂತಾ ಆರೋಪಿಸಿ ನಂದ ಕುಮಾರ್ ದೂರು ನೀಡಿದ್ದಾರೆ. ದೂರಿನಲ್ಲಿ ಈ ಹಿಂದೆಯು ಕೂಡ ನನ್ನನ್ನ ಕೀಳು ಜಾತಿಯವನು ಅಂತಾ ಕಿರುಕುಳ ನೀಡಿದ್ದಾರೆ ಅಂತ ಆರೋಪಿಸಿದ್ದಾರೆ.

ಕಳೆದ ವಾರವಷ್ಟೇ ಸಭೆಯಲ್ಲಿ RSS ಗೀತೆ ಮೊಳಗಿಸಲಾಗಿತ್ತು ಎಂದು ಈ ವಿವಿ ಸುದ್ದಿಯಾಗಿತ್ತು. ಇದೀಗ ಮತ್ತೊಂದು ವಿವಾದ ಮೈ ಮೇಲೆ ಎಳೆದುಕೊಂಡಿದೆ.

# ಕೆರೆಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುವುದು

## ಶಾಸಕ ಎಸ್.ಮುನಿರಾಜು ಭರವಸೆ



**ಬೆಂಗಳೂರು:** ಕಮ್ಮಗೊಂಡನಹಳ್ಳಿ ಕೆರೆಗೆ 2.50ಕೋಟಿ ಅನುದಾನವನ್ನು ತಂದು ಕೆರೆ ಅಭಿವೃದ್ಧಿ ಮಾಡಲಾಗುವುದು .ಕಳೆದ ಐದು ವರ್ಷಗಳಿಂದ ಯಾವುದೆ ಕೆರೆಯ ಅಭಿವೃದ್ಧಿ ಹಾಗಿರಲಿಲ್ಲ ಅದ್ದರಿಂದ ಕೆರೆಯ ಅಭಿವೃದ್ಧಿಗೆ ಹೆಚ್ಚಿನ ಒತ್ತನ್ನು ನೀಡಿ ಅಭಿವೃದ್ಧಿ ಪಡಿಸಲಾಗುವುದು ಎಂದು ಶಾಸಕ ಎಸ್ ಮುನಿರಾಜು ತಿಳಿಸಿದರು.

ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ವಲಯ ವ್ಯಾಪ್ತಿಯಲ್ಲಿ 15000 ಸಸಿಗಳನ್ನು ನೆಡುವ ಕಾರ್ಯಕ್ರಮಕ್ಕೆ ಕಮ್ಮಗೊಂಡನಹಳ್ಳಿ ಕೆರೆಯಲ್ಲಿ ಶಾಸಕ ಎಸ್ ಮುನಿರಾಜು ಸಸಿಗಳನ್ನು ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು

ಶಾಸಕ ಎಸ್ ಮುನಿರಾಜು ಮಾತನಾಡಿ ಇಂದಿನ ದಿನಮಾನಗಳಲ್ಲಿ ಆರೋಗ್ಯಕರ ಬದುಕನ್ನು ನಡೆಸಲು ಉತ್ತಮ ಜೀವನ ಶೈಲಿಯೊಂದಿಗೆ ಸ್ವಚ್ಚ ಹಾಗೂ ಉತ್ತಮ ಪರಿಸರ ಅತಿ ಅಗತ್ಯವಾಗಿದ್ದು,ಅದಕ್ಕಾಗಿ ನಾವು ಮರ ಗಿಡಗಳನ್ನು ಹೆಚ್ಚು ಹೆಚ್ಚಾಗಿ ಬೆಳೆಸುವ ಮೂಲಕ ಪ್ರಕೃತಿಗೆ ನಮ್ಮ ಕೊಡುಗೆ ನೀಡುವುದು ಪ್ರತಿಯೊಬ್ಬರ ಕರ್ತವ್ಯ .

ದಿನೇ ದಿನೇ ಹೆಚ್ಚುತ್ತಿರುವ ಭೂಮಿಯ ತಾಪಮಾನವನ್ನು ಕಡಿಮೆ ಮಾಡಲು ಹಾಗೂ ಹಸಿರನ್ನು ಹೆಚ್ಚಿಸಿ ಶುದ್ಧ ಗಾಳಿಯನ್ನು ಪಡೆಯಲು ಪ್ರತಿಯೊಬ್ಬ ಮಗು, ಪ್ರತಿಯೊಬ್ಬ ನಾಗರಿಕರು ಮರಗಿಡಗಳನ್ನು ನೆಟ್ಟು ಉಳಿಸಿ ಬೆಳೆಸಬೇಕಾದ ಅಗತ್ಯವಿದೆ ಎಂದು ಹೇಳಿದರು.

ಇಂದಿನ ದಿನಗಳಲ್ಲಿ ಸಾರ್ವಜನಿಕರಿಗೆ ಪರಿಸರ ಪ್ರಜ್ಞೆ ಮೂಡಿಸುವ ಅಗತ್ಯವಿದೆ ಎಂದು ಸಲಹೆ ನೀಡಿದರು. ಕೆರೆಗಳಲ್ಲಿ ಮರಗಿಡಗಳನ್ನು ಬೆಳೆಸುವ ಮೂಲಕ ಸುಂದರ ವಾತಾವರಣ ಸೃಷ್ಟಿಮಾಡಬಹುದು.ಪ್ರತಿನಿತ್ಯ ಕೆರೆಯಂಗಳದಲ್ಲಿನಡೆಯುವವ ಸಾರ್ವಜನಿಕರಿಗೆ ಸುಂದರವಾದ ಗಾಳಿ ದೊರೆಯುತ್ತದೆ ಕೆರೆಯ ಸೌಂದರ್ಯವು ಹೆಚ್ಚುತ್ತದೆ ಮರಗಿಡಗಳನ್ನು ಹೆಚ್ಚು ಬೆಳೆಸುವುದರಿಂದ ಉತ್ತಮಕರವಾದ ಗಾಳಿ ಬರುತ್ತದೆ ಜೊತೆಗೆ ಆರೋಗ್ಯಕರ ವಾತಾವರಣ ನಿರ್ಮಾಣ ಮಾಡಲು ಸಾಧ್ಯವಿದೆ ಎಂದರು .

ಉಪ ಅರಣ್ಯಾಧಿಕಾರಿ ಬಿ.ಎಲ್.ಜಿ.ಸ್ವಾಮಿ ಮಾತನಾಡಿ 7 ಲಕ್ಷ ಸಸಿಗಳನ್ನು ನೆಡುವ ಕಾರ್ಯಕ್ರಮವನ್ನು ರೂಪಿಸಿಕೊಂಡಿದ್ದೇವೆ ವಿಜಯನಗರ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರಗಳಲ್ಲಿ ಗಿಡಗಳನ್ನು ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ ಇಂದು ದಾಸರಹಳ್ಳಿಯ ವಿಧಾನಸಭಾ ಕ್ಷೇತ್ರದಲ್ಲಿ ಸುಮಾರು 15000 ಗಿಡ ನೆಡುವ ಕಾರ್ಯಕ್ರಮಕ್ಕೆ ಶಾಸಕರ ನೇತೃತ್ವದಲ್ಲಿ ಚಾಲನೆ ನೀಡಲಾಯಿತು.ಕೆರೆಗಳು ಪಕ್ಷಗಳ ವಾಸಸ್ಥಾನ ಆದ್ದರಿಂದ ಕೆರೆಗಳಲ್ಲಿ ಹೆಚ್ಚು ಸಸಿಗಳನ್ನು ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ ಎಂದು ತಿಳಿಸಿದರು.

ಇದೇ ವೇಳೆ ವಿಶೇಷವಾಗಿ ಹೋಮ್ ಗಾರ್ಡ್ ಹಾಗೂ ಪತ್ರಕರ್ತರ ಜೊತೆಗೂಡಿ ಸಸಿಗಳನ್ನು ನೆಡೆಸಲಾಯಿತು

ಈ ಸಂದರ್ಭದಲ್ಲಿ ಸಹಾಯಕ ಸಂರಕ್ಷಣಾಧಿಕಾರಿ ಪ್ರಕಾಶ್ , ದಾಸರಹಳ್ಳಿ ವಲಯ ಅರಣ್ಯ ಅಧಿಕಾರಿ ರಾಜಪ್ಪ, ಶೆಟ್ಟಿಹಳ್ಳಿ ವಾರ್ಡ್ ಬಿಜೆಪಿ ಅಧ್ಯಕ್ಷ ಶೆಟ್ಟಿಹಳ್ಳಿ ಸುರೇಶ್, ಬಿಜೆಪಿ ಮುಖಂಡರುಗಳಾದ ರಮೇಶ್ ಯಾದವ್, ಜಬ್ಬರ್ , ಗುತ್ತಿಗೆದಾರ ಪ್ರವೀಣ್ ಇನ್ನು ಮುಂತಾದ ಬಿಜೆಪಿ ಮುಖಂಡರುಗಳು ಕಾರ್ಯಕರ್ತರು ಉಪಸ್ಥಿತರಿದ್ದರು

# ಒಳ ಮೀಸಲಾತಿ: ಸುಪ್ರೀಂ ಕೋರ್ಟ್ ತೀರ್ಪು ಸ್ವಾಗತಿಸಿ ಸಂಭ್ರಮಾಚರಣೆ

**ಹುಳಿಯಾರು:** ಒಳ ಮೀಸಲಾತಿ ಪರವಾಗಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪನ್ನು ಸ್ವಾಗತಿಸಿ ದಲಿತ ಸಂಘರ್ಷ ಸಮಿತಿ ಹಾಗೂ ಮಾದಿಗ ದಂಡೋರ ಸಮಿತಿ ಸದಸ್ಯರು ಸೇರಿದಂತೆ ದಲಿತ ಪರ ಸಂಘಟನೆಗಳ ಮುಖಂಡರುಗಳು ಹುಳಿಯಾರು ಪೊಲೀಸ್ ಸ್ಟೇಷನ್ ವೃತ್ತದಲ್ಲಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ಒಳ ಮೀಸಲಾತಿ ಪರವಾಗಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಮೂರು ದಶಕಗಳ ಕಾಲ ಸತತವಾಗಿ ಹೋರಾಟ ಮಾಡಿಕೊಂಡು ಬಂದಿದ್ದು ಇದೀಗ ಸುಪ್ರೀಂಕೋರ್ಟ್ ನೀಡಿರುವ ತೀರ್ಪು ಶತಮಾನಗಳಿಂದಲೂ ತುಳಿತಕ್ಕೊಳಗಾಗಿರುವ ದಲಿತರಿಗೆ ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿದಂತಾಗಿದೆ. ಈ ಐತಿಹಾಸಿಕ ತೀರ್ಪನ್ನು ನಮ್ಮ ಸಂಘಟನೆ ಸ್ವಾಗತಿಸುತ್ತದೆ ಎಂದು ದಲಿತ ಸಂಘರ್ಷ ಸಮಿತಿ ತಾಲೂಕು ಸಂಚಾಲಕ ಹನುಮಂತಯ್ಯ ನುಡಿದರು.

ಚಿಕ್ಕನಾಯಕನಹಳ್ಳಿ ತಾಲೂಕು ಕೆಡಿಪಿ ಸದಸ್ಯರಾದ ಬರಕನಾಳ್ ಶಂಕರ್ ಮಾತನಾಡಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪು ಶೋಷಿತ ಸಮುದಾಯಗಳಲ್ಲಿ ಹೊಸ ಆಶಾಭಾವನೆಗೆ ಕಾರಣವಾಗಿದ್ದು,ಇದರಿಂದಾಗಿ ಇನ್ನು ಮುಂದೆ ಅತ್ಯಂತ ಹಿಂದುಳಿದ ಸಣ್ಣ ಪುಟ್ಟ ಉಪಜಾತಿಗಳಿಗೂ ಸಹ ಮೀಸಲಾತಿಯ ಲಾಭ ಪಡೆಯುವಂತಾಗಿದೆ. ರಾಜ್ಯ ಸರ್ಕಾರ ಇದನ್ನು ತ್ವರಿತವಾಗಿ ಜಾರಿ ಮಾಡುವ ಮೂಲಕ ಅನ್ಯಾಯ ಮತ್ತು ಅಸ್ಪೃಶ್ಯತೆಯಲ್ಲಿ ಬೆಂದು ನೊಂದಿದ್ದ ಸಣ್ಣ ಸಮುದಾಯಗಳಿಗೆ ನ್ಯಾಯ ಕೊಡಿಸಬೇಕೆಂದರು.

ಈ ವೇಳೆ ಡಿಎಸ್‌ಎಸ್ ಮುಖಂಡರಾದ ತಮಡಿಹಳ್ಳಿ ನಾಗರಾಜು, ಮೇಲನಹಳ್ಳಿ ಕುಮಾರ್, ರಾಮನಗರ ಕೆಂಚಪ್ಪ, ಹುಳಿಯಾರು ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಕೃಷ್ಣಮೂರ್ತಿ, ಜಗದೀಶ್, ನಂದಿಹಳ್ಳಿ ಗಿರೀಶ್ ಸೇರಿದಂತೆ ದಲಿತ ಮುಖಂಡರುಗಳು ಹಾಜರಿದ್ದರು.



**ಒಳ ಮೀಸಲಾತಿ ಪರವಾಗಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪನ್ನು ಸ್ವಾಗತಿಸಿ ದಲಿತ ಸಂಘರ್ಷ ಸಮಿತಿ ಹಾಗೂ ಮಾದಿಗ ದಂಡೋರ ಸಮಿತಿ ಸದಸ್ಯರು ಸೇರಿದಂತೆ ದಲಿತ ಪರ ಸಂಘಟನೆಗಳ ಮುಖಂಡರುಗಳು ಹುಳಿಯಾರು ಪೊಲೀಸ್ ಸ್ಟೇಷನ್ ವೃತ್ತದಲ್ಲಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.**

# 8ಕ್ಕೆ ಸಂಸದರು, ವಿಧಾನಪರಿಷತ್ ಸದಸ್ಯರಿಗೆ ಅಭಿನಂದನೆ

**ಚಾಮರಾಜನಗರ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕೇಂದ್ರ ಸಂಘ ಹಾಗೂ ಚಾಮರಾಜನಗರ ಜಿಲ್ಲಾ ಸಂಘ ಶಾಖೆಯ ಸಹಯೋಗದೊಂದಿಗೆ ನೂತನ ಸಂಸದರು ಮತ್ತು ವಿಧಾನಪರಿ?ತ್ ಸದಸ್ಯರಿಗೆ ಅಭಿನಂದನಾ ಕಾರ್ಯಕ್ರಮ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಪ್ರತಿಭಾವಂತ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಆಗಸ್ಟ್ 8 ರಂದು ಮಧ್ಯಾಹ್ನ 3 ಗಂಟೆಗೆ ನಗರದ ಡಾ. ರಾಜ್ ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಪಶುಸಂಗೋಪನೆ, ರೇ?ೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್. ?ಡಾಕ್ಷರಿ ಅವರು ಪ್ರತಿಭಾ ಪುರಸ್ಕಾರ ವಿತರಣೆ ಮಾಡುವರು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ್ ಅವರು ಅಧ್ಯಕ್ಷತೆ ವಹಿಸುವರು.

ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಹಾಗೂ ವಿಧಾನ ಪರಿ?ತ್ ಸದಸ್ಯರಾದ ಕೆ. ವಿವೇಕಾನಂದ ಅವರನ್ನು ಕಾರ್ಯಕ್ರಮದಲ್ಲಿ ಅಭಿನಂದಿಸಲಾಗುವುದು.

ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಸಹಪ್ರಾಧ್ಯಾಪಕರಾದ ಡಾ. ಬಿ.ಆರ್. ಜಯಣ್ಣ ಅವರು ಸರ್ಕಾರಿ ನೌಕರರಲ್ಲಿ ವೃತ್ತಿಪರತೆ ವಿಷಯದ ಕುರಿತು ಉಪನ್ಯಾಸ ನೀಡುವರು.

ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಲಿಮಿಟೆಡ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಶಾಸಕರಾದ ಎಚ್.ಎಂ. ಗಣೇಶ್ ಪ್ರಸಾದ್, ಎ.ಆರ್. ಕೃಷ್ಣಮೂರ್ತಿ, ಎಂ.ಆರ್. ಮಂಜುನಾಥ್, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್ ಚಿದಂಬರ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ರಾಮಚಂದ್ರರಾಜೇ ಅರಸ್, ಖಜಾನೆ ಇಲಾಖೆಯ ಉಪನಿರ್ದೇಶಕರಾದ ಜಿ.ಬಿ ಸುಲೋಚನ, ನಗರಸಭೆ ಪೌರಾಯುಕ್ತರಾದ ಎಸ್.ವಿ. ರಾಮದಾಸ್, ಚಾಮರಾಜನಗರ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಸಿ. ಹನುಮಶೆಟ್ಟಿ, ಪಿ.ಡಬ್ಲ್ಯ್ಯೂ.ಡಿ. ಸಹಾಯಕ ಕಾರ್ಯಪಾಲಕ ಅಭಿಯಂತರರಾದ ವಿ. ರಮೇಶ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಟಿ. ಶ್ರೀನಿವಾಸ್, ಕಾರ್ಯಾಧ್ಯಕ್ಷರಾದ ಮಲ್ಲಿಕಾರ್ಜುನ ಬಿ.ಬಳ್ಳಾರಿ, ಹಿರಿಯ ಉಪಾಧ್ಯಕ್ಷರಾದ ಎಂ.ವಿ. ರುದ್ರಪ್ಪ, ಆರ್. ಮೋಹನ್ ಕುಮಾರ್, ರಾಜ್ಯ ಖಜಾಂಚಿ ಡಾ. ಎಸ್. ಸಿದ್ದರಾಮಣ್ಣ, ಗೌರವಾಧ್ಯಕ್ಷರಾದ ಬಿ.ಹೆಚ್. ವೆಂಕಟೇಶಯ್ಯ, ಉಪಾಧ್ಯಕ್ಷರಾದ ಎಸ್. ಬಸವರಾಜು, ರಾಜ್ಯ ಕಾರ್ಯದರ್ಶಿ ನೆಲ್ಲುದ್ರಿ ಸದಾನಂದ ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕೊಳ್ಳೇಗಾಲ ತಾಲ್ಲೂಕು ಅಧ್ಯಕ್ಷರಾದ ಅಲೆಕ್ಸಾಂಡರ್, ಯಳಂದೂರು ತಾಲ್ಲೂಕು ಅಧ್ಯಕ್ಷರಾದ ವೈ.ಎಂ ಮಂಜುನಾಥ, ಸಂಘಟನಾ ಕಾರ್ಯದರ್ಶಿ ಎಂ. ವೀರಭದ್ರಸ್ವಾಮಿ, ಗುಂಡ್ಲುಪೇಟೆ ತಾಲ್ಲೂಕು ಅಧ್ಯಕ್ಷರಾದ ಹೆಚ್. ಎಸ್. ಪ್ರಸಾದ್, ಹನೂರು ತಾಲ್ಲೂಕು ಅಧ್ಯಕ್ಷರಾದ ಗುರುಸ್ವಾಮಿ, ಜಂಟಿ ಕಾರ್ಯದರ್ಶಿ ಎಸ್. ಕೃಷ್ಣಮೂರ್ತಿ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರ

**ಮಂಡ್ಯ:** ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಆಗಸ್ಟ್ 2024 ರ ಮಾಹೆಯ ಆಗಸ್ಟ್ 7 ರಿಂದ ಆಗಸ್ಟ್ 28 ರವರೆಗೆ ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿದೆ.

ಆಗಸ್ಟ್ 7 ರಂದು ಕೀಲಾರ ಸರ್ಕಾರಿ ಆರೋಗ್ಯ ಕೇಂದ್ರ, 9 ರಂದು ಚಿನಕುರಳಿ ಸರ್ಕಾರಿ ಆರೋಗ್ಯ ಕೇಂದ್ರ, 13 ರಂದು ಅರಕೆರೆ ಸರ್ಕಾರಿ ಆರೋಗ್ಯ ಕೇಂದ್ರ, 14 ರಂದು ಕೆ.ಆರ್.ಪೇಟೆ ತಾಲ್ಲೂಕು ಆಸ್ಪತ್ರೆ, 17 ರಂದು ಕಿರುಗಾವಲು ಸರ್ಕಾರಿ ಆರೋಗ್ಯ ಕೇಂದ್ರ, 20 ರಂದು ಪಾಂಡವಪುರ ಉಪ ವಿಭಾಗ ಸರ್ಕಾರಿ ಆರೋಗ್ಯ ಕೇಂದ್ರ, 21 ರಂದು ಬಿಂಡಿಗನವಿಲೆ ಸರ್ಕಾರಿ ಆರೋಗ್ಯ ಕೇಂದ್ರ ಹಾಗೂ ಮಧ್ಯಾಹ್ನ 1 ಗಂಟೆಗೆ ನಾಗಮಂಗಲ ಸಾರ್ವಜನಿಕ ಆಸ್ಪತ್ರೆಯಲ್ಲಿ, 22 ರಂದು ಮದ್ದೂರು ತಾಲ್ಲೂಕು ಆಸ್ಪತ್ರೆ, 23 ರಂದು ಮಂಡ್ಯ ಮಿಮ್ಸ್, 27 ರಂದು ಕೆ. ಎಂ ದೊಡ್ಡಿ ಸರ್ಕಾರಿ ಆರೋಗ್ಯ ಕೇಂದ್ರ, 28 ರಂದು ಶಿವಳ್ಳಿ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಬೆಳಿಗ್ಗೆ 10 ಗಂಟೆಗೆ ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರಿವಿನ ಆಚಾರ ಬದುಕಿನ ಉನ್ನತಿಗೆ ಸೋಪಾನ: ರಂಭಾಪುರಿ ಶ್ರೀಗಳು

**ದಾವಣಗೆರೆ:** ಅರಿವುಳ್ಳ ಮಾನವ ಜನ್ಮದಲ್ಲಿ ಅರಿತು ಬಾಳಿದರೆ ಬದುಕು ಬಂಗಾರ. ಮರೆತು ಮಲಗಿದರೆ ಬದುಕು ಬಂಧನಕಾರಿ. ಅರಿವಿನ ಆದರ್ಶಗಳು ಬದುಕಿನ ಉನ್ನತಿ ಮತ್ತು ಶ್ರೇಯಸ್ಸಿಗೆ ಸೋಪಾನವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ನಗರದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಮಂಗಲ ಭವನದಲ್ಲಿ ಶ್ರೀಮದ್ವೀರಶೈವ ಸದ್ಬೋಧನ ಸಂಸ್ಥೆ ಜಿಲ್ಲಾ ಘಟಕದಿಂದ ಸಂಘಟಿಸಿದ ಜನಜಾಗೃತಿ ಧರ್ಮ ಸಮಾವೇಶದ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಅಧಿಕಾರದ ಅಂತಸ್ತು ಮೇಲೇರಿದಂತೆ ನೀತಿಯ ಅಂತಸ್ತು ಮೇಲೇರಬೇಕು. ಮನುಷ್ಯನ ಉಸಿರಾಟಕ್ಕೆ ಗಾಳಿ ಎಷ್ಟು ಮುಖ್ಯವೋ ಜೀವನದ ಉಜ್ವಲ ಭವಿಷ್ಯಕ್ಕೆ ಮಹಾತ್ಮರು ಕೊಟ್ಟ ಸಂದೇಶಗಳು ಅಷ್ಟೇ ಮುಖ್ಯವಾಗಿದೆ. ತನಗಾಗಿ ಬಯಸುವುದು ಜೀವ ಗುಣ. ಎಲ್ಲರಿಗಾಗಿ ಬಯಸುವುದು ದೇವ ಗುಣ. ಧರ್ಮಾಚರಣೆ ಇಲ್ಲದ ಮನುಷ್ಯನ ವ್ಯಕ್ತಿತ್ವಕ್ಕೆ ಬೆಲೆ ನೆಲೆ ಸಿಗಲಾರದು. ಸಾಮಾಜಿಕ ಸಂಪ್ರದಾಯಗಳು ಬದಲಾಗಬಹುದು. ಆದರೆ ನೈತಿನ ನಿಯಮಗಳು ಶಾಶ್ವತವಾಗಿರುತ್ತವೆ. ಬಾಲ್ಯದಲ್ಲಿ ಜ್ಞಾನ ಯೌವನದಲ್ಲಿ ಸಂಪತ್ತು ವೃದ್ಧಾಪ್ಯದಲ್ಲಿ ಪುಣ್ಯ ಸಂಪಾದಿಸಿಕೊಂಡು ಬಾಳಬೇಕು. ಸ್ವಾರ್ಥರಹಿತ ಬದುಕಿಗೆ ಬೆಲೆ ಬಲವಿದೆ. ಸಿದ್ಧಾಂತ ರಹಿತ ಜೀವನ ದಿಕ್ಸೂಚಿ ಇಲ್ಲದ ನೌಕಾಯಂತೆ. ಮನುಷ್ಯ ಸ್ವಾರ್ಥಕ್ಕಾಗಿ ಆದರ್ಶ ಮೌಲ್ಯಗಳನ್ನು ಬಲಿ ಕೊಡಬಾರದು. ಧರ್ಮದಿಂದ ವಿಮುಖನಾದರೆ ಬದುಕು ಅಶಾಂತಿಯ ಕಡಲಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಸಮಷ್ಠಿ ಪ್ರಜ್ಞೆಯಿಂದ ಜೀವ ಜಗತ್ತಿಗೆ ಕೊಟ್ಟ ಮೌಲ್ಯಾಧಾರಿತ ಚಿಂತನಗಳು ನಮ್ಮೆಲ್ಲರ ಬಾಳಿಗೆ ಬೆಳಕು ತೋರುತ್ತವೆ ಎಂದರು.



ರಾಜ್ಯ ಬಿಜೆಪಿ ಎಸ್.ಟಿ.ಘಟಕದ ಉಪಾಧ್ಯಕ್ಷ ಶ್ರೀನಿವಾಸ ದಾಸಕರಿಯಪ್ಪ ಇವರಿಗೆ 'ಸಮಾಜ ಸೇವಾ ವಿಭೂಷಣ' ಎಂಬ ಪ್ರಶಸ್ತಿಯಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು. ಪ್ರಶಸ್ತಿ ಸ್ವೀಕರಿಸಿದ ಶ್ರೀನಿವಾಸ ದಾಸಕರಿಯಪ್ಪ ಮಾತನಾಡಿ ಸುಳ್ಳಿಗೆ ಹಲವಾರು ದಾರಿ. ಸತ್ಯಕ್ಕೆ ಇರುವುದೊಂದೇ ದಾರಿ. ಪೂರ್ವಜರ ಹಿತ ಚಿಂತನೆಗಳು ಬಾಳಿನ ಆಶಾಕಿರಣ. ಯುವ ಜನಾಂಗ ದೇಶದ ಅಮೂಲ್ಯ ಶಕ್ತಿ ಮತ್ತು ಆಸ್ತಿ. ಯುವ ಜನಾಂಗಕ್ಕೆ ಇತಿಹಾಸದ ಅರಿವು ಅಗತ್ಯವೆಂದರು. ಚನ್ನಗಿರಿ ಡಾ.ಕೇದಾರ ಶಿವಶಾಂತವೀರ ಶಿವಾಚಾರ್ಯ ಸ್ವಾಮಿಗಳು ಭಕ್ತಿ ಗೀತೆ ಹಾಡಿದರು. ನೇತೃತ್ವ ವಹಿಸಿದ ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಭಾರತೀಯ ಸಂಸ್ಕೃತಿಗೆ ಮಹಿಳೆಯರ ಕೊಡುಗೆ ಅಪಾರ. ಜ್ಞಾನ ಕ್ರಿಯಾತ್ಮಕವಾದ ಧರ್ಮ ಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಸಲು ಸಾಧ್ಯವೆಂದರು. ಬೀರೂರು ಬಾಳೆಹೊನ್ನೂರು ಖಾಸಾ ಶಾಖಾ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ತಮ್ಮ ಉಪದೇಶಾಮೃತದಲ್ಲಿ ಸಮಾಜದಲ್ಲಿ ಸಂಘಟನೆಗಳು ಇರಬೇಕಲ್ಲದೇ ಸಂಘರ್ಷಗಳು ಇರಬಾರದು. ಸತ್ಯ ಶಾಂತಿ ಸಮಾಜದ ಎರಡು ಕಣ್ಣು. ಪುಟ ಪುಸ್ತಕ ಬದಲಿಸಬಹುದು. ಆದರೆ ಇತಿಹಾಸ ಬದಲಿಸಲು ಯಾರಿಂದಲೂ ಸಾಧ್ಯವಿಲ್ಲವೆಂದರು. ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯರು ಉಪಸ್ಥಿತರಿದ್ದರು.ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಯದೇವ ನಾಯ್ಕ, ಮಹಾಪೌರ ಮಾಜಿ ಮಹಾಪೌರ ಎಸ್.ಟಿ.ವೀರೇಶ್, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ವೀರೇಶ್ ಹನಗವಾಡಿ, ಎಂ.ಟಿ.ಸುಭಾಷ್ ಚಂದ್ರ, ಮ.ನ.ಪಾ.ಸದಸ್ಯ ಪ್ರಸನ್ನ ಕುಮಾರ್, ಎಸ್‌ಜೆವಿಪಿ ಕಾಲೇಜ ಕಾರ್ಯದರ್ಶಿ ಆರ್.ಟಿ.ಪ್ರಶಾಂತ ಭಾಗವಹಿಸಿದ್ದರು. ಶ್ರೀಮದ್ವೀರಶೈವ ಸದ್ಬೋಧನಾ ಸಂಸ್ಥೆ ಜಿಲ್ಲಾ ಘಟಕದ ಅಧ್ಯಕ್ಷ ದೇವರಮನೆ ಶಿವಕುಮಾರ್, ಶ್ರೀ ಜಗದ್ಗುರು ರೇಣುಕ ಸಾಂಸ್ಕೃತಿಕ ಸಂಘದ ಅಧ್ಯಕ್ಷ ದೇವರಮನೆ ಶಿವರಾಜ್ ಉಪಸ್ಥಿತರಿದ್ದರು. ರೂಪ ಗಣೇಶ್, ಮೇನಕ ವೀರೇಶ್, ವಿದ್ಯಾ ಉಮೇಶ್, ನಂದಿಗಾವಿ ತಿಪ್ಪೇಸ್ವಾಮಿ, ರಾಜಶೇಖರ್ ಹಿರೇಮಠ, ಜಿ.ಇ.ಪ್ರಶಾಂತ, ಶಿಲ್ಪ ಗಣೇಶ ಕಬ್ಬಿಣಕಂತಿಮಠ, ಆಂಜನೇಯ ಡಿ,, ಅರುಣ್ ಕುಮಾರ್ ಹಿರೇಮಠ ಸೇರಿದಂತೆ ಹಲವಾರು ಗಣ್ಯರು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು. ಬಾದಾಮಿ ಮಲ್ಲಿಕಾರ್ಜುನ ಸ್ವಾಗತಿಸಿದರು. ಡಾ.ವೀರಣ್ಣ ಶೆಟ್ಟರ್ ನಿರೂಪಿಸಿದರು. ಗುರು ರೇಣುಕ ಸಾಂಸ್ಕೃತಿಕ ಸಂಘದ ಕೊಟ್ರೇಶ್ ಜಗದ್ಗುರುಗಳಿಗೆ ಗೌರವ ಮಾಲೆ ಸಮರ್ಪಿಸಿದರು.



**ಹಾಸನದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಲ್ಲಿ ಕಾರ್ಯಪಾಲಕ ಇಂಜಿನಿಯರ್ ಆಗಿ ಕರ್ತವ್ಯ ನಿರ್ವಹಿಸಿ ವಯೋನಿವೃತ್ತಿ ಹೊಂದಿದ ಎಂ.ಬಿ.ಜಯಕುಮಾರ್ ಅವರಿಗೆ ಹಾಸನದ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಸಭಾಂಗಣದಲ್ಲಿಕಛೇರಿ ಸಿಬ್ಬಂದಿ ವರ್ಗ ಮತ್ತುಗುತ್ತಿಗೆದಾರರಿಂದ ಬೀಳ್ಕೊಡುಗೆ ಸಮಾರಂಭಏರ್ಪಡಿಸಲಾಗಿತ್ತು.**

# ಮಕ್ಕಳ ರಕ್ಷಣಾ ಆಯೋಗದ ಭೇಟಿ

**ಹುಳಿಯಾರು:** ಮಕ್ಕಳ ರಕ್ಷಣಾ ಆಯೋಗದ ಸದಸ್ಯರಾದ ಡಾ ಕೆ.ಟಿ.ತಿಪ್ಪೇಸ್ವಾಮಿಯವರು ಹುಳಿಯಾರು ಹೋಬಳಿಯ ಬೋರನಕಣಿವೆ ಪದವಿ ಪೂರ್ವ ಕಾಲೇಜಿನಲ್ಲಿ ಪ್ರೌಢಶಾಲೆ ಮತ್ತು ಬಿಸಿಎಂ ಹಾಸ್ಟೆಲ್‌ಗೆ ಭೇಟಿ ನೀಡಿ ಮಕ್ಕಳ ಕಲಿಕೆ, ಬೀಸಿಯೂಟದ ಗುಣ ಮಟ್ಟ, ಅಲ್ಲಿನ ಶೈಕ್ಷಣಿಕ ಸೌಲಭ್ಯಗಳು ಬಗ್ಗೆ ಸಂವಾದಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶಿವಣ್ಣ, ಶಿಕ್ಷಣ ಇಲಾಖೆ ಡಿವೈಪಿಸಿ ಸೌಭಾಗ್ಯಮ್ಮ, ಸಿಡಿಪಿಒ ಹೊನ್ನಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಕಾಂತರಾಜು, ಪ್ರಾಚಾರ್ಯ ರೇವಣ್ಣ, ಮಾಸ್ ಟ್ರಸ್ಟ್ ಅಧ್ಯಕ್ಷೆ ಎನ್,ಇಂದಿರಮ್ಮ, ಸುವರ್ಣ ವಿದ್ಯಾ ಚೇತನದ ಅಧ್ಯಕ್ಷ ರಾಮಕೃಷ್ಣಪ್ಪ, ವಿಶ್ರಾಂತ ಪ್ರಾಂಶುಪಾಲರಾದ ಯು.ಪಿ.ಉಮಾದೇವಿ, ಮುಖ್ಯ ಶಿಕ್ಷಕ ಟಿ.ಎನ್.ರಮೇಶ್, ಅಕ್ಷರ ದಾಸೋಹದ ಪ್ರಭಾರೆ ಎ.ಡಿ.ಗವಿರಂಗಯ್ಯ, ಮಕ್ಕಳ ರಕ್ಷಣಾ ಆಯೋಗದ ಅಧಿಕಾರಿಗಳು ಮತ್ತು ಶಿಕ್ಷಕರು ಜೊತೆಗಿದ್ದರು.



# ಪರೀಕ್ಷಾ ಕೇಂದ್ರದ ಸುತ್ತ ನಿಷೇಧಾಜ್ಞೆ ಜಾರಿ: ಜಿಲ್ಲಾಧಿಕಾರಿ

**ಮಂಡ್ಯ:** ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಗಣಕಯಂತ್ರ ಶಿಕ್ಷಣ ಪರೀಕ್ಷೆಯು ಆಗಸ್ಟ್ 4 ರಿಂದ 13 ರವರೆಗೆ ನಡೆಯಲಿದೆ.

ಗಣಕಯಂತ್ರ ಶಿಕ್ಷಣ ಪರೀಕ್ಷೆಯು ಸುಗಮವಾಗಿ ನಡೆಯಲು ಮಂಡ್ಯ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಪರೀಕ್ಷಾ ದಿನಗಳಂದು 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿದೆ. ಪರೀಕ್ಷಾ ಕೇಂದ್ರದ ಸುತ್ತಮುತ್ತ ಇರುವ ಜೆರಾಕ್ಸ್ ಮತ್ತು ಸೈಬರ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಆದೇಶ ಹೊರಡಿಸಿದ್ದಾರೆ. ಪರೀಕ್ಷಾರ್ಥಿಗಳು ಮತ್ತು ಪರೀಕ್ಷಾ ಕಾರ್ಯಕ್ಕೆ ನೇಮಕಗೊಂಡ ಅಧಿಕಾರಿಗಳು/ಸಿಬ್ಬಂದಿಗಳು ಹೊರತುಪಡಿಸಿ ಇತರರು ಯಾರೂ ನಿಷೇಧಿತ ಪ್ರದೇಶದೊಳಗೆ ಪ್ರವೇಶಿಸುವಂತಿಲ್ಲ ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ.

**ಪರೀಕ್ಷಾ ಕೇಂದ್ರಗಳು:** ನಾಗಮಂಗಲ ಸರ್ಕಾರಿ ಪದವಿ ಪೂರ್ವ ಕಾಲೇಜು, ನಾಗಮಂಗಲ ಯು.ಸಿ. ಐ. ಎಸ್. ಕಂಪ್ಯೂಟರ್ ಎಜುಕೇಷನ್ ಸೆಂಟರ್, ಮಂಡ್ಯ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಹಾಗೂ ಮಂಡ್ಯ ಮಾಂಡವ್ಯ ಎಜುಕೇಷನ್ ಟ್ರಸ್ಟ್ ಪರೀಕ್ಷಾ ಕೇಂದ್ರಗಳಾಗಿವೆ.

# ಜಿಲ್ಲೆಯಲ್ಲಿ 8ರವರೆಗೆ ಕನ್ನಡಜ್ಯೋತಿ ರಥಯಾತ್ರೆ

**ಬೆಂಗಳೂರು ಗ್ರಾಮಾಂತರ:** ರಾಜ್ಯ ಸರ್ಕಾರವು ಕರ್ನಾಟಕ ಸಂಭ್ರಮ 50 ರಡಿ ''ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಅಭಿಯಾನದ ಅಂಗವಾಗಿ ಕನ್ನಡಜ್ಯೋತಿ ರಥಯಾತ್ರೆಯನ್ನು ರಾಜ್ಯಾದ್ಯಂತ ಸಂಚರಿಸಲು ಅನುಕೂಲವಾಗುವಂತೆ ಮುಖ್ಯಮಂತ್ರಿಯವರು 2023 ರ ನವೆಂಬರ್ 02 ರಂದು ವಿಜಯನಗರ ಜಿಲ್ಲೆಯ ಹಂಪಿಯಿಂದ ಚಾಲನೆ ನೀಡಿದ್ದಾರೆ. ಈ ರಥಯಾತ್ರೆಯು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸಂಚರಿಸುತ್ತಾ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಆಗಸ್ಟ್ 05(ಸೋಮವಾರ) ರಂದು ಬೆಳಿಗ್ಗೆ 09:00 ಗಂಟೆಗೆ ಕೋಲಾರದ ಮಾಲೂರಿನಿಂದ ಹೊಸಕೋಟೆಗೆ ರಥಯಾತ್ರೆ ಆಗಮಿಸಲಿದೆ, ಆಗಸ್ಟ್ 06(ಮಂಗಳವಾರ) ರಂದು ಬೆಳಿಗ್ಗೆ 09:00 ಗಂಟೆಗೆ ಹೊಸಕೋಟೆಯಿಂದ ದೇವನಹಳ್ಳಿಗೆ, ಆಗಸ್ಟ್ 07(ಬುಧವಾರ) ರಂದು ಬೆಳಿಗ್ಗೆ 09:00 ಗಂಟೆಗೆ ದೇವನಹಳ್ಳಿಯಿಂದ ದೊಡ್ಡಬಳ್ಳಾಪುರಕ್ಕೆ, ಆಗಸ್ಟ್ 08(ಗುರುವಾರ) ರಂದು ಬೆಳಿಗ್ಗೆ 09:00 ಗಂಟೆಗೆ ದೊಡ್ಡಬಳ್ಳಾಪುರದಿಂದ ನೆಲಮಂಗಲಕ್ಕೆ ಸಂಚರಿಸಲಿದೆ.

ಜಿಲ್ಲೆಯ ನಾಲ್ಕು ತಾಲ್ಲೂಕುಗಳಲ್ಲಿ ಕನ್ನಡ ರಥಯಾತ್ರೆ ಸಂಚರಿಸಲಿದ್ದು ರಥಯಾತ್ರೆಯು ಜಿಲ್ಲೆಗೆ ಆಗಮಿಸುವ ದಿನದಿಂದ, ಜಿಲ್ಲೆಯಿಂದ ಬೀಳ್ಕೊಡುವ ದಿನಾಂಕದ ಸಮಯಗಳಲ್ಲಿ ಆಯಾ ಗ್ರಾಮ / ಗ್ರಾಮ ಪಂಚಾಯತಿ / ತಾಲ್ಲೂಕು ಕೇಂದ್ರಗಳಲ್ಲಿ ರಥಯಾತ್ರೆಯನ್ನು ಗೌರವಯುತವಾಗಿ ಸ್ವಾಗತಿಸಲಾಗುತ್ತದೆ. ಈ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಆಯೋಜಿಸಲಾಗುವ ಮೆರವಣಿಗೆ ಕಾರ್ಯಕ್ರಮದಲ್ಲಿ ಜಿಲ್ಲೆಯ ಕನ್ನಡಪರ ಸಂಘಟನೆಗಳ ಎಲ್ಲಾ ಅಧ್ಯಕ್ಷರುಗಳು ಎಲ್ಲಾ ಪದಾಧಿಕಾರಿಗಳು, ಸಾಹಿತಿಗಳು, ಕಲಾವಿದರು, ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ಕನ್ನಡಾಭಿಮಾನಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಿ ಕಾರ್ಯಕ್ರಮ ಯಶಸ್ವಿಗೊಳಿಸಿ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರ, ರಾಜ್ಯ ಸರ್ಕಾರಗಳ ನಡುವೆ ಸೇತುವೆಯಂತೆ ಕೆಲಸ ನಿರ್ವಹಿಸುವ ಲೀಡ್ ಬ್ಯಾಂಕ್: ಚೈತನ್ಯ ಕಂಚಿ ಬೈಲ್

**ಹುಳಿಯಾರು:** ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರಗಳು ಜಾರಿಗೊಳಿಸುವ ಸಾಲ ಸೌಲಭ್ಯಗಳು ಮುಂತಾದ ಹಲವಾರು ಯೋಜನೆಗಳನ್ನು ಬ್ಯಾಂಕುಗಳ ಮುಖಾಂತರ ಸಾರ್ವಜನಿಕರಿಗೆ ತಲುಪಿಸುವಲ್ಲಿ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ಸೇತುವೆಯಂತೆ ಕೆಲಸ ಮಾಡುತ್ತದೆ ಎಂದು ಲೀಡ್ ಡಿಸ್ಟ್ರಿಕ್ಟ್ ಮ್ಯಾನೇಜರ್ ಚೈತನ್ಯ ಕಂಚಿಬೈಲು ತಿಳಿಸಿದರು.

ಚಿಕ್ಕನಾಯಕನಹಳ್ಳಿ ಭಾರತೀಯ ಸ್ಟೇಟ್ ಬ್ಯಾಂಕ್ ಹಾಗೂ ಆರ್ಥಿಕ ಸಾಕ್ಷರತಾ ಕೇಂದ್ರ ಜಂಟಿಯಾಗಿ ಹೊನ್ನೇಭಾಗಿಯ ಗ್ರಾಪಂ ಆವರಣದಲ್ಲಿ ಏರ್ಪಡಿಸಿದ್ದ ಜನ ಸುರಕ್ಷಾ ಶಿಬಿರದಲ್ಲಿ ಅವರು ಮಾತನಾಡಿದರು.

ಬ್ಯಾಂಕಿನ ಸಾಲ ಸೌಲಭ್ಯಗಳು ಜನರಿಗೆ ತಲುಪುವಲ್ಲಿ ವಿಳಂಬವಾದಲ್ಲಿ ಲೀಡ್ ಬ್ಯಾಂಕ್ ರಾಜ್ಯ ಸರ್ಕಾರದ ಅಧಿಕಾರಿಗಳು ಹಾಗು ಬ್ಯಾಂಕಿನ ವ್ಯವಸ್ಥಾಪಕರುಗಳೊಂದಿಗೆ ಮುಕ್ತ ಮಾತನಾಡಿ ನಿಮಗೆ ಸಹಾಯ ಮಾಡುತ್ತದೆ ಎಂದು ತಿಳಿಸಿದರು.

ಚಿಕ್ಕನಾಯಕನಹಳ್ಳಿ ಭಾರತೀಯ ಸ್ಟೇಟ್ ಬ್ಯಾಂಕ್ ವ್ಯವಸ್ಥಾಪಕರಾದ ಅರುಣ್ ನಾಯಕ್ ಮಾತನಾಡಿ ನಮ್ಮ ಬ್ಯಾಂಕಿನಲ್ಲಿ ದೊರೆಯುವ ಯೋನೋ ಬಿಜಿನೆಸ್ ಮುಖಾಂತರ ಬ್ಯಾಲೆನ್ಸ್, ಸ್ಟೇಟ್ಮೆಂಟ್ ಆಫ್ ಅಕೌಂಟ್, ಹಣ ವರ್ಗಾವಣೆ, ಉಳಿತಾಯ ಖಾತೆಯಿಂದ ಎಟಿಎಂ ಇಲ್ಲದೆ ಹಣ ಡ್ರಾ ಮಾಡುವುದು, ಫಿಕ್ಸೆಡ್ ಡೆಪಾಸಿಟ್ ಮಾಡುವುದು ಮುಂತಾದ ಹಲವಾರು ಸೌಲಭ್ಯಗಳನ್ನು ಹೊಂದಿರುವ ಈ ಡಿಜಿಟಲ್ ಬ್ಯಾಂಕಿನ ವ್ಯವಸ್ಥೆಯನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕೆಂದು ಕರೆ ನೀಡಿದರು. ಚಿಕ್ಕನಾಯಕನಹಳ್ಳಿ ತಾಲೂಕು ಪಂಚಾಯಿತಿ ಎನ್‌ಆರ್‌ಎಲ್‌ಎಮ್ ಸೂಪರ್ವೈಸರ್ ರವಿ ಕೇಂದ್ರ ಸರ್ಕಾರದ ಯೋಜನೆಗಳಾದ ಸುರಕ್ಷಾ, ಜೀವನ ಜ್ಯೋತಿ ವಿಮೆ, ಅಟಲ್ ಪಿಂಚಣಿ ಯೋಜನೆ ಮುಂತಾದ ಯೋಜನೆಗಳನ್ನು ಸದುಪಯೋಗ ಮಾಡಿಕೊಳ್ಳಬೇಕೆಂದು ಕರೆ ನೀಡಿದರು.

ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಆರ್.ಎಂ.ಕುಮಾರಸ್ವಾಮಿ, ಬ್ಯಾಂಕುಗಳಲ್ಲಿ ಇತ್ತೀಚಿಗೆ ಸೈಬರ್ ಅಪರಾಧಗಳು ಹೆಚ್ಚಾಗುತ್ತಿದ್ದು ಎಟಿಎಂನ ಪಿನ್ ಕೋಡ್ ಹೇಳುವುದಾಗಲಿ, ಓಟಿಪಿ ಹೇಳುವುದಾಗಲಿ ಹಾಗೂ ಸುಮ್ಮನೆ ಬರುವ ಮೊಬೈಲ್ ಸಂದೇಶಗಳಿಗೆ ಲಿಂಕ್ ಒತ್ತಬಾರದೆಂದು ಸಲಹೆ ನೀಡಿದರು.

ಲೀಡ್ ಬ್ಯಾಂಕ್ ಅಧಿಕಾರಿ ಕೇಶವ್, ತಾಲೂಕು ಪಂಚಾಯಿತಿಯ ಕಿಶೋರ್, ಗ್ರಾಮ ಪಂಚಾಯಿತಿಯ ಪುಷ್ಪ, ಪಶು ಸಖಿ ಉಮಾ ಉಪಸ್ಥಿತರಿದ್ದರು.



# ಮೈಕ್ರೋ ಫೈನಾನ್ಸ್ ವಿರುದ್ಧ ಹೋರಾಟದ ಸಭೆ

**ಹುಳಿಯಾರು:** ಹುಳಿಯಾರು ಹೋಬಳಿಯ ಬೋರನಕಣಿವೆ ಹತ್ತಿರದ ಸಾಯಿ ಮಂದಿರದಲ್ಲಿ ಮೈಕ್ರೋ ಫೈನಾನ್ಸ್ ವಿರುದ್ಧ ಮುಂದಿನ ಹೋರಾಟದ ರೂಪರೇಷೆಗಳ ಬಗ್ಗೆ ಸಭೆ ನಡೆಸಲಾಯಿತು.

ಸಭೆಯಲ್ಲಿ ತುಮಕೂರು ಡಿಎಸ್ ಎಸ್ ಜಿಲ್ಲಾ ಸಂಘಟನಾ ಸಂಚಾಲಕರಾದ ಕುಂದೂರು ಮುರಳಿಯವರು ಅಧ್ಯಕ್ಷತೆಯನ್ನು ವಹಿಸಿದ್ದರು. ಈ ಸಭೆಯಲ್ಲಿ ಚಿಕ್ಕನಾಯಕನಹಳ್ಳಿ ತಾಲೂಕು ಸಂಚಾಲಕರಾದ ರಮೇಶ್ ಯಾರೇಕಟ್ಟೆ, ಗುಬ್ಬಿ ತಾಲೂಕು ಸಂಚಾಲಕರಾದ ಚೇಳೂರು ಶಿವನಂಜಪ್ಪ, ತಿಪಟೂರು ಸಂಚಾಲಕರಾದ ಮೋಹನ್, ಜಕ್ಕನಹಳ್ಳಿ ಚಿಕ್ಕನಾಯಕನಹಳ್ಳಿ ತಾಲೂಕು ಸಂಘಟನಾ ಸಂಚಾಲಕರಾದ ಮಂಜು ಆಚಾರ್, ಇರ್ಫಾನ್ ಪಾಷ, ಗಡಬನಹಳ್ಳಿ ಶೇಖರ್ ಹಾಗೂ ಮೈಕ್ರೋ ಫೈನಾನ್ಸ್ ನಿಂದ ದೌರ್ಜನ್ಯಕ್ಕೊಳಗದ ಮಹಿಳೆಯರು ಸುತ್ತಮುತ್ತಳ್ಳಿಯ ಜನರು ಪಾಲ್ಗೊಂಡಿದ್ದರು.



**ಹುಳಿಯಾರು ಹೋಬಳಿಯ ಬೋರನಕಣಿವೆ ಹತ್ತಿರದ ಸಾಯಿ ಮಂದಿರದಲ್ಲಿ ಮೈಕ್ರೋ ಫೈನಾನ್ಸ್ ವಿರುದ್ಧ ಮುಂದಿನ ಹೋರಾಟದ ರೂಪರೇಷೆಗಳ ಬಗ್ಗೆ ಸಭೆ ನಡೆಸಲಾಯಿತು.**

## ಯುವಕನ ಪತ್ತೆಗೆ ಮನವಿ

**ಚಿಕ್ಕಬಳ್ಳಾಪುರ:** ತಾಲ್ಲೂಕಿನ ಗುಂತಪ್ಪನಹಳ್ಳಿ ಗ್ರಾಮದ ನಿವಾಸಿ ನಾರಾಯಣಸ್ವಾಮಿ ಮಗನಾದ 16 ವರ್ಷದ ಎನ್. ನಂದೀಶ್ ಎಂಬ ಯುವಕ ಮನೆಯಿಂದ ಹೊಲದಬಳಿ ಹೋಗಿ ಬರುವುದಾಗಿ ತಿಳಿಸಿ ಹೋದವನು ಕಾಣೆಯಾಗಿರುವ ಬಗ್ಗೆ ದೂರು ದಾಖಲಾಗಿದ್ದು, ಇವರ ಪತ್ತೆಗೆ ಸಹಕರಿಸುವಂತೆ ಮನವಿ ಮಾಡಲಾಗಿದೆ. 16 ವರ್ಷ ವಯಸ್ಸಿನ ಎನ್. ನಂದೀಶ್, ಬಣ್ಣ ಗೋದಿ ಮೈ ಬಣ್ಣ, ಸಾದರಣ ಮೈ ಕಟ್ಟು, ಕೋಲು ಮುಖ ಹೊಂದಿದ್ದು, 5 ಅಡಿ ಎತ್ತರವಿರುತ್ತಾರೆ. ಬಿಳಿ ಬಣ್ಣದ ಶರ್ಟ್ ಮತ್ತು ಪ್ಯಾಂಟ್ ಧರಿಸಿದ್ದು, ಕನ್ನಡ ಮತ್ತು ತೆಲುಗು ಮಾತನಾಡುತ್ತಾನೆ. ಈ ಯುವಕನ ಬಗ್ಗೆ ಮಾಹಿತಿ ಸಿಕ್ಕಿದ್ದಲ್ಲಿ ಹತ್ತಿರದ ಹಾಗೂ ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಪೊಲೀಸ್ ಇನ್ ಸ್ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ವೀರಶೈವ-ಲಿಂಗಾಯತ ಜಾತಿ ಹಾಗೂ ಉಪಜಾತಿಗೆ ಸೇರಿದ ಸಮುದಾಯದ ಜನರ (ಪ್ರವರ್ಗ-3ಬಿ) ಅಭಿವೃದ್ಧಿಗಾಗಿ 2024-25 ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಆನ್ ಲೈನ್ ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಆಗಸ್ಟ್ 31 ರೊಳಗೆ ಸಲ್ಲಿಸಬೇಕು.

**ಯೋಜನೆಗಳ ವಿವರ:** ಶೈಕ್ಷಣಿಕ ಸಾಲ ಯೋಜನೆಗಳು, ಜೀವಜಲ ಯೋಜನೆ, ಕಾಯಕ ಕಿರಣ ಯೋಜನೆ, ಭೋಜನಾಲಯ ಕೇಂದ್ರ, ವಿಭೂತಿ ನಿರ್ಮಾಣ ಘಟಕ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ: , ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು ಹಾಗೂ 2023-24ನೇ ಸಾಲಿಗೆ ಅರ್ಜಿ ಸಲ್ಲಿಸಿ ಆಯ್ಕೆಯಾಗದವರು ಅದೇ ಯೋಜನೆಗೆ ಈ ವರ್ಷ ಮರು ಅರ್ಜಿಸಲ್ಲಿಸುವ ಅಗತ್ಯತೆ ಇರುವುದಿಲ್ಲ, ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ https://kvldcl.karnataka.gov.in ಅಥವಾ ನಿಗಮದ ದೂರವಾಣಿ ಸಂಖ್ಯೆ 080 22865522/ 9900012351 ಗೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿ ದೂ. ಸಂ: 08156-277039 ಗೆ ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಲ ಸೌಲಭ್ಯ ಪಡೆಯಲು ಅರ್ಜಿ

**ಚಿಕ್ಕಬಳ್ಳಾಪುರ:** ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2024-25ನೇ ಸಾಲಿನಲ್ಲಿ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಹಾಗೂ ಈ ಯೋಜನೆಗಳಡಿ ಸಾಲ-ಸೌಲಭ್ಯವನ್ನು ಪಡೆಯಲು ಇಚ್ಛಿಸುವವರು ಕಡ್ಡಾಯವಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಆಗಸ್ಟ್ 31 ರೊಳಗೆ ಸಲ್ಲಿಸಬೇಕು.

**ಯೋಜನೆಗಳ ವಿವರ:** ಶೈಕ್ಷಣಿಕ ಸಾಲ ಯೋಜನೆ (ಕೊನೆ ದಿನಾಂಕ ಇರುವುದಿಲ್ಲ), ಶ್ರೀ ಶಹಜೀರಾಜೇ ಸಮೃದ್ಧಿ ಯೋಜನೆ (ಸ್ವಯಂ ಉದ್ಯೋಗ ನೇರ ಸಾಲ ಮತ್ತು ಸಹಾಯಧನ), ಜೀಜಾವು ಜಲ ಭಾಗ್ಯ ಯೋಜನೆಯ (ಗಂಗಾ ಕಲ್ಯಾಣ ನೀರಾವರಿ ಯೋಜನೆ), ರಾಜ ಶ್ರೀಶಾಹುಮಹಾರಾಜ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ, ಮರಾಠ ಮಿಲ್ಟ್ರಿ ಹೋಟೆಲ್ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆಯ (ವಾಣಿಜ್ಯ ಬ್ಯಾಂಕ್ ಗಳ ಸಹಯೋಗದೊಂದಿಗೆ), ಸ್ವಾವಲಂಬಿ ಸಾರಥಿ ಯೋಜನೆ, ಸ್ವಾತಂತ್ರ್ಯ ಅಮೃತ್ ಮಹೋತ್ಸವ ಮುನ್ನಡೆ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು.2023-24ನೇ ಸಾಲಿಗೆ ಅರ್ಜಿ ಸಲ್ಲಿಸಿ ಆಯ್ಕೆಯಾಗದವರು ಈ ವರ್ಷ ಮರು ಅರ್ಜಿ ಹಾಕಬಾರದು. ಸರ್ಕಾರವು ಹಾಗೂ ನಿಗಮವು ಕಾಲಕಾಲಕ್ಕೆ ವಿಧಿಸುವ ಇನ್ನಿತರ ಅರ್ಹತೆ/ನಿಬಂಧನೆಗಳನ್ನು ಹೊಂದಿದವರಾಗಿರಬೇಕು. ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು.ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ https://kvldcl.karnataka.gov.in ಅಥವಾ ನಿಗಮದ ದೂರವಾಣಿ ಸಂಖ್ಯೆ 8867537799 ದೂ. ಸಂ:080-29903994 ಗೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿ ದೂ.ಸಂ: 08156-277039 ಗೆ ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಡುಗೆ ಸಹಾಯಕರ ಹುದ್ದೆಗೆ ಅರ್ಜಿ

**ಚಿಕ್ಕಬಳ್ಳಾಪುರ:** ಚಿಂತಾಮಣಿ ನಗರಸಭೆ ವ್ಯಾಪ್ತಿಯ ವಾರ್ಡ್ ಸಂಖ್ಯೆ-3 ರಲ್ಲಿರುವ ಸರ್ಕಾರಿ ಹಿರಿಯ ಉರ್ದುಪಾಠ ಶಾಲೆ, ವೆಂಕಟಗಿರಿ ಕೋಟೆ ಶಾಲೆಯಲ್ಲಿ ಅಕ್ಷರ ದಾಸೋಹ ಯೋಜನೆಯಡಿ ಖಾಲಿ ಇರುವ ಅಡುಗೆ ಸಹಾಯಕರನ್ನು (1 ಮಹಿಳೆ) ನೇಮಕ ಮಾಡಲು ಅರ್ಜಿಗಳನ್ನು ಆಗಸ್ಟ್ 12 ರಿಂದ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಸಲ್ಲಿಸಲು ಆಗಸ್ಟ್ 19 ಕೊನೆ ದಿನ. ಹೆಚ್ಚಿನ ಮಾಹಿತಿಗಾಗಿ ಚಿಂತಾಮಣಿ ನಗರಸಭೆ ಕಚೇರಿಯ ಡೇ-ನಲ್ಮ್ ಶಾಖೆಗೆ ಅಥವಾ ದೂರವಾಣಿ ಸಂಖ್ಯೆ-08154-252117 ಗೆ ಸಂಪರ್ಕಿಸಬಹುದೆಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ಲಾಸ್ಟಿಕ್ ರಾಷ್ಟ್ರಧ್ವಜದ ಮಾರಾಟ ಹಾಗೂ ಬಳಕೆ ನಿಷೇಧ

**ಚಾಮರಾಜನಗರ:** ನಗರಸಭೆ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ರಾಷ್ಟ್ರಧ್ವಜವನ್ನು ನಿಷೇಧಿಸಲಾಗಿದ್ದು, 78ನೇ ಸ್ವಾತಂತ್ರ ದಿನಾಚರಣೆಯ ಪ್ರಯುಕ್ತ ಆಗಸ್ಟ್ 15ರಂದು ಪ್ಲಾಸ್ಟಿಕ್ ಮಾರಾಟಗಾರರು ಹಾಗೂ ಸಾರ್ವಜನಿಕರು ನಿಷೇಧಿತ ಪ್ಲಾಸ್ಟಿಕ್ ರಾಷ್ಟ್ರಧ್ವಜವನ್ನು ಬಳಸಬಾರದೆಂದು ನಗರಸಭೆಯ ಪೌರಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪಟ್ಟಣ ಪಂಚಾಯಿತಿ ಕಾರ್ಯಾಲಯ, ಬೋಗಾದಿ**
ಮೈಸೂರು ತಾಲ್ಲೂಕು ಮತ್ತು ಜಿಲ್ಲೆ - 570026. ದೂ:0821-2331099
ಇಮೇಲ್: itstaff_ulb_bogadi@yahoo.com ವೆಬ್‌ಸೈಟ್: www.bogaditown.mrc.gov.in
ಸಂಖ್ಯೆ:ಪ.ಪಂ.ಬೋಗಾದಿ/ತಾ.ಶಾ/ಟೆಂಡರ್.ಸಿ.ಆರ್.03/2024-25 ದಿನಾಂಕ:01.08.2024
**ಇ-ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ**
2024-25ನೇ ಸಾಲಿನ 15ನೇ ಹಣಕಾಸು ಯೋಜನೆಯ ನಿರ್ಬಂಧಿತ ಅನುದಾನದಲ್ಲಿ ಬೋಗಾದಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸಂಬಂಧಿತ ಕಾಮಗಾರಿಯನ್ನು ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆಧ್ಯಾದೇಶ 1999 ಮತ್ತು ನಿಯಮಗಳು 2000ದಂತೆ, ಇ-ಪ್ರಕ್ಯೂರ್‌ಮೆಂಟ್ ಸೆಲ್ ಬೆಂಗಳೂರುರವರಲ್ಲಿ ನೋಂದಾಯಿತ ಸಿವಿಲ್ ಗುತ್ತಿಗೆದಾರರುಗಳಿಂದ ಇ-ಪೋರ್ಟಲ್ **https://kppp.karnataka.gov.in** ಮೂಲಕ ಟೆಂಡರ್‌ನ್ನು ಆಹ್ವಾನಿಸಲಾಗಿದ್ದು, ಆಸಕ್ತ ಅರ್ಹ ಸಿವಿಲ್ ಗುತ್ತಿಗೆದಾರರು ತಮ್ಮ ಟೆಂಡರ್‌ಗಳನ್ನು **KW-2** ರ ಪ್ರಮಾಣಿತ ಟೆಂಡರ್ ದಸ್ತಾವೇಜಿನ ನಿಯಮಗಳಂತೆ ಟೆಂಡರ್‌ನಲ್ಲಿ ಭಾಗವಹಿಸಬಹುದಾಗಿರುತ್ತದೆ. **INDENT NO. DMA/2024-25/WS/WORK_INDENT20399** ಅಂದಾಜು ಮೊತ್ತ ರೂ.36.70 ಲಕ್ಷ, ಇ.ಎಂ.ಡಿ. ರೂ.73,400/-ಗಳ ಟೆಂಡರ್‌ನ್ನು **ದಿನಾಂಕ:17-08-2024ರ ಸಂಜೆ 5.30 ಗಂಟೆಯೊಳಗೆ** ಇ-ಪೋರ್ಟಲ್‌ನಲ್ಲಿ ಸಲ್ಲಿಸತಕ್ಕದ್ದು. **ದಿನಾಂಕ:19-08-2024ರಂದು ಬೆಳ್ಳಿಗೆ 11:30 ಗಂಟೆಗೆ** ಪೋರ್ಟಲ್‌ನಲ್ಲಿ ಭರ್ತಿಮಾಡಿದ ಟೆಂಡರ್‌ಗಳನ್ನು ತೆರೆಯಲಾಗುವುದು (ಸಾಧ್ಯವಾಗದಿದ್ದಲ್ಲಿ ಮುಂದಿನ ದಿನಾಂಕದಂದು ಟೆಂಡರ್ ತೆರೆಯಲಾಗುವುದು ಹಾಗೂ ತಿದ್ದುಪಡಿ/ಬದಲಾವಣೆಗಳಿದ್ದಲ್ಲಿ ಪತ್ರಿಕೆ ಪ್ರಕಟಣೆ ಹೊರಡಿಸಲಾಗುವುದಿಲ್ಲ) ಟೆಂಡರ್ ಅಂಗೀಕರಿಸುವ ತಿರಸ್ಕರಿಸುವ ಹಕ್ಕನ್ನು ಪಟ್ಟಣ ಪಂಚಾಯಿತಿ ಬೋಗಾದಿ ಕಾಯ್ದಿರಿಸಿಕೊಂಡಿದೆ. ಹೆಚ್ಚಿನ ವಿವರಗಳಿಗೆ ಪಟ್ಟಣ ಪಂಚಾಯಿತಿಯ ವೆಬ್ ಸೈಟ್ **www.bogaditown.mrc.gov.in** ರ ಟೆಂಡರ್ ವಿಭಾಗದಲ್ಲಿ ವೀಕ್ಷಿಸಬಹುದಾಗಿದೆ.
ಸಹಿ/- ಮುಖ್ಯಾಧಿಕಾರಿಗಳು
ಪಟ್ಟಣ ಪಂಚಾಯಿತಿ, ಬೋಗಾದಿ
DIPR/MYS/KAVITA/365/24-25

# ಕನ್ನಡ ದುಂಡು ಬರವಣಿಗೆ ಕಾರ್ಯಗಾರ

**ಹುಳಿಯಾರು:** ಹುಳಿಯಾರಿನ ಬಿ.ಎಂ.ಎಸ್. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಐ.ಕ್ಯೂ.ಎ.ಸಿ. ಮತ್ತು ಕನ್ನಡ ವಿಭಾಗದ ವತಿಯಿಂದ ಪ್ರಥಮ ಬಿ.ಎ. ಮತ್ತು ಬಿ.ಕಾಂ. ವಿದ್ಯಾರ್ಥಿಗಳಿಗಾಗಿ ಏಳು ದಿನಗಳ ''ಕನ್ನಡ ದುಂಡು ಬರವಣಿಗೆ ಕಾರ್ಯಗಾರ''ವನ್ನು ಹಮ್ಮಿಕೊಂಡಿದ್ದು, ಕಾರ್ಯಗಾರವನ್ನು ಉದ್ಘಾಟಿಸಲಾಯಿತು. ''ಸಿರಿಗನ್ನಡಂ ಗೆಲ್ಗೆ ಸಿರಿಗನ್ನಡಂ ಬಾಳ್ಗೆ'' ಎಂದು ಬಿಳಿ ಹಾಳೆಯ ಮೇಲೆ ಬರೆಯುವ ಮೂಲಕ ಪ್ರಾಂಶುಪಾಲರಾದ ವೀರಣ್ಣ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ''ಮಣ್ಣನ್ನು ಅಚ್ಚಿನಲ್ಲಿ ಹಾಕಿ ರೂಪ ಕೊಡದೆ ಇಟ್ಟಿಗೆ ತಯಾರಿಸಿದರೆ ಅದು ಹೇಗೆ ಆಕಾರ, ಬಾಳಿಕೆ, ತಾಳಿಕೆ ಬರುವುದಿಲ್ಲವೋ ಹಾಗೆ ಸ್ಪಷ್ಟ ಹಾಗೂ ದುಂಡಾಗಿರದ ಬರವಣಿಗೆ ಕೂಡ ನಮ್ಮ ಅಪಕ್ವತೆಯನ್ನು ಸೂಚಿಸುತ್ತದೆ. ಅದೇ ರೀತಿ ಉತ್ತಮ ಬರವಣಿಗೆ ನಮ್ಮ ವ್ಯಕ್ತಿತ್ವವನ್ನು ಕೂಡ ಪ್ರತಿನಿಧಿಸುತ್ತದೆ. ಹಾಗಾಗಿ ವಿದ್ಯಾರ್ಥಿಗಳು ಉತ್ತಮ ಬರವಣಿಗೆಗಳನ್ನು ರೂಢಿಸಿಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು. ಐ.ಕ್ಯೂ.ಎ.ಸಿ. ಸಂಚಾಲಕರಾದ ಪ್ರೊ. ಮಂಜುನಾಥ ಕೆ.ಎಸ್. ಮಾತನಾಡಿ ದುಂಡಾಗಿ ಬರೆಯುವ ಕಲೆಯನ್ನು ಪ್ರಾಥಮಿಕ ಮತ್ತು ಮಾಧ್ಯಮಿಕ ಹಂತದಲ್ಲೇ ಕಲಿಯಬೇಕು. ಆದರೆ ಕೆಲವರು ನಿಷ್ಕಾಳಜಿಯಿಂದ ಬರವಣಿಗೆಯನ್ನು ಕೆಡಿಸಿಕೊಂಡಿರುತ್ತಾರೆ. ಅಂತವರು ತಮ್ಮ ಬರವಣಿಗೆಯನ್ನು ಈಗಲೂ ಸುಧಾರಿಸಿಕೊಳ್ಳಬಹುದು. ಹಾಗಾಗಿಯೇ ಈ ಕಾರ್ಯಗಾರವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು. ಕನ್ನಡ ವಿಭಾಗದ ಮುಖ್ಯಸ್ಥರು ಹಾಗೂ ಕಾರ್ಯಕ್ರಮದ ಸಂಚಾಲಕರೂ ಆದ ಡಾ. ಮೋಹನ್ ಕುಮಾರ್ ಮಿರ್ಲೆ ಮಾತನಾಡಿ ಉತ್ತಮ ಬರವಣಿಗೆಯನ್ನು ಪ್ರೇರೇಪಿಸುವ ದೃಷ್ಟಿಯಿಂದಲೇ ಹಿಂದೆ ಪ್ರಾಥಮಿಕ ಮತ್ತು ಪ್ರೌಢಶಾಲಾ ಹಂತಗಳಲ್ಲಿ ಕನ್ನಡ ಭಾಷಾ ವಿಷಯದ ಪರೀಕ್ಷೆಗಳಲ್ಲಿ ದುಂಡಾದ ಬರವಣಿಗೆಗೆ ಐದು ಅಂಕಗಳನ್ನು ನಿಗದಿಪಡಿಸುತ್ತಿದ್ದರು. ಇಷ್ಟಾದರೂ ಕೆಲವು ವಿದ್ಯಾರ್ಥಿಗಳೂ ತಮ್ಮ ಅಸ್ಪಷ್ಟ ಬರವಣಿಗೆಗಳಿಂದ ಪರೀಕ್ಷೆಗಳಲ್ಲಿ ಅಂಕಗಳನ್ನು ಕಳೆದುಕೊಳ್ಳುತ್ತಿದ್ದಾರೆ. ಈ ಕಾರ್ಯಗಾರದಲ್ಲಿ ಅಂತಹ ವಿದ್ಯಾರ್ಥಿಗಳನ್ನು ಗುರುತಿಸಿ ಬರವಣಿಗೆಯ ಶೈಲಿಯನ್ನು ಕಲಿಸಲಾಗುವುದು ಎಂದು ಹೇಳಿದರು. ಮೌನಶ್ರೀ ವಿ. ಆರಂಭ ಗೀತೆಯನ್ನು ಹಾಡಿದರು. ಉಪನ್ಯಾಸಕರಾದ ಚಂದ್ರಹಾಸ ಬಿ.ಆರ್. ಸ್ವಾಗತಿಸಿದರು.

# ಆರೋಗ್ಯ ರಕ್ಷಣೆಗೆ ಮುನ್ನೆಚ್ಚರಿಕೆ ಅತ್ಯವಶ್ಯಕ



**ವಿಜಯಪುರ:** ಒಂದು ನಿರ್ದಿಷ್ಟ ರೋಗ ಅದರ ಮುಂದಿನ ಹಂತವನ್ನು ಅಥವಾ ಯಾವುದೇ ರೋಗದ ಸಾಧ್ಯತೆಯನ್ನು ಮುಂಚಿತವಾಗಿ ಕಂಡುಹಿಡಿಯಲು ಮುಂಜಾಗರಕತೆ ಹಾಗೂ ಮುನ್ನೆಚ್ಚರಿಕೆ ಅತ್ಯವಶ್ಯಕವೆಂದು ದಾರಿದೀಪ ಫೌಂಡೇಶನ್ ಖಜಾಂಚಿ ದೀಪಾ ರವರು ತಿಳಿಸಿದರು

ಇಲ್ಲಿನ ಗ್ರಾಮ ದೇವತೆ, ಗಂಗಾ ತಾಯಿ. ದೇವಾಲಯದಲ್ಲಿ ಶುಕ್ರವಾರದಂದು ಗಂಗಾತಾಯಿ ಜಾತ್ರೆ ಸಮಿತಿ ಹಾಗೂ ದೇವನಹಳ್ಳಿಯ ದಾರಿದೀಪ ಫೌಂಡೇಶನ್, ಹಿಂಡ್ ಲ್ಯಾಬ್ ರವರುಗಳ ಸಂಯುಕ್ತಆಶ್ರಯದಲ್ಲಿ ಕಾರ್ಮಿಕ ಕಲ್ಯಾಣ ಇಲಾಖೆಯ ಸಹಕಾರದೊಂದಿಗೆ ಏರ್ಪಡಿಸಲಾಗಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಾಗೂ 19 ರೀತಿಯ ರಕ್ತ ಪರೀಕ್ಷೆ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಕಟ್ಟಡ ಕಾರ್ಮಿಕರು ಹಾಗೂ ಅವರ ಅವಲಂಬಿತರು ಹಾಗೂ ಬಡವರಿಗೆ ಆರೋಗ್ಯದ ಬಗ್ಗೆ ಕಾಳಜಿ ಮೂಡಿಸುವ ಸಲುವಾಗಿ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತಪರಿಕ್ಷಾ ಶಿಬಿರ ಏರ್ಪಡಿಸಲಾಗಿದ್ದು, ಈ ಕಾರ್ಯಕ್ರಮದಲ್ಲಿ ರಕ್ತ ಪರೀಕ್ಷೆಯಲ್ಲಿ ಲಿವರ್ ಕಾರ್ಯ ಪರೀಕ್ಷೆ, ಆಡಿಯೋ ಮೆಟ್ರಿ ಸ್ಕ್ರೀನ್ ಟೆಸ್ಟ್, ದೃಷ್ಟಿ ತಪಾಸಣೆ, ಕಂಪ್ಲೀಟ್ ಬ್ಲಡ್ ಕೌಂಟ್, ಇಎಸ್ಆರ್ ಪರೀಕ್ಷೆ, ಹೆಚ ಬಿ ಎ 1 ಸಿ ಪರೀಕ್ಷೆ, ಕಿಡ್ನಿ ಕಾರ್ಯ ಪರೀಕ್ಷೆ, ಲಿಪಿಡ್ ಪ್ರೊಫೈಲ್, ಮಲೇರಿಯಾ ಪ್ಯಾರಸೈಟ್ ಪರೀಕ್ಷೆ., ಹೆಚ್ ಐ ವಿ, ಹೆಪಟೈಟಿಸ್ ಬಿ ಮೊದಲಾಗಿ 19 ಪರೀಕ್ಷೆಗಳನ್ನು ನಡೆಸಲಾಗುತ್ತಿದ್ದು ಮುಂದಿನ ಹದಿನೈದು ದಿನಗಳ ನಂತರ ಇದರ ಫಲಿತಾಂಶವನ್ನು ಇದೇ ದೇವಾಲಯದ ಆವರಣದಲ್ಲಿ ನೀಡಲಾಗುವುದೆಂದು ತಿಳಿಸಿದರು. ಜಾತ್ರಾ ಸಮಿತಿ ಕಾರ್ಯದರ್ಶಿ ಎನ್ ರುದ್ರಮೂರ್ತಿ ಮಾತನಾಡುತ್ತಾ ಕಳೆದ ಎರಡು ವರ್ಷಗಳಿಂದ ದಾರಿದೀಪ ಫೌಂಡೇಶನ್ ಇದೇ ರೀತಿ ಹತ್ತಾರು ಸಾವಿರ ಮಂದಿಗೆ ಆರೋಗ್ಯ ತಪಾಸಣೆ ನಡೆಸಲಾಗಿದ್ದು ಇದೆ ಚಿಕಿತ್ಸೆಗಳನ್ನು ಖಾಸಗಿಯಾಗಿ ಮಾಡಿಸಿಕೊಳ್ಳಬೇಕೆಂದರೆ ಹತ್ತಾರು ಸಾವಿರ ರೂ ವೆಚ್ಚ ಮಾಡಬೇಕಾಗಿದ್ದು ಇದರ ಫಲಿತಾಂಶವನ್ನು ಸರ್ಕಾರಿ ಆಸ್ಪತ್ರೆ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿಯೂ ತೋರಿಸಿ ಅವಶ್ಯಕ ಚಿಕಿತ್ಸೆಗಳನ್ನು ಪಡೆದುಕೊಳ್ಳಬಹುದು ತಿಳಿಸಿದರು. ಜಾತ್ರಾ ಸಮಿತಿಯ ಅಧ್ಯಕ್ಷರಾದ ನಾಗರಾಜು, ಚೆನ್ನಕೃಷ್ಣ, ಗಂಗಾಮತಸ್ಥರ ಜಿಲ್ಲಾ ಸಮಿತಿಯ ನಿರ್ದೇಶಕ ಮುನಿರಾಜು, ಕಸಾಪ ತಾಲೂಕು ಮಾಜಿ ಅಧ್ಯಕ್ಷರಾದ ಎಂ ನಾರಾಯಣಸ್ವಾಮಿ, ವಿಜಯ ಕೃಷ್ಣ, ಲ್ಯಾಬೋರೇಟರಿ ಸಿಬ್ಬಂದಿ ವರ್ಗದವರಾದ ಸುಮನ್, ಮೈತ್ರಿ, ಗಾಯತ್ರಿ, ಮಲ್ಲಿಕಾರ್ಜುನ್, ಯಶೋಧ, ಸತೀಶ್, ಚೈತ್ರ ಹಾಗೂ ಡಾಕ್ಟರ್ ಮಲ್ಲೋತ್ರ ರವರುಗಳು ಉಪಸ್ಥಿತರಿದ್ದರು.

# ಮುಮ್ಮಡಿ ಕೃಷ್ಣರಾಜ ಒಡೆಯರ್ ಇತಿಹಾಸ ತಿಳಿಯಿರಿ

ಚಾಮರಾಜನಗರ: ಮುಮ್ಮಡಿ ಕೃಷ್ಣರಾಜ ಒಡೆಯರ್ ಚಾಮರಾಜನಗರದ ನಿರ್ಮಾತೃವಾಗಿದ್ದು ಕಲೆ ,ಸಾಹಿತ್ಯ, ಕನ್ನಡ ಭಾಷೆ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯ ಪರವಾಗಿದ್ದು ಸಮಾಜದ ಅಭಿವೃದ್ಧಿಯ ಕಳಕಳಿಯ ದೃಷ್ಟಿಯಿಂದ ಶ್ರೇಷ್ಠ ಕಾರ್ಯಗಳನ್ನು ಮಾಡಿದವರು ಎಂದು ಶ್ರೀ ಚಾಮರಾಜೇಶ್ವರ ದೇವಾಲಯದ ಆಡಳಿತ ಅಧಿಕಾರಿ ಮಹೇಶ್ ತಿಳಿಸಿದರು.

ಅವರು ಅಖಿಲ ಕರ್ನಾಟಕ ಕನ್ನಡ ಮಹಾಸಭಾ, ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ,ಶ್ರೀಗಂಧ ಕನ್ನಡ ಯುವ ವೇದಿಕೆ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಚಾಮರಾಜನಗರದ ನಿರ್ಮಾತೃ ಮುಮ್ಮಡಿ ಕೃಷ್ಣರಾಜ ಒಡೆಯರ್ ಕೊಡುಗೆಗಳು ಹಾಗೂ ಸನ್ಮಾನ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡುತ್ತ ಚಾಮರಾಜನಗರದ ಶ್ರೀ ಚಾಮರಾಜೇಶ್ವರ ಸ್ವಾಮಿ ದೇವಾಲಯ ಸರ್ಕಾರ ಮತ್ತು ಭಕ್ತರ ನಡುವಿನ ಮೂಲಕ ಅಭಿವೃದ್ಧಿಯತ್ತ ಸಾಗುತ್ತಿದೆ. ಶ್ರೀ ಚಾಮರಾಜೇಶ್ವರ ರಥೋತ್ಸವ ವೈಭವದಿಂದ ನಡೆಯಿತು. ಮುಮ್ಮಡಿ ಕೃಷ್ಣರಾಜ ಒಡೆಯರ್ ಜಯಂತಿ ಅಂಗವಾಗಿ ಗೌರವ ಸನ್ಮಾನಕ್ಕೆ ಪಾತ್ರರಾಗಿರುವ ದೇವಾಲಯದ ಅರ್ಚಕರಾದ ಅಣ್ಣಯ್ಯ, ಬಂಡಿಗಾರ್ ಮಹೇಶ್ ಹಾಗೂ ಉತ್ಸವ ಸಮಿತಿಯ ಸತೀಶ್ ರವರಿಗೆ ಗೌರವ ಸಲ್ಲಿಸುತ್ತಿರುವುದು ಅಭಿನಂದನೆಯವಾದದ್ದು ಎಂದರು.

ಉದ್ಘಾಟನೆಯನ್ನು ಸಮಾಜ ಸೇವಕರಾದ ವೆಂಕಟ ನಾಗಪ್ಪ ಶೆಟ್ಟಿ ನೆರವೇರಿಸಿ ಕನ್ನಡ ಸಾಹಿತ್ಯ ಪರಿಷತ್ತು ಉತ್ತಮ ಕಾರ್ಯಗಳನ್ನು ನೆರವೇರಿಸಿಕೊಂಡು ಬರುತ್ತಿದೆ. ಚಾಮರಾಜನಗರದ ನಿರ್ಮಾಣಕ್ಕೆ ಕಾರಣವಾದ ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರ ಇತಿಹಾಸ ತಿಳಿಯುವ ಕಾರ್ಯಕ್ರಮ ಬಹಳ ಶ್ರೇಷ್ಠವಾದದ್ದು. ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರು ಮೈಸೂರು ಪ್ರಾಂತ್ಯದ ಅಭಿವೃದ್ಧಿಯ ಹರಿಕಾರರು. ಚಾಮರಾಜನಗರ ಮತ್ತು ಮೈಸೂರಿನ ನಡುವೆ ಅವಿನಾ ಭಾವ ಸಂಬಂಧವಿದೆ ಎಂದು ತಿಳಿಸಿದರು.

ಅಖಿಲ ಕರ್ನಾಟಕ ಕನ್ನಡ ಮಹಾಸಭೆಯ ಅಧ್ಯಕ್ಷರಾದ ಶ್ರೀನಿವಾಸ್ ಗೌಡರವರು ಮಾತನಾಡಿ ಚಾಮರಾಜನಗರದ ಶ್ರೀ ಚಾಮರಾಜೇಶ್ವರ ದೇವಾಲಯವನ್ನು ನಿರ್ಮಾಣ ಮಾಡಿದ್ದಅರಿಕುಠಾರ ಸ್ಥಳವನ್ನು ಚಾಮರಾಜನಗರ ವೆಂದು ನಾಮಕರಣ ಮಾಡಿ ಶ್ರೀ ಚಾಮರಾಜೇಶ್ವರ ದೇವಾಲಯವನ್ನು ಸ್ಥಾಪನೆ ಮಾಡಿ ನಗರದ ಜನರ ನೆಮ್ಮದಿಗೆ ಕಾರಣರಾಗಿದ್ದಾರೆ. ಮೈಸೂರು ಸಂಸ್ಥಾನದ ಮಹಾರಾಜರನ್ನು ನೆನೆಯುವುದು ನಮ್ಮೆಲ್ಲರ ಕರ್ತವ್ಯವೂ ಆಗಿದೆ ಎಂದರು.

ಸಭೆಯ ಅಧ್ಯಕ್ಷತೆಯನ್ನು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಸುರೇಶ್ ಎನ್ ಋಗ್ವೇದಿ ಮಾತನಾಡಿ ಕನ್ನಡದ ಭೋಜ ಎಂದೇ ಪ್ರಸಿದ್ಧರಾಗಿ ಕನ್ನಡ ಸಾಹಿತ್ಯ ,ಪರಂಪರೆ, ಪದ್ಯ, ಗದ್ಯ ಸಾಹಿತ್ಯ ರಚನೆಗೆ, ಅನೇಕ ಪ್ರಸಿದ್ಧ ಸಾಹಿತಿಗಳಿಗೆ ರಾಜ ಆಶ್ರಯವನ್ನು ನೀಡಿ ಬೆಳಗಿಸಿದ ಮುಮ್ಮಡಿ ಕೃಷ್ಣರಾಜ ಒಡೆಯರ್ ಕನ್ನಡದ ಬೋಜ ಎಂದೇ ನಾಮಾಂಕಿತರಾಗಿದ್ದಾರೆ. ಆಡಳಿತ ಅಭಿವೃದ್ಧಿ,ನೀರಾವರಿ, ಕಲೆ, ಸಾಹಿತ್ಯ ಸಂಸ್ಕೃತಿ, ಧರ್ಮ ಇಂದು ಮೈಸೂರು ಪ್ರಾಂತ್ಯದಲ್ಲಿ ಅಭಿವೃದ್ಧಿಯ ಪಥಕ್ಕೆ ಸಾಗಿರುವುದಕ್ಕೆ ಕಾರಣ ಮೈಸೂರು ಸಂಸ್ಥಾನದ ಕೊಡುಗೆ ಆಗಿದೆ. ಮೈಸೂರು ಚಾಮರಾಜನಗರ ತಾಯಿ ಮಕ್ಕಳ ಸಂಬಂಧವೆಂದು ತಿಳಿಸಿದರು. ಕನ್ನಡ ಸಾಹಿತ್ಯ ಪರಿಷತ್ತು ರಚನೆಯಾದದ್ದೇ ಮೈಸೂರು ಸಂಸ್ಥಾನದ ನಾಲ್ವಡಿ ಕೃಷ್ಣರಾಜ ಒಡೆಯರ್, ಸರ್ ಎಂ ವಿಶ್ವೇಶ್ವರಯ್ಯ ಮತ್ತು ಸರ್ ಮಿರ್ಜಾ ಇಸ್ಮಾಯಿಲ್ ರವರ ದೂರದೃಷ್ಟಿಯ ಫಲವಾಗಿ ಇಂದು ನಾಡಿನಾದ್ಯಂತ ಶತಮಾನದ ಸಂಸ್ಥೆಯಾಗಿ ಸೇವೆಯನ್ನು ಸಲ್ಲಿಸುತ್ತಿದೆ ಎಂದರು.

ಮುಮ್ಮಡಿ ಕೃಷ್ಣರಾಜ ಒಡೆಯರ್ ಕುರಿತು ಬರಹಗಾರ ಎಸ್ ಲಕ್ಷ್ಮೀನರಸಿಂಹ, ಮಾಜಿ ನಗರಸಭಾ ಸದಸ್ಯ ಗಣೇಶ್ ದೀಕ್ಷಿತ್ ಮಾತನಾಡಿದರು.

# ಕಾನೂನು ತಜ್ಞರ ಮೊರೆ ಹೋಗಲು ತಹಸೀಲ್ದಾರ್ ನಿರ್ಧಾರ

## ಹುಳಿಯಾರು ಪಪಂ ವಾಣಿಜ್ಯ ಮಳಿಗೆಗಳ ತೆರವು ವಿಚಾರ



**ಹುಳಿಯಾರು:** ಹುಳಿಯಾರು ಪಟ್ಟಣ ಪಂಚಾಯ್ತಿ ವಾಣಿಜ್ಯ ಮಳಿಗೆಗಳ ತೆರವು ವಿಚಾರವಾಗಿ ಕಾನೂನು ತಜ್ಞರ ಮೊರೆ ಹೋಗಲು ತಹಸೀಲ್ದಾರ್ ಕೆ.ಪುರಂದರ ಅವರು ನಿರ್ಧರಿಸಿದ್ದಾರೆ. ಶುಕ್ರವಾರ ಪಪಂ ಸದಸ್ಯರು ಹಾಗೂ ಬಾಡಿಗೆದಾರರ ಪ್ರತ್ಯೇಕ ಸಭೆ ನಡೆಸಿ ಎರಡೂ ತಂಡದ ಅಭಿಪ್ರಾಯ ಪಡೆದು ನ್ಯಾಯಾಲಯದ ಆದೇಶದಂತೆ ಎಲ್ಲರೂ ನಡೆದುಕೊಳ್ಳಬೇಕಿದೆ. ಹಾಗಾಗಿ ಬಾಡಿಗೆದಾರರನ್ನು ತೆರವು ಮಾಡಿ ಹರಾಜು ಮಾಡುವುದೋ, ತೆರವು ಮಾಡದೆಯೇ ಹರಾಜು ಮಾಡುವುದೋ ಎಂಬ ಬಗ್ಗೆ ಕಾನೂನು ತಜ್ಞರ ಅಭಿಪ್ರಾಯ ಪಡೆದು ತೀರ್ಮಾನ ಮಾಡುವುದಾಗಿ ಎರಡೂ ತಂಡಕ್ಕೂ ಹೇಳಿದ್ದಾರೆ.

ಮೊದಲು ನಡೆದ ಬಾಡಿಗೆದಾರರ ಸಭೆಯಲ್ಲಿ ಕಾನೂನು ಪ್ರಕಾರ ನೋಟಿಸ್ ಕೊಡದೆ ತೆರವು ಮಾಡಲು ಸಾಧ್ಯವಿಲ್ಲ ಎಂದು ಮುಖ್ಯಾಧಿಕಾರಿಗಳಿಗೆ ದಾಖಲೆಗಳ ಸಹಿತ ತೋರಿಸಿದ್ದರೂ ಸಹ ಕೇಳದೆ ಏಕಾಏಕಿ ಬಂದು ಸೀಜ್ ಮಾಡಿದ್ದಾರೆ. ನಂತರ ನೀವೇ ಬಂದು ಈ ಕ್ರಮ ತಪ್ಪಾಗಿದೆ ಎಂದು ಪುನಃ ಬೀಗ ತೆಗೆಸಿ ವ್ಯಾಪಾರ ಮಾಡಿಕೊಳ್ಳಲು ಅನುವು ಮಾಡಿಕೊಟ್ಟಿದ್ದೀರಿ. ನ್ಯಾಯಾಲಯದ ಆದೇಶದಂತೆ ಮೊದಲು ಹರಾಜು ಹಾಕಿ ನಮಗೆ ಹರಾಜು ನಿಲ್ಲದಿದ್ದರೂ ಅಂತಿಮ ಬಿಡ್‌ಗೆ ಶೇ.5 ರಷ್ಟು ಹೆಚ್ಚು ಬಾಡಿಗೆ ಕೊಡಲು ಸಿದ್ಧವಿದ್ದರೆ ಮಳಿಗೆ ಕೊಡಿ ಇಲ್ಲವಾದರೆ ತೆರವು ಮಾಡಿಸಿ ಎಂದು ಹೇಳಿದರು.

ತಹಸೀಲ್ದಾರ್ ಅವರು ಮಾತನಾಡಿ ಕೆಲ ಮಳಿಗೆಗಳು ಡೆಮಲಿಷ್‌ಗೆ ಹಾಗೂ ಕೆಲ ಮಳಿಗೆಗಳು ದುರಸ್ತಿ ಮಾಡಲು ಪಿಡಬ್ಲ್ಯುಡಿ ವರದಿ ನೀಡಿದೆ. ಅದರಂತೆ ರಿಪೇರಿ ಮಾಡಿ ಸುಸ್ಥಿತಿಯಲ್ಲಿಡಬೇಕಿದ್ದು ಬಾಡಿಗೆದಾರರು ಸಹಕರಿಸಬೇಕಾಗಿ ಕೇಳಿಕೊಂಡರು. ಇದಕ್ಕೆ ಬಾಡಿಗೆದಾರರು ಪಿಡಬ್ಲ್ಯುಡಿ ನಿರ್ದೇಶನದಂತೆ ಸಣ್ಣಪುಟ್ಟ ರಿಪೇರಿಗಳನ್ನು ನಾವೇ ನಮ್ಮ ಸ್ವಂತ ಹಣದಲ್ಲಿ ಮಾಡಿಸಿಕೊಳ್ಳುತ್ತೇವೆ. ನಾವು ಮಾಡಿಸುವುದು ಇಷ್ಟವಿಲ್ಲವೆಂದ ಪಕ್ಷದಲ್ಲಿ ನೀವೇ ಮೊದಲು ಹರಾಜು ಹಾಕಿ ನಂತರ ರಿಪೇರಿ ಮಾಡಿಸಿ ಹರಾಜು ನಿಂತವರಿಗೆ ಮಳಿಗೆಗಳನ್ನು ಹಸ್ತಾಂತರ ಮಾಡಿ ಎಂಬ ಸಲಹೆ ನೀಡಿದರು.

ಇರುವ ಅಷ್ಟೂ ಮಳಿಗೆಗಳು ಹಳೆಯ ಮಳಿಗೆಗಳಾಗಿರುವುದರಿಂದ ಇವುಗಳಿಗೆ ರೋಷ್ಟರ್ ಪದ್ಧತಿಯಂತೆ ಶೇ.18 ರಷ್ಟು ಮೀಸಲಿಡಲು ಬರುವುದಿಲ್ಲ. ಆದರೂ ನೀವು ಮೀಸಲಿಟ್ಟು ಹರಾಜು ಮಾಡಿದರೆ ನ್ಯಾಯಾಲಯದ ತೀರ್ಪಿನಲ್ಲಿ ಅಂತಿಮ ಬಿಡ್‌ಗೆ ಶೇ.5 ರಷ್ಟು ಹೆಚ್ಚು ಬಾಡಿಗೆ ಕೊಡಲು ಒಪ್ಪುವ ಮೂಲ ಬಾಡಿಗೆದಾರನಿಗೆ ಅನ್ಯಾಯ ಮಾಡಿದಂತಾಗುತ್ತದೆ. ಇದು ನ್ಯಾಯಾಲಯ ತೀರ್ಪಿನ ಸ್ಪಷ್ಟ ಉಲ್ಲಂಘನೆಯಾಗುತ್ತದೆ. ಹಾಗಾಗಿ ಊರಿನಲ್ಲಿ ಇನ್ನೂ ಅನೇಕ ಕಡೆ ಹೊಸ ಮಳಿಗೆಗಳನ್ನು ಕಟ್ಟಲು ಅವಕಾಶವಿದ್ದು ಹೊಸ ಮಳಿಗೆ ಕಟ್ಟಿ ಅವುಗಳನ್ನು ರೋಷ್ಟರ್ ಪದ್ಧತಿಯಂತೆ ಹರಾಜು ಹಾಕಿ ಎಂಬ ಕಾನೂನು ತೊಡಕನ್ನು ತಹಸೀಲ್ದಾರ್ ಅವರ ಗಮನಕ್ಕೆ ತಂದರು.

ಆಗ ತಹಸೀಲ್ದಾರ್ ಅವರು ಶೇ.18 ರಷ್ಟು ಮೀಸಲಾತಿ ಕೊಡಬೇಕೋ, ಬೇಡವೋ, ಹರಾಜಿನ ನಂತರ ರಿಪೇರಿ ಮಾಡಿಸುವ ಭರವಸೆ ನೀಡಿ ಹರಾಜು ಹಾಕಬಹುದೇ, ಹರಾಜಿನ ಮೊದಲೇ ಬಾಡಿಗೆದಾರರನ್ನು ತೆರವು ಮಾಡಬೇಕೋ, ಬೇಡವೋ ಹೀಗೆ ಅನೇಕ ಕಾನೂನು ತೊಡಕು ಇದರಲ್ಲಿದ್ದು ಕಾನೂನು ತಜ್ಞರ ಅಭಿಪ್ರಾಯ ಪಡೆದು ಮುಂದಿನ ನಿರ್ಧಾರ ತೆಗೆದುಕೊಳ್ಳುವುದಾಗಿ ತಿಳಿಸಿದರು.

**ಮುಖ್ಯಾಧಿಕಾರಿಗಳ ಪರ ನಿಂತ ಪಪಂ ಸದಸ್ಯರು:** ಮಳಿಗೆಗಳ ಹರಾಜು ಹಾಕಿದರೆ ಈಗಿನ ಬಾಡಿಗೆಗಿಂತ ಹೆಚ್ಚಿನ ಬಾಡಿಗೆಗೆ ಹರಾಜು ನಿಲ್ಲುತ್ತದೆ. ಊರಿನ ಅಭಿವೃದ್ಧಿ ದೃಷ್ಟಿಯಿಂದ ಮಳಿಗೆ ಹರಾಜು ಹಾಕುವುದು ಸೂಕ್ತವಾಗಿದೆ. ಆದರೆ ಪಿಡಬ್ಲ್ಯುಡಿ ವರದಿಯಂತೆ ಕೆಲ ಮಳಿಗೆಗಳನ್ನು ಡೆಮಾಲಿಷ್ ಹಾಗೂ ಕೆಲ ಮಳಿಗೆಗಳನ್ನು ದುರಸ್ತಿ ಮಾಡಿಸಬೇಕಿದೆ. ಮಳಿಗೆ ಖಾಲಿ ಮಾಡದೆ ಇದು ಸಾಧ್ಯವಾಗದಿದ್ದರಿಂದ ಖಾಲಿ ಮಾಡಿಸಲು ಮುಖ್ಯಾಧಿಕಾರಿಗಳಿಗೆ ಒತ್ತಾಯ ಮಾಡಿದೆವು. ಈ ವಿಚಾರ ಪ್ರಮುಖ ಪತ್ರಿಕೆಗಳು ಸೇರಿದಂತೆ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿತ್ತು. ಆಗ ಮೇಲಧಿಕಾರಿಗಳು ನೋಟಿಸ್ ಕೊಡದೆ ತೆರವು ಅಸಾಧ್ಯವೆಂದು ಹೇಳಿದ್ದರೆ ಮುಖ್ಯಾಧಿಕಾರಿಗಳು ಬಾಗಿಲು ಹಾಕಲು ಹೋಗುತ್ತಿರಲಿಲ್ಲ. ಆದರೆ ಬಾಗಿಲು ಹಾಕುವವರೆವಿಗೂ ಸುಮ್ಮನಿದ್ದು ನಂತರ ಪಂಚಾಯ್ತಿ ಸದಸ್ಯರಿಗೂ ತಿಳಿಸದೆ ಏಕಾಏಕಿ ಬಂದು ಬೀಗ ತೆಗೆಸಿ ಮುಖ್ಯಾಧಿಕಾರಿಗಳನ್ನು ತಪ್ಪಿತಸ್ಥರನ್ನಾಗಿ ಮಾಡಿದ್ದೀರಿ ಎಂದು ಪಂಚಾಯ್ತಿ ಸದಸ್ಯರು ತಹಸೀಲ್ದಾರ್ ಅವರನ್ನು ಪ್ರಶ್ನಿಸಿದರು. ಅಲ್ಲದೆ ಮೊದಲು ಬಾಡಿಗೆದಾರರನ್ನು ತೆರವು ಮಾಡಿಸಿ ರಿಪೇರಿ ಮಾಡಿ ಹರಾಜು ಹಾಕಿ ಎಂದು ಒತ್ತಾಯಿಸಿದರು. ಇವರಿಗೂ ಸಹ ಕಾನೂನು ತಜ್ಞರ ಅಭಿಪ್ರಾಯ ಪಡೆದು ಮುಂದಿನ ಹೆಜ್ಜೆ ಇಡುವುದಾಗಿ ತಿಳಿಸಿದರು.

# ಸ್ವಚ್ಛತೆಗೆ ನನ್ನ ಮೊದಲ ಆದ್ಯತೆ

**ದೇವನಹಳ್ಳಿ:** ತಾಲೂಕಿನ ಆಡಳಿತ ಸೌಧದ ಆವರಣದ ಸ್ವಚ್ಛತೆ ಮಾಡಿಸಲಿದ್ದೇನೆ, ಆವರಣದ ಮೈದಾನದಲ್ಲಿ ಶುಚಿಗೊಳಿಸಿ ಹಲವಾರು ಗಿಡಮರಗಳನ್ನು ನೆಡಲಾಗುವುದು ಮತ್ತು ಸಾರ್ವಜನಿಕರಿಗಾಗಿ ಶೌಚಾಲಯವನ್ನು ನಿರ್ಮಿಸುವುದರ ಮೂಲಕ ಸ್ವಚ್ಛತೆಗೆ ನನ್ನ ಮೊದಲ ಆದ್ಯತೆ ಎಂದು ನೂತನ ತಹಸೀಲ್ದಾರ್ ಎಚ್.ಬಾಲಕೃಷ್ಣ ಹೇಳಿದರು.

ದೇವನಹಳ್ಳಿ ತಾಲೂಕಿನ ಆಡಳಿತ ಸೌಧದಲ್ಲಿ ನೂತನ ತಹಸಿಲ್ದಾರ್ ಆಗಿ ಅಧಿಕಾರ ಸ್ವೀಕರಿಸಿ ಸಹಿ ಮಾಡಿ ಸುದ್ದಿಗಾರರೊಂದಿಗೆ ಮಾತನಾಡಿದರು.

ದೇವನಹಳ್ಳಿ ತಾಲ್ಲೂಕಿನಲ್ಲಿ ಕರ್ತವ್ಯ ನಿರ್ವಹಿಸಿರುವ ಅನುಭವ ಸಹ ನನಗಿದೆ ಸಾಕಷ್ಟು ಜನಪರ, ರೈತಪರ ಕೆಲಸ ನಿರ್ವಹಿಸುವ ಹುಮ್ಮಸ್ಸಿನಿಂದ ಹಲವಾರು ಜನಪರ ಸೇವೆಯನ್ನು ಮಾಡುವ ಆಶಯ ನನ್ನಲ್ಲಿದೆ ಹಾಗೂತಾಲೂಕಿನ ಬಗೆಹರಿಯದ ಸಮಸ್ಯೆಗಳಾದ ಸ್ಮಶಾನ, ರಸ್ತೆ ಸಂಪರ್ಕಗಳು, ಸರ್ಕಾರಿ ಶಾಲಾ ಕಟ್ಟಡಗಳ ದುರಸ್ಥಿ , ಭೂ ಒತ್ತುವರಿ ವಿವಾದಗಳು ಸೇರಿದಂತೆ ಹಲವಾರು ಸಾರ್ವಜನಿಕ ಜ್ವಲಂತ ಸಮಸ್ಯೆಗಳ ಕುರಿತು ಗಮನ ಹರಿಸಿ ಹಂತ-ಹಂತವಾಗಿ ಬಗೆಹರಿಸಲಾಗುವುದು ಎಂದರು.

ಈ ವೇಳೆಯಲ್ಲಿ ಹಲವಾರು ಸಮಾಜದ ಮುಖಂಡರುಗಳು, ಕಂದಾಯ ಇಲಾಖೆಯ ಅಧಿಕಾರಿಗಳು ಮತ್ತು ಆಡಳಿತ ಸೌಧದ ಸಿಬ್ಬಂದಿ ವರ್ಗದವರು ನೂತನವಾಗಿ ಅಧಿಕಾರ ಸ್ವೀಕರಿಸಿದ ತಹಶೀಲ್ದಾರ್ ರವರಿಗೆ ಶುಭ ಹಾರೈಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಆರ್‌ಎಚ್‌ಐ ಗಂಗಾಧರ್ ,ತಹಸಿಲ್ದಾರ್ ರಾಜೀವ್ ಸುಲೋಚನ, ನಿವೃತ್ತ ತಹಸೀಲ್ದಾರ್ ವಿಜಯ್ ಕುಮಾರ್ ,ಆರ್ ಐ ಮಹೇಶ್, ಶಿರಸ್ತೆದಾರ್ ಭರತ್, ಬಿಜೆಪಿ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹೆಚ್. ಎಂ ರವಿಕುಮಾರ್ ಮತ್ತು ಮುಖಂಡರು,ಸಂತೋಷ್ , ಮಹೇಶ್,ಸಮಾಜಸೇವಕ ಭುವನಹಳ್ಳಿ ತಿಪ್ಪಣ್ಣ, ಸೋಲೂರು ನಾಗಾರಾಜ್ ಇದ್ದರು.

# ರೈತರ ಹಿತ ಕಾಯುವುದೇ ತಂಬಾಕು ಮಂಡಳಿ ಉದ್ದೇಶ



**ಪಿರಿಯಾಪಟ್ಟಣ** : ತಂಬಾಕು ರೈತರ ಹಿತಕಾಯುವುದು ತಂಬಾಕು ಮಂಡಳಿಯ ಮುಖ್ಯ ಉದ್ದೇಶ ಎಂದು ತಂಬಾಕು ಮಂಡಳಿ ಅಧ್ಯಕ್ಷ ಸಿ.ಹೆಚ್.ಯಶವಂತ್ ಕುಮಾರ್ ತಿಳಿಸಿದರು.

ತಾಲೂಕಿನ ಕಗ್ಗುಡಿಯ ತಂಬಾಕು ಹರಾಜು ಮಾರುಕಟ್ಟೆಯ ಆವರಣದಲ್ಲಿರುವ ರೈತ ಭವನದಲ್ಲಿ ನಡೆದ ನಡೆದ ತಂಬಾಕು ಬೆಳೆಗಾರರ ಸಭೆಯಲ್ಲಿ ಮಾತನಾಡಿದರು. ಈ ಬಾರಿ ಪಿರಿಯಾಪಟ್ಟಣ ಸೇರಿದಂತೆ ಸುತ್ತಮುತ್ತಲಿನ ತಾಲೂಕಿನಲ್ಲಿ ಹೆಚ್ಚು ಮಳೆಯ ಪರಿಣಾಮ ಅತೀ ವೃಷ್ಟಿ ಸಂಭವಿಸಿ ತಂಬಾಕು ಬೆಳೆಗಾರರು ಸಂಕಷ್ಟಕ್ಕೆ ಸಿಲುಕಿದ್ದಾರೆ

ಈ ಬಾರಿ ಕರ್ನಾಟಕದಲ್ಲಿ 68 ಸಾವಿರ ಹೆಕ್ಟರ್ ಪ್ರದೇಶದಲ್ಲಿ ತಂಬಾಕು ಬೆಳೆಯನ್ನು ಬೆಳೆಯಲಾಗಿತ್ತು ಇದರ ಅಂದಾಜಿನಲ್ಲಿ ಸುಮಾರು 100 ಮಿಲಿಯನ್ ಕೆ.ಜಿ.ತಂಬಾಕು ಬೆಳೆಯಬಹುದು ಎಂದು ನಿರೀಕ್ಷಿಸಲಾಗಿತ್ತು ಆದರೆ ಮೇ, ಜೂನ್, ಜುಲೈ ತಿಂಗಳಿನಲ್ಲಿ ಸತತವಾಗಿ ಮಳೆಯಾಗಿರುವುದರಿಂದ ಬೆಳೆ ಇಳುವರಿ ಕುಂಠಿತವಾಗುವ ಸಾಧ್ಯತೆ ಇದೆ.

ಈ ಬಾರಿ ತಂಬಾಕು ಮಂಡಳಿ ರೈತರಿಗೆ 25 ಸಾವಿರ ರೂಗಳನ್ನು ಬಡ್ಡಿರಹಿತವಾಗಿ ಸಾಲವನ್ನು ನೀಡುವ ಕೆಲಸವನ್ನು ಮಾಡುವ ನಿರ್ಧಾರ ಮಾಡಿ ರೈತರ ಪರವಾಗಿ ನಿಂತಿದೆ ಎಂದರು. ಪಿರಿಯಾಪಟ್ಟಣದಲ್ಲಿ ಬೆಳೆಯುವ ತಂಬಾಕು ಉತ್ಕೃಷ್ಟ ಗುಣಮಟ್ಟದಿಂದ ಕೂಡಿದ್ದು, ಈ ಬಾರಿ ಉತ್ತಮ ಬೆಲೆಯನ್ನು ಪಡೆಯುವ ನಿರೀಕ್ಷೆ ಮಾಡಬಹುದು.

ಆದ್ದರಿಂದ ರೈತರು ಕಾಳಸಂತೆಯಲ್ಲಿ ತಂಬಾಕು ಮಾರಾಟ ಮಾಡಬಾರದು ಎಂದು ಮನವಿ ಮಾಡಿದ ಅವರು , ತಂಬಾಕು ಬೆಳೆಗೂ ವಿಮೆ ಸೌಲಭ್ಯವನ್ನು ನೀಡುವ ಸಲುವಾಗಿ ಕೇಂದ್ರ ಕೃಷಿ ಸಚಿವರಿಗೆ ಮನವಿಮಾಡುವ ಕೆಲಸ ಮಾಡುತ್ತಿದ್ದೇವೆ ಎಂದರು.

ಪ್ರಗತಿಪರ ರೈತ ಹುಣಸೆ ಕುಪ್ಪೆ ಚಂದ್ರೇಗೌಡ ಮಾತನಾಡಿ ಈ ಬಾರಿ ಮಳೆ ಹೆಚ್ಚಾಗಿ ತಂಬಾಕು ಬೆಳೆ ಇಳುವರಿ ಬಂದಿಲ್ಲ ಆದ್ದರಿಂದ ತಂಬಾಕು ಮಂಡಳಿ ಉತ್ತಮ ಬೆಲೆಯನ್ನು ನೀಡಬೇಕು ಮಾರುಕಟ್ಟೆಯನ್ನು ಸೆಪ್ಟೆಂಬರ್ ತಿಂಗಳ ಮೊದಲ ವಾರದಲ್ಲಿ ಪ್ರಾರಂಭ ಮಾಡಿದರೆ ಸೂಕ್ತ ಏಕೆಂದರೆ ಈ ಬಾರಿ ತೇವಾಂಶ ಹೆಚ್ಚಾಗಿರುವುದರಿಂದ ತಂಬಾಕು ಹಾಳಾಗುವ ಸಂಭವ ಇದೆ ಅನಧಿಕೃತ ತಂಬಾಕು ಬೆಳೆಗಾರರಿಗೂ ಸೆಪ್ಟೆಂಬರ್ ತಿಂಗಳಿನಲ್ಲಿ ಮಾರಾಟ ಮಾಡಲು ಅನುಮತಿ ನೀಡಬೇಕು ಎಂದರು. ಈ ಸಂದರ್ಭದಲ್ಲಿ ಪಿರಿಯಾಪಟ್ಟಣ, ಹುಣಸೂರು, ಕೃಷ್ಣರಾಜ ನಗರ, ರಾಮನಾಥಪುರ ಹೆಗ್ಗಡದೇವನಕೋಟೆ ತಾಲೂಕಿನ ರೈತರು ತಂಬಾಕು ನಿರ್ದೇಶಕ ಮಂಡಳಿಯ ಕೇಂದ್ರ ಕಛೇರಿಯನ್ನು ಕೂಡಲೇ ಸ್ಥಳಾಂತರ ಮಾಡಬೇಕು ತಪ್ಪಿದ್ದಲ್ಲಿ ತಂಬಾಕು ಮಂಡಳಿ ವಿರುದ್ಧ ಉಗ್ರ ಪ್ರತಿಭಟನೆ ಮಾಡುವುದಾಗಿ ಮಂಡಳಿ ಅಧ್ಯಕ್ಷ ಹಾಗೂ ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿದರು. ಈ ಕಾರ್ಯಕ್ರಮದಲ್ಲಿ ತಂಬಾಕು ಮಂಡಳಿ ಆರ್‌ಎಂಒ ಸುಬ್ಬರಾವ್, ಮಾಜಿ ಉಪಾಧ್ಯಕ್ಷ ಹೆಚ್. ಸಿ. ಬಸವರಾಜು, ಸದಸ್ಯರಾದ ವಿಕ್ರಂ ರಾಜ್, ದಿನೇಶ್ ಮಾತನಾಡಿದರು, ಹರಾಜು ಅಧೀಕ್ಷಕರಾದ ಧನರಾಜ್, ಸಿದ್ದರಾಮ್ ದಾಂಗೆ, ಪ್ರಭಾಕರ್, ಚಂದ್ರಶೇಖರ್, ರಾಮ್ ಮೋಹನ್ ಸುರೆ, ನೀವೇಶ್ ಕುಮಾರ್ ಪಾಂಡೆ, ಸವಿತಾ, ಬ್ರಿಜ್ ಭೂಷಣ್, ರೈತ ಮುಖಂಡರಾದ ಶಂಕರೇಗೌಡ, ಕಗ್ಗುಡಿ ಸುರೇಶ, ಹಿಟ್ನಳ್ಳಿ ಪರಮೇಶ್, ಬಸಲಾಪುರ ಜವರೇಗೌಡ, ಹೊಸೂರು ಕುಮಾರ್ ಸೇರಿದಂತೆ ರೈತರು ಹಾಗೂ ತಂಬಾಕು ಮಂಡಳಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಪರೀಕ್ಷಾ ಕೇಂದ್ರದ ಸುತ್ತ ನಿಷೇಧಾಜ್ಞೆ ಜಾರಿ

**ಮಂಡ್ಯ:** ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ 2024 ರ ಎಸ್ ಎಸ್ ಎಲ್ ಸಿ ಪರೀಕ್ಷೆ-3 ಆಗಸ್ಟ್ 2 ರಿಂದ 9 ರವರೆಗೆ ನಡೆಯಲಿದೆ. 2024 ರ ಎಸ್ ಎಸ್ ಎಲ್ ಸಿ ಪರೀಕ್ಷೆ – 3 ಸುಗಮವಾಗಿ ನಡೆಯಲು ಮಂಡ್ಯ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಪರೀಕ್ಷಾ ದಿನಗಳಂದು 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿದೆ. ಪರೀಕ್ಷಾ ಕೇಂದ್ರದ ಸುತ್ತಮುತ್ತ ಇರುವ ಜೆರಾಕ್ಸ್ ಮತ್ತು ಸೈಬರ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಆದೇಶ ಹೊರಡಿಸಿದ್ದಾರೆ. ಪರೀಕ್ಷಾರ್ಥಿಗಳು ಮತ್ತು ಪರೀಕ್ಷಾ ಕಾರ್ಯಕ್ಕೆ ನೇಮಕಗೊಂಡ ಅಧಿಕಾರಿಗಳು/ಸಿಬ್ಬಂದಿಗಳು ಹೊರತುಪಡಿಸಿ ಇತರರು ಯಾರೂ ನಿಷೇಧಿತ ಪ್ರದೇಶದೊಳಗೆ ಪ್ರವೇಶಿಸುವಂತಿಲ್ಲ ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ತ್ರೈಮಾಸಿಕ ಕೆ.ಡಿ.ಪಿ ಸಭೆ ಮುಂದೂಡಿಕೆ

**ಮಂಡ್ಯ:** ಮಂಡ್ಯ ಜಿಲ್ಲಾ ಪಂಚಾಯಿತಿಯ 2024-25 ನೇ ಸಾಲಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಥಮ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು (20 ಅಂಶಗಳ ಕಾರ್ಯಕ್ರಮವು ಸೇರಿದಂತೆ) ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಆಗಸ್ಟ್ 5 ರಂದು ಬೆಳಿಗ್ಗೆ 11 ಗಂಟೆಗೆ ಮಂಡ್ಯ ಜಿಲ್ಲಾ ಪಂಚಾಯತ್ನ ಕಾವೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದು, ಸದರಿ ಸಭೆಯನ್ನು ಕಾರಣಾಂತರಗಳಿಂದ ಮುಂದೂಡಲಾಗಿದೆ. ಸಭೆಯು ನಡೆಯುವ ಮುಂದಿನ ದಿನಾಂಕವನ್ನು ತಿಳಿಸಲಾಗುವುದು ಎಂದು ಮಂಡ್ಯ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಶೇಕ್ ತನ್ವೀರ್ ಆಸಿಫ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪದ್ಮ ಪ್ರಶಸ್ತಿ – 2025 ರ ನಾಮ ನಿರ್ದೇಶನಕ್ಕೆ ಆಹ್ವಾನ

**ಮಂಡ್ಯ:** ಪದ್ಮ ಪ್ರಶಸ್ತಿ – 2025 ಕ್ಕೆ ಸಂಬಂಧಿಸಿದಂತೆ ನಾಮ ನಿರ್ದೇಶನಗಳು ಹಾಗೂ ಶಿಫಾರಸ್ಸುಗಳು ಪ್ರಾರಂಭವಾಗಿದೆ. ಸೆಪ್ಟೆಂಬರ್ 15 ನಾಮನಿರ್ದೇಶನಗಳು ಹಾಗೂ ಶಿಫಾರಸ್ಸುಗಳ ಸ್ವೀಕೃತಿಗೆ ಅಂತಿಮವಾಗಿರುತ್ತದೆ. ರಾಷ್ಟ್ರೀಯ ಪುರಸ್ಕಾರಕ್ಕೆ ಸಂಬಂಧಿಸಿದಂತೆ ಆನ್ ಲೈನ್ ಮೂಲಕ ಮಾತ್ರ ಅರ್ಜಿ ಸಲ್ಲಿಕೆಗೆ ಅವಕಾಶವಿರುತ್ತದೆ. ಯಾವುದೇ ಬೇಧ- ಭಾವವಿಲ್ಲದೇ ಎಲ್ಲಾ ಕ್ಷೇತ್ರಗಳಲ್ಲಿಯೂ ಸಹ ಜೀವಮಾನ ಸಾಧನೆಗೈದಿರುವ ಅರ್ಹರನ್ನು ಗುರುತಿಸಿ ನಿಗಧಿಪಡಿಸಲಾಗಿರುವ ಸೂಚನೆಗಳನ್ವಯ ಆನ್ ಲೈನ್ ಮೂಲಕ ನಾಮ ನಿರ್ದೇಶನಗಳನ್ನು ಸಲ್ಲಿಸಬಹುದು. ಸಾಧನೆಗೈದಿರುವ ಅರ್ಹ ವ್ಯಕ್ತಿಗಳು/ನಾಗರೀಕರನ್ನು ಗುರುತಿಸಿ ನೇರವಾಗಿ http://awards.gov.inನಲ್ಲಿ ನಾಮ ನಿರ್ದೇಶನ ಸಲ್ಲಿಸಲು ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆ-ಸೆಟ್ ಮತ್ತು ಯುಜಿಸಿ-ನೆಟ್ ಪರೀಕ್ಷೆಗಳಿಗೆ ತೆರಬೇತಿ

**ಮಂಡ್ಯ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 'ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ'ದ ವತಿಯಿಂದ ಕರ್ನಾಟಕ ಸರ್ಕಾರವು ಕೆಇಎ(ಕರ್ನಾಟಕ ಪರೀಕ್ಷಾ ಪ್ರಾಧಿಕಾರ) ಮೂಲಕ ನಡೆಸಲಿರುವ ರಾಜ್ಯ ಮಟ್ಟದ ಪದವಿ ಕಾಲೇಜು ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆ-ಸೆಟ್) ಹಾಗೂ ನವದೆಹಲಿಯ ವಿಶ್ವವಿದ್ಯಾನಿಲಯದ ಧನಸಹಾಯ ಆಯೋಗದವರು ನಡೆಸಲಿರುವ ರಾಷ್ಟ್ರ ಮಟ್ಟದ ಕಾಲೇಜು ಸಹಾಯಕ ಪ್ರಾಧ್ಯಾಪಕರ (ಯುಜಿಸಿ-ನೆಟ್) ಮತ್ತು ಕಿರಿಯ ಶಿಷ್ಯವೇತನ ಸಂಶೋಧನ ಸಹಾಯಕರ(ಜೆಆರ್‌ಎಫ್) ಪರೀಕ್ಷೆಗಳಿಗೆ 45 ದಿನಗಳ ತರಬೇತಿ ಶಿಬಿರವನ್ನು ಏರ್ಪಡಿಸಲಾಗಿದೆ. ಆಸಕ್ತರು ಆಗಸ್ಟ್ 09 ರೊಳಗಾಗಿ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ ದ ಕಛೇರಿಯಲ್ಲಿ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.00 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821-2515944 ಅನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಸಚಿವರಾದ ಪ್ರೊ. ಕೆ.ಬಿ. ಪ್ರವೀಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಣೆಯಾದವರ ಪತ್ತೆಗೆ ಮನವಿ

**ಮಂಡ್ಯ:** ನಗರದ ಹಾಲಹಳ್ಳಿ ಗ್ರಾಮದ ಸೃಜನ್ ರಾಜ್ ಎನ್ (18) ಎಂಬುವವರು ಕಾಣೆಯಾಗಿದ್ದಾರೆ ಎಂದು ಮಂಡ್ಯ ಪೂರ್ವ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯು 5.4 ಅಡಿ ಎತ್ತರ, ಸಾಧಾರಣ ಮೈ ಕಟ್ಟು, ಕೋಲುಮುಖ, ಗೋಧಿ ಮೈ ಬಣ್ಣ ಹೊಂದಿದ್ದು ಕಾಣೆಯಾದ ದಿನ ಕಪ್ಪು ಬಣ್ಣದ ಟಿ-ಶರ್ಟ್ ಮತ್ತು ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ: 08232-224500/9480804830 ಅನ್ನು ಸಂಪರ್ಕಿಸಬಹುದು.

# ಪರೀಕ್ಷೆಗಳಿಗೆ ತರಬೇತಿ

**ಬೆಂಗಳೂರು ಗ್ರಾಮಾಂತರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 'ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ,'ದ ವತಿಯಿಂದ ಕರ್ನಾಟಕ ಸರ್ಕಾರವು ಕೆಇಎ(ಕರ್ನಾಟಕ ಪರೀಕ್ಷಾ ಪ್ರಾಧಿಕಾರ) ಮೂಲಕ ನಡೆಸಲಿರುವ ರಾಜ್ಯ ಮಟ್ಟದ ಪದವಿ ಕಾಲೇಜು ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆ-ಸೆಟ್) ಹಾಗೂ ನವದೆಹಲಿಯ ವಿಶ್ವವಿದ್ಯಾನಿಲಯದ ಧನಸಹಾಯ ಆಯೋಗದವರು ನಡೆಸಲಿರುವ ರಾಷ್ಟ್ರ ಮಟ್ಟದ ಕಾಲೇಜು ಸಹಾಯಕ ಪ್ರಾಧ್ಯಾಪಕರ (ಯುಜಿಸಿ-ನೆಟ್) ಮತ್ತು ಕಿರಿಯ ಶಿಷ್ಯವೇತನ ಸಂಶೋಧನ ಸಹಾಯಕರ(ಜೆಆರ್‌ಎಫ್) ಪರೀಕ್ಷೆಗಳಿಗೆ 45 ದಿನಗಳ ತರಬೇತಿ ಶಿಬಿರವನ್ನು ಏರ್ಪಡಿಸಲಾಗಿದೆ. ಆಸಕ್ತರು ಆಗಸ್ಟ್ 09 ರೊಳಗಾಗಿ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಕಛೇರಿಯಲ್ಲಿ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.00 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದು. 0821-2515944 ಸಂಪರ್ಕಿಸಬಹುದಾಗಿದೆ ಎಂದು ಕರಾಮುವಿ ಕುಲಸಚಿವರಾದ ಪ್ರೊ. ಕೆ.ಬಿ. ಪ್ರವೀಣ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯೋಗ್ಯತೆ ನೋಡಿ ಬಿಜೆಪಿ ಸ್ಥಾನಮಾನ




**ಕೋಲಾರ :** ಸತತವಾಗಿ 40ವರ್ಷಗಳ ಕಾಲ ಕಾಂಗ್ರೆಸ್ ಪಕ್ಷದಲ್ಲಿ ದುಡಿದರು ಸೂಕ್ತ ಸ್ಥಾನಮಾನ ಪಕ್ಷ ಕೊಡಲಿಲ್ಲ. ಆದರೆ ಇಂದು ಕಾಂಗ್ರೆಸ್ ಪಕ್ಷದಂತೆ ಯೋಗ ನೋಡದೆ ನನ್ನ ಯೋಗ್ಯತೆ ನೋಡಿ ಬಿಜೆಪಿ ಪಕ್ಷ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕನನ್ನಾಗಿ ಗೌರವಿಸಿದೆ ಬಿಜೆಪಿ ಪಕ್ಷಕ್ಕೆ ನಾನು ಚಿರಋಣಿ ಎಂದು ಛಲವಾದಿ ನಾರಾಯಣಸ್ವಾಮಿ ಹೇಳಿದರು.

ನಗರ ಹೊರವಲಯದ ಕೋಗಿಲಹಳ್ಳಿ ಬಳಿ ಇರುವ ಜಿಲ್ಲಾ ಬಿಜೆಪಿ ಕಛೇರಿಯಲ್ಲಿ ಶುಕ್ರವಾರ ನಡೆಸಿದ ಪತ್ರಿಕಾಘೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಅನೇಕ ರೀತಿಯ ಭ್ರಷ್ಟಚಾರಗಳು ನಡೆಸುತ್ತಿದೆ. ಅವುಗಳ ಪರಿಶೀಲನೆ ಈಗಾಗಲೇ ನಡೆಯುತ್ತಿದೆ. ಜನಸಾಮಾನ್ಯರ ಮೆಚ್ಚುಗೆ ಪಡೆಯಲು ಹಲವಾರು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಅವುಗಳ ವಿತರಣೆಗೆ ಖಜಾನೆಯಲ್ಲಿ ಕಾಸಿಲ್ಲದೆ ಬಿಜೆಪಿ ಪಕ್ಷದ ಯೋಜನೆಗಳ ಕುರಿತು ಟೀಕೆ ಮಾಡಲು ಮುಂದಾಗಿದ್ದಾರೆ. ಈಗಾಗಲೇ ದಲಿತ ಯೋಜನೆಗಳ ಮೇಲಾಗಿರುವ ಅನ್ಯಾಯ ಮತ್ತು ಮುಡಾ ಹಗರಣಗಳ ಕುರಿತಾಗಿ ಪ್ರತಿಭಟನೆ ಮಾಡಲು ಬಿಜೆಪಿ ಮತ್ತು ಜೆಡಿಎಸ್ ಪಕ್ಷ ಸಿದ್ದವಾಗಿದೆ. ನಾಳೆಯೇ ಪ್ರತಿಭಟನೆಗೆ ಚಾಲನೆ ನೀಡಲಿದ್ದೇವೆ.

ಕಾಂಗ್ರೆಸ್ ಪಕ್ಷದಲ್ಲಿ ಇತರರ ಏಳಿಗೆಗೆ ಸಹಕಾರ ನೀಡುವುದಿಲ್ಲ. ಅದರ ಅನುಭವ ನನಗಾಗಿದೆ. ನನ್ನ ಯವ್ವನದ ವರ್ಷಗಳು ಪಕ್ಷದ ಅಭಿವೃದ್ಧಿಗಾಗಿಯೇ ಕಳೆದು ಇನ್ನೇನು ರಾಜಕೀಯ ಬಿಡಬೇಕು ಅಥವಾ ಬೇರೆ ದಾರಿ ನೋಡಿಕೊಳ್ಳಬೇಕು ಎಂಬ ಸಂಕಷ್ಟದಲ್ಲಿದ್ದಾಗ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರು ನನ್ನ ಕೈ ಹಿಡಿದು ನಮ್ಮ ಪಕ್ಷಕ್ಕೆ ಬನ್ನಿ ಸೂಕ್ತ ಸ್ಥಾನ ನೀಡುತ್ತೇವೆ ಎಂಬ ಭರವಸೆ ನೀಡಿದರು. ಅಂದಿನಿಂದ ಇಂದಿನವರೆಗೂ ಪಕ್ಷದಲ್ಲಿ ನನಗೆ ಯಾವುದೇ ದ್ರೋಹ ಆಗಿಲ್ಲ. ಈ ನನ್ನ ಸ್ಥಾನಕ್ಕೆ ಶ್ರಮಿಸಿದ ಪಕ್ಷದ ಎಲ್ಲಾ ಹಿರಿಯ ಕಿರಿಯ ಮುಖಂಡರಿಗೂ ನನ್ನ ಧನ್ಯವಾದಗಳು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ವೇಣುಗೋಪಾಲ್, ಮಾಜಿ ಶಾಸಕರುಗಳಾದ ಎಂ ನಾರಾಯಣ ಸ್ವಾಮಿ, ಮಂಜುನಾಥ್ ಗೌಡ, ಸಂಪಂಗಿ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಮಹೇಶ್,ಎಸ್ ಬಿ ಮುನಿವೆಂಕಟಪ್ಪ, ಮಾಗೇರಿ ನಾರಾಯಣ ಸ್ವಾಮಿ, ಕೆಂಬೋಡಿ ನಾರಾಯಣ ಸ್ವಾಮಿ,ಕೃಷ್ಣಪ್ಪ, ರಮೇಶ್, ಮಹೇಶ್, ಮಮತಾ, ಅಶೋಕ್, ಸೇರಿದಂತೆ ಇತರರು ಇದ್ದರು.

# ಶಾಂತಿ ನೆಮ್ಮದಿಯ ಬದುಕಿಗೆ ಧರ್ಮವೊಂದೇ ಆಶಾಕಿರಣ




**ದಾವಣಗೆರೆ:** ಮನುಷ್ಯ ಯಾವಾಗಲೂ ಸುಖಾಪೇಕ್ಷಿ. ಸುಖದ ಮೂಲ ಧರ್ಮದ ಆಚರಣೆಯಲ್ಲಿದೆ. ಶಾಂತಿ ನೆಮ್ಮದಿಯ ಬದುಕಿಗೆ ಧರ್ಮವೊಂದೇ ಆಶಾಕಿರಣವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ನಗರದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಮಂಗಲ ಭವನದಲ್ಲಿ ಜರುಗಿದ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜಾ ಹಾಗೂ ಜನಜಾಗೃತಿ ಧರ್ಮ ಸಮಾವೇಶದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ದೊಡ್ಡ ದೊಡ್ಡ ಮಾತುಗಳನ್ನಾಡುವುದರಿಂದ ದೊಡ್ಡವರಾಗುವುದಿಲ್ಲ. ದೊಡ್ಡ ಮನಸ್ಸು ಗುಣಗಳಿಂದ ದೊಡ್ಡಸ್ತಿಕೆ ಪ್ರಾಪ್ತವಾಗುತ್ತದೆ. ಅರಿತು ಬಾಳುವುದರಲ್ಲಿ ಬದುಕಿನ ಉತ್ಕರ್ಷತೆಯಿದೆ. ಮನುಷ್ಯನಲ್ಲಿ ಒಳ್ಳೆಯ ಮತ್ತು ಕೆಟ್ಟ ಎರಡೂ ಗುಣಗಳಿವೆ. ಒಳ್ಳೆಯವರ ಒಡನಾಟದಲ್ಲಿ ಬಾಳಿದರೆ ಜೀವನ ವಿಕಾಸಗೊಳ್ಳುತ್ತದೆ. ದುರ್ಜನರ ಒಡನಾಟದಲ್ಲಿ ಬಾಳಿದರೆ ಬದುಕು ಸರ್ವ ನಾಶವಾಗುತ್ತದೆ. ವೀರಶೈವ ಧರ್ಮ ಸಿದ್ಧಾಂತದಲ್ಲಿ ಜೀವನ ವಿಕಾಸದ ಆಧ್ಯಾತ್ಮ ತತ್ವಗಳನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ಪ್ರತಿಪಾದಿಸಿದ್ದಾರೆ. ಧರ್ಮ ಯಶಸ್ಸು ನೀತಿ ದಕ್ಷತೆ ಮತ್ತು ಒಳ್ಳೆಯ ಮಾತು ಅಳವಡಿಸಿಕೊಂಡು ಬಾಳಿದರೆ ಶ್ರೇಯಸ್ಸು ಕಟ್ಟಿಟ್ಟ ಬುತ್ತಿ. ಮನುಷ್ಯ ಎಷ್ಟೆ ಎತ್ತರಕ್ಕೆ ಬೆಳೆದರೂ ಮೂಲ ಸಂಸ್ಕೃತಿ ಯಾರೂ ಮರೆಯಬಾರದು. ಮೂಲ ಮರೆತರೆ ಜೀವನದಲ್ಲಿ ಅವನತಿ ನಿಶ್ಚಿತವೆಂದರು.

ಸಮಾರಂಭ ಉದ್ಘಾಟಿಸಿದ ಅ.ಭಾ.ವೀ.ಲಿಂ. ಮಹಾಸಭಾ ರಾಷ್ಟ್ರೀಯ ಘಟಕದ ಉಪಾಧ್ಯಕ್ಷರಾದ ಅಣಬೇರು ರಾಜಣ್ಣ ಮಾತನಾಡಿ ಕಾಲು ಜಾರುವುದರಿಂದ ಆಗುವ ಅಪಾಯಕ್ಕಿಂತ ನಾಲಿಗೆ ಜಾರುವುದರಿಂದ ಆಗುವ ಅನಾಹುತ ಹೆಚ್ಚು. ಧರ್ಮದ ದಿಕ್ಸೂಚಿ ನಮ್ಮೆಲ್ಲರ ಬಾಳಿನ ಉನ್ನತಿಗೆ ಕಾರಣವಾಗುತ್ತದೆ. ವಿಶ್ವ ಬಂಧುತ್ವದ ಚಿಂತನೆಗಳನ್ನು ವೀರಶೈವ ಧರ್ಮ ಪ್ರತಿಪಾದಿಸಿದೆ. ಆಚಾರ್ಯರ ಶರಣರ ಆದರ್ಶ ಚಿಂತನೆಗಳು ನಮ್ಮೆಲ್ಲರ ಬಾಳಿಗೆ ಬೆಳಕು ತೋರಲೆಂದರು.

ಹರಪನಹಳ್ಳಿ ತೆಗ್ಗಿನಮಠ ಸಂಸ್ಥಾನದ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ವೀರಶೈವ ಧರ್ಮ ಪರಂಪರೆ ಪ್ರಾಚೀನವಾದುದು. ಈ ಧರ್ಮ ಕೊಟ್ಟಂಥ ಸಂದೇಶ ಮತ್ತು ಕಾಯಕ ಜೀವನದ ಉಜ್ವಲತೆಯನ್ನು ಕಾಣಬಹುದಾಗಿದೆ ಎಂದರು. ಹಾರನಹಳ್ಳಿ ಶಿವಯೋಗೀಶ್ವರ ಶಿವಾಚಾರ್ಯರು, ಚನ್ನಗಿರಿ ಕೇದಾರ ಶಿವಶಾಂತವೀರ ಶಿವಾಚಾರ್ಯರು ಉಪಸ್ಥಿತರಿದ್ದರು.

ಶ್ರೀಮತಿ ಶಿವಲೀಲ ಕೊಟ್ರಯ್ಯ, ಮೇಘ, ಲಿಂಗರಾಜ ಬಸಾಪುರ, ಕೆ.ಎಂ.ರುದ್ರಮುನಿ, ಮಂಜುಳ ಹೆಚ್.ಆರ್., ಐಗೂರು ಪ್ರಭು, ಚಂದ್ರಕಾಂತ್, ಪರಮೇಶ್ವರಪ್ಪ, ಡಿ.ಕೆ.ಮಾಲತೇಶ ಸೇರಿದಂತೆ ವಿವಿಧ ರಂಗಗಳಲ್ಲಿ ಸೇವೆ ಸಲ್ಲಿಸಿದ ಗಣ್ಯರಿಗೂ ಹಾಗೂ ದಾನಿಗಳಿಗೂ ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು. ನೇತೃತ್ವ ವಹಿಸಿದ ಕಣ್ವಕುಪ್ಪಿ ಡಾ.ನಾಲ್ವಡಿ ಶಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಅತಿಯಾದ ವೈಚಾರಿಕತೆಯ ದುಷ್ಪರಿಣಾಮದಿಂದ ಅನೇಕ ಸಂಕಷ್ಟ ಎದುರಿಸುವ ಪರಿಸ್ಥಿತಿ ಬಂದಿದೆ. ವೀರಶೈವ ಧರ್ಮದ ಮೂಲ ವಿಚಾರ ಧಾರೆಗಳನ್ನು ಅನುಸರಿಸಿ ಬಾಳಬೇಕೆಂದರು. ಜಯದೇವ ದೇವರಮನೆ ಸ್ವಾಗತ ಬಯಸಿದರು. ಪ್ರೊ.ಮಲ್ಲಯ್ಯ ನಿರೂಪಿಸಿದರು. ಹರೀಷ ಎನ್.ಕೆ. ಜಗದ್ಗುರುಗಳಿಗೆ ಗೌರವ ಮಾಲಾರ್ಪಣೆ ಸಲ್ಲಿಸಿದರು. ಬೆಳಿಗ್ಗೆ ಸಭಾಂಗಣದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಭಕ್ತರಿಗೆ ಶುಭ ಹಾರೈಸಿದರು. ಸಮಾರಂಭದ ನಂತರ ಅನ್ನ ದಾಸೋಹ ಜರುಗಿತು.

ಸಂಜೆ ಟಿಪ್ಸ್

HERO FINCORP

## 3668.13 ಕೋಟಿ ರೂ. ಮೊತ್ತದ ಐಪಿಒ ಬಿಡುಗಡೆಗಾಗಿ 'ಸೆಬಿ'ಗೆ ಡಿಆರ್ ಎಚ್ ಪಿ ಸಲ್ಲಿಸಿದ ಹೀರೋ ಫಿನ್‌ಕಾರ್ಪ್

ಹೀರೋ ಫಿನ್ಕಾರ್ಪ್ ಲಿಮಿಟೆಡ್(ಹೀರೋ ಫಿನ್ಕಾರ್ಪ್ ಅಥವಾ ದಿ ಕಂಪನಿ), ಆರಂಭಿಕ ಷೇರು ಬಿಡುಗಡೆ ಮಾಡುವ ಉದ್ದೇಶದಿಂದ ಮಾರುಕಟ್ಟೆ ನಿಯಂತ್ರಕ ಸಂಸ್ಥೆ 'ಸೆಕ್ಯುರಿಟೀಸ್ ಮತ್ತು ಎಕ್ಸ್ಚೇಂಜ್ ಬೋರ್ಡ್ ಆಫ್ ಇಂಡಿಯಾ(ಸೆಬಿ)'ಗೆ ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್‌ಹೆಚ್‌ಪಿ-ಕಂಪನಿ ವ್ಯವಹಾರದ ಸಂಕ್ಷಿಪ್ತ ವಿವರವುಳ್ಳ ದಾಖಲೆ ಪತ್ರ) ಸಲ್ಲಿಸಿದೆ. ಕಂಪನಿಯು ಆರಂಭಿಕ ಷೇರು ಬಿಡುಗಡೆ ಅಥವಾ ಐಪಿಒ ಮೂಲಕ ಈಕ್ವಿಟಿ ಷೇರುಗಳನ್ನು ಬಿಡುಗಡೆ ಮಾಡಿ, 36,681.34 ದಶಲಕ್ಷ(3668.13 ಕೋಟಿ ರೂ.) ರೂ. ನಿಧಿ ಕ್ರೋಢೀಕರಿಸುವ ಯೋಜನೆ ಹಾಕಿಕೊಂಡಿದೆ. ಪ್ರತಿ ಷೇರಿನ ಮುಖಬೆಲೆ 10 ರೂ. ಆಗಿರುತ್ತದೆ. ಐಪಿಒ ಅಥವಾ ಆರಂಭಿಕ ಷೇರು ಬಿಡುಗಡೆಯ ಒಟ್ಟು ಗಾತ್ರ 3668.13 ಕೋಟಿ ರೂ. ಆಗರುತ್ತದೆ. ಕಂಪನಿಯು 21,000 ದಶಲಕ್ಷ ರೂ. ಅಥವಾ 2,100 ಕೋಟಿ ರೂ. ಮೊತ್ತದ ತಾಜಾ ಷೇರುಗಳ ಮಾರಾಟ ಬಿಡುಗಡೆ (ತಾಜಾ ಸಂಚಿಕೆ) ಮಾಡಲಿದೆ. ಅದಲ್ಲದೆ, ಕಂಪನಿಯು ಮಾರಾಟ ಷೇರುದಾರರಿಂದ ಈಕ್ವಿಟಿ ಷೇರುಗಳ ಮಾರಾಟ ಕೊಡುಗೆ(ಪ್ರವರ್ತಕರ ಮಾರಾಟ ಕೊಡುಗೆ) ಮೂಲಕ 15,681.34 ದಶಲಕ್ಷ ರೂ. ಅಥವಾ 1,568.13 ಕೋಟಿ ರೂ. ನಿಧಿ ಸಂಗ್ರಹ ಯೋಜನೆ ಹೊಂದಿದೆ. ಹೀರೋ ಫಿನ್ಕಾರ್ಪ್ ಬ್ಯಾಂಕಿಂಗ್।ಯೇತರ ಹಣಕಾಸು ಸಂಸ್ಥೆ(ಎನ್ಬಿಎಫ್ಸಿ) ಯಾಗಿದ್ದುದೆ.

ಪ್ರಮುಖವಾಗಿ ಬೆಳೆಯುತ್ತಿರುವ ಬಿಡಿ ಮಾರಾಟ(ಚಿಲ್ಲರೆ) ಗ್ರಾಹಕರ ವಲಯ ಮತ್ತು ಭಾರತದಲ್ಲಿ ವೇಗವಾಗಿ ರೂಪು ಪಡೆಯುತ್ತಿರುವ ಎಂಎಸ್‌ಎಂಇ ಗ್ರಾಹಕರ ವಲಯಕ್ಕೆ ವೈವಿಧ್ಯಮಯ ಹಣಕಾಸು ಉತ್ಪನ್ನಗಳ ಶ್ರೇಣಿಗಳನ್ನು ಒದಗಿಸುತ್ತಿದೆ. ಕಂಪನಿಯು ಬಿಡಿ ಮಾರಾಟ, ಎಂಎಸ್‌ಎಂಇ ಮತ್ತು ಗ್ರಾಹಕರ ಮಾಹಿತಿಯುಳ್ಳ ಅಡಕ(ಸಿಐಎಫ್)ಗಳಿಗೆ ಕೆವೈಸಿ ಸಾಲ ಸೌಲಭ್ಯಗಳನ್ನು ನೀಡುತ್ತದೆ. ಇದು ಚಿಲ್ಲರೆ ಸಾಲ ವಿಭಾಗದಲ್ಲಿ ವಾಹನ, ವೈಯಕ್ತಿಕ ಮತ್ತು ಅಡಮಾನ ಸಾಲಗಳನ್ನು ವಿತರಿಸುತ್ತದೆ.

## ಅನ್ನದ ತಾಲಿಪಟ್ಟು

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಅನ್ನ, ಗೋಧಿ ಹಿಟ್ಟು, ಜೋಳದ ಹಿಟ್ಟು, ಕಡ್ಲೆ ಹಿಟ್ಟು, ಬೆಳ್ಳುಳ್ಳಿ, ಕೊತ್ತಂಬರಿ ಸೊಪ್ಪು, ಹಸಿ ಮೆಣಸಿನಕಾಯಿ, ಪುದಿನಾ, ಉಪ್ಪು, ಕಾರದಪುಡಿ, ಅರಿಸಿನಪುಡಿ.

### ಮಾಡುವ ವಿಧಾನ

ಮೊದಲಿಗೆ ಉಳಿದಿರೊ ಅನ್ನವನ್ನು ಮಿಕ್ಸರ್ ಜಾರ್ಗೆ ಹಾಕಿ ಅದಕ್ಕೆ ಬೆಳ್ಳುಳ್ಳಿ, ಕೊತ್ತಂಬರಿ ಸೊಪ್ಪು, ಹಸಿಶುಂಠಿ, ಒಂದೆರೆಡು ಹಸಿ ಮೆಣಸಿನಕಾಯಿ, ಪುದಿನಾ ಎಲೆ ಹಾಕಿ ರುಬ್ಬಿಕೊಳ್ಳಬೇಕು. ನಂತರ ಒಂದು ಪಾತ್ರೆಯಲ್ಲಿ ಅನ್ನದ ಮಿಶ್ರಣ ಹಾಕಿ ಅದಕ್ಕೆ ಒಂದು ಕಪ್ ಗೋಧಿ ಹಿಟ್ಟು, ಜೋಳದ ಹಿಟ್ಟು, ಕಡ್ಲೆ ಇಟ್ಟು, ರುಚಿಗೆ ತಕ್ಕಷ್ಟು ಉಪ್ಪು, ಕಾರದಪುಡಿ, ಅರಿಸಿನಪುಡಿ ಹಾಕಿ ಚಪಾತಿ ಹಿಟ್ಟಿನ ಹದಕ್ಕೆ ಕಲಿಸಿಕೊಳ್ಳಬೇಕು. 10 ನಿಮಿಷ ಬಿಟ್ಟು ಚಪಾತಿಯಂತೆ ಲಟ್ಟಿಸಿ, ಬೇಯಿಸಬಹುದು ಅಥವಾ ಎಣ್ಣೆ ಕಾಯಲು ಇಟ್ಟು ಅಂಗೈಗೆ ಎಣ್ಣೆ ಹಚ್ಚಿಕೊಂಡು ವಡೆ ರೀತಿ ತಟ್ಟಿ ಎಣ್ಣೆಯಲ್ಲಿ ಕರೆದರೆ, ರುಚಿಕರವಾದ ಅನ್ನದ ತಾಲಿಪಟ್ಟು ಸವಿಯಲು ರೆಡಿ. ಇದನ್ನು ಟೊಮೆಟೊ ಸಾಸ್, ಚಿಲ್ಲಿ ಸಾಸ್ನೊಟ್ಟಿಗೆ ಹಚ್ಚಿಕೊಂಡು ತಿನ್ನಬಹುದು.

## ಬಾಹುಬಲಿಯ ಬಲ್ಲಾಳದೇವನ ಪಾತ್ರಕ್ಕೆ ರಾಣಾ ದಗ್ಗುಬಾಟಿಗಿಂತ ಮೊದಲ ಆಯ್ಕೆಯಾಗಿದ್ದ ಹಾಲಿವುಡ್ ನಟ





ಎಸ್‌ಎಸ್ ರಾಜಮೌಳಿ ನಿರ್ದೇಶನದ 'ಬಾಹುಬಲಿ' ಭಾರತೀಯ ಸಿನಿರಂಗದಲ್ಲೇ ಹೊಸ ಮೈಲಿಗಲ್ಲು ಸೃಷ್ಟಿಸಿದ ಚಿತ್ರ. ಈ ಚಿತ್ರದಲ್ಲಿರುವ ಪ್ರತಿ ಪಾತ್ರಗಳು ಸಿನಿರಸಿಕರ ಮೆಚ್ಚುಗೆ ಗಳಿಸಿವೆ. ಬಲ್ಲಾಳದೇವನ ಪಾತ್ರದಲ್ಲಿ ಕಾಣಿಸಿಕೊಂಡಿರುವ ರಾಣಾ ದಗ್ಗುಬಾಟಿ ಅಭಿನಯ ಪ್ರಭಾಸ್ ಅಭಿನಯದಷ್ಟೇ ಮೆಚ್ಚುಗೆ ಗಳಿಸಿದೆ.

ಆದರೆ ಚಿತ್ರ ಪ್ರಾರಂಭವಾಗುವ ಮುನ್ನ ಬಲ್ಲಾಳದೇವನ ಪಾತ್ರಕ್ಕೆ ರಾಣಾ ದಗ್ಗುಬಾಟಿ ಮೊದಲ ಆಯ್ಕೆ ಆಗಿರಲಿಲ್ಲ ಎಂಬುದನ್ನ ದಗ್ಗುಬಾಟಿಯೇ ತಿಳಿಸಿದ್ದಾರೆ.

ನೆಟ್ಫ್ಲಿಕ್ಸ್‌ನಲ್ಲಿನ ಇತ್ತೀಚಿನ ಸಾಕ್ಷ್ಯಚಿತ್ರ ಕಾರ್ಯಕ್ರಮ 'ಮಾರ್ಡನ್ ಮಾಸ್ಟರ್ಸ್' ನಲ್ಲಿ ರಾಣಾ ದಗ್ಗುಬಾಟಿ ಈ ಬಗ್ಗೆ ತಿಳಿಸಿದ್ದಾರೆ.

ಎಸ್ ಎಸ್ ರಾಜಮೌಳಿ ಅವರೊಂದಿಗೆ ಕೆಲಸ ಮಾಡಿದ ಅನುಭವಗಳನ್ನು ತೆರೆದಿಟ್ಟ ಅವರು ಚಿತ್ರದ ನಿರ್ಮಾಪಕರೊಂದಿಗೆ ತಾವು ನಡೆಸಿದ್ದ ಸಂಭಾಷಣೆಯನ್ನು ಬಹಿರಂಗಪಡಿಸಿದರು. ''ನಿರ್ಮಾಪಕ ಶೋಬು ಯರ್ಲಗಡ್ಡ ಬಂದು ಇದು ಯುದ್ಧ ಆಧಾರಿತ ಚಿತ್ರ ಎಂದು ಹೇಳಿದರು. ನಾನು ಚಿತ್ರದ ಕಥೆಯನ್ನು ಒಪ್ಪಿಕೊಂಡೆ. ಈ ವೇಳೆ ಅವರು ನನ್ನನ್ನು ಬಲ್ಲಾಳದೇವನ ಪಾತ್ರಕ್ಕೆ ಆಯ್ಕೆ ಮಾಡುವ ಮುನ್ನ ಬೇರೆ ನಟರನ್ನು ಸಂಪರ್ಕಿಸಿದ್ದಾಗಿ ತಿಳಿಯಿತು. ಆಗ ನಾನು ನನಗಿಂತ ಮುಂಚೆ ನಿಮ್ಮ ಆಲೋಚನೆಯಲ್ಲಿದ್ದ ಆ ನಟ ಯಾರು ಎಂದು ಪ್ರಶ್ನಿಸಿದಾಗ ಹಾಲಿವುಡ್ ನಟ ಜೇಸನ್ ಮೊಮೊವಾ ಎಂದು ತಿಳಿಯಿತು'' ಎಂದಿದ್ದಾರೆ.

ಇದನ್ನು ಕೇಳಿದ ನಂತರ ತನಗೆ ಉಂಟಾದ ಆಶ್ಚರ್ಯವನ್ನು ವ್ಯಕ್ತಪಡಿಸಿದ ರಾಣಾ, ಅಂತಹ ಖ್ಯಾತ ತಾರೆಯ ನಂತರ ನಾನು ಪಾತ್ರಕ್ಕೆ ಎರಡನೇ ಆಯ್ಕೆಯಾಗಿದ್ದಕ್ಕೆ ತುಂಬಾ ಸಂತೋಷಪಟ್ಟಿದ್ದೇನೆ ಎಂದು ಹೇಳಿದರು.

ರಾಣಾ ದಗ್ಗುಬಾಟಿ ಅವರು ತಮಿಳು ಚಲನಚಿತ್ರ 1945 ರಲ್ಲಿ ಕೊನೆಯ ಬಾರಿಗೆ ಕಾಣಿಸಿಕೊಂಡರು. ಅದರ ನಂತರ ಅವರು ತೆಲುಗು ಚಿತ್ರ ಸ್ಪೈನಲ್ಲಿ ಗಮನಾರ್ಹ ಅತಿಥಿ ಪಾತ್ರವನ್ನು ಮಾಡಿದರು. ಸದ್ಯ ರಜನಿಕಾಂತ್ ಅವರ ನೇತೃತ್ವದ ವೆಟ್ಟೈಯಾನ್ ಚಿತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ.

## 'ಕ್ಯಾಲ್ಸಿಯಂ' ಪ್ರಮಾಣ ಹೆಚ್ಚಾಗಲು ಕುಡಿಯಿರಿ ಈ ಜ್ಯೂಸ್



ಹೆಲ್ತ್ ಟಿಪ್ಸ್

ದೇಹದಲ್ಲಿ ಕ್ಯಾಲ್ಸಿಯಂ ಪ್ರಮಾಣ ಕಡಿಮೆಯಾಗುತ್ತಿದ್ದಂತೆ ಕೀಲು ನೋವು, ಗಂಟು ನೋವು, ಹಲ್ಲುಗಳಲ್ಲಿ ಸಮಸ್ಯೆ ಕಂಡುಬರುವುದು ಸಾಮಾನ್ಯ. ಇದರ ನಿವಾರಣೆಗೆ ಮಾತ್ರೆಗಳ ಮೊರೆ ಹೋಗಬೇಕಿಲ್ಲ. ಮನೆಯಲ್ಲೇ ಕೆಲವು ಮದ್ದುಗಳನ್ನು ತಯಾರಿಸಬಹುದು.

ವಿಪರೀತ ಸುಸ್ತು, ಶಕ್ತಿಹೀನತೆ, ಆಲಸ್ಯ, ಏಕಾಗ್ರತೆ ಕೊರತೆಯಂಥ ಲಕ್ಷಣಗಳು ಕಂಡು ಬಂದರೆ ನಿಮಗೆ ಕ್ಯಾಲ್ಸಿಯಂ ಕೊರತೆಯಾಗಿದೆ ಎಂದರ್ಥ.

ಈ ಒಂದು ಪಾನೀಯವನ್ನು ನಿತ್ಯ ಕುಡಿಯುವ ಮೂಲಕ ನಿಮ್ಮ ಸಮಸ್ಯೆಯನ್ನು ಬಗೆಹರಿಸಬಹುದು. ಅದನ್ನು ತಯಾರಿಸುವುದು ಹೇಗೆ ನೋಡೋಣ.

ಇದಕ್ಕೆ ಗಸೆಗಸೆ, ತುಪ್ಪ ಹಾಗೂ ಹಾಲು ಬೇಕು. ಮೊದಲು ಗಸೆಗಸೆಯನ್ನು ತುಪ್ಪದಲ್ಲಿ ಚೆನ್ನಾಗಿ ಹುರಿಯಿರಿ. ಒಂದು ಲೋಟ ಹಾಲನ್ನು ಕಾಯಿಸಿ. ಅದಕ್ಕೆ ಈ ಹುರಿದಿಟ್ಟ ಗಸೆಗಸೆಯನ್ನು ಹಾಕಿ ಚೆನ್ನಾಗಿ ಕುದಿಸಿ. ರುಚಿಗೆ ತಕ್ಕಷ್ಟು ಸಕ್ಕರೆ ಬಳಸಿ. ಇದನ್ನು ನಿತ್ಯ ಖಾಲಿ ಹೊಟ್ಟೆಯಲ್ಲಿ ಸೇವಿಸಿದರೆ ವಾರದೊಳಗೆ ನಿಮ್ಮ ಕ್ಯಾಲ್ಸಿಯಂ ಕೊರತೆ ಸಮಸ್ಯೆ ದೂರವಾಗುತ್ತದೆ.

ಸಾಕಷ್ಟು ಪ್ರಮಾಣದಲ್ಲಿ ಹಣ್ಣು, ತರಕಾರಿ ಮತ್ತು ಸೊಪ್ಪುಗಳನ್ನು ಬಳಸುವುದೂ ಬಹಳ ಮುಖ್ಯ. ಮಲಗುವ ಮುನ್ನ ಒಂದು ಲೋಟ ದಪ್ಪನೆಯ ಹಾಲು ಕುಡಿದು ಮಲಗಿ. ನಿಮ್ಮ ಎಲುಬು ಸ್ಟ್ರಾಂಗ್ ಆಗಲು ಇಷ್ಟು ಸಾಕು.

## 4500 ಕೋಟಿ ಒಡೆಯನ ಜೊತೆ ಮದುವೆಗೆ ರೆಡಿಯಾದ್ರಾ ಕೃತಿ ಸನೋನ್?





ಬಾಲಿವುಡ್ ಬೆಡಗಿ ಕೃತಿ ಸನೋನ್ ಪಡ್ಡೆಹುಡುಗರಿಗೆ ಬ್ಯಾಡ್ ನ್ಯೂಸ್ ಕೊಟ್ಟಿದ್ದಾರೆ. ಉದ್ಯಮಿ ಕಬೀರ್ ಜೊತೆ ಕೃತಿ ಮದುವೆ ಎಂದು ಸುದ್ದಿಯೊಂದು ಹೊರಬಿದ್ದಿದೆ. ಸದ್ಯದಲ್ಲೇ ಗೆಳೆಯನ ಜೊತೆ ದಾಂಪತ್ಯ ಜೀವನಕ್ಕೆ ಕಾಲಿಡಲು ತಯಾರಿ ಮಾಡಿಕೊಳ್ತಿದ್ದಾರೆ ಎಂಬ ಸುದ್ದಿಯೊಂದು ಇದೀಗ ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. 'ಆದಿಪುರುಷ್' ಹೀರೋಯಿನ್ ಕೃತಿ ಇತ್ತೀಚಿನ ದಿನಗಳಲ್ಲಿ ಸಿನಿಮಾಗಿಂತ ಖಾಸಗಿ ವಿಚಾರವಾಗಿಯೇ ಭಾರೀ ಸುದ್ದಿಯಾಗ್ತಿದ್ದಾರೆ. ಸದ್ಯ ಉದ್ಯಮಿ ಕಬೀರ್ ಬಹಿಯಾ ಜೊತೆ ನಟಿ ಡೇಟಿಂಗ್ ಮಾಡುತ್ತಿದ್ದಾರೆ. ಇತ್ತೀಚೆಗೆ ಬಾಯ್‌ಫ್ರೆಂಡ್ ಜೊತೆ ಗ್ರೀಸ್‌ನಲ್ಲಿ ಕೃತಿ ಬರ್ತ್‌ಡೇ ಆಚರಿಸಿಕೊಂಡಿದ್ದಾರೆ. ಇದು ಡೇಟಿಂಗ್ ಸುದ್ದಿಗೆ ಮತ್ತಷ್ಟು ಪುಷ್ಠಿ ನೀಡಿದೆ.

ಈಗ ಲೇಟೆಸ್ಟ್ ವಿಚಾರ ಏನೆಂದರೆ, 4500 ಕೋಟಿ ಒಡೆಯ ಕಬೀರ್ ಜೊತೆ ಮದುವೆಗೆ ನಟಿ ಸಜ್ಜಾಗಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. ಡೇಟಿಂಗ್ ವಿಷ್ಯ ಹೊರಬಿದ್ದ ಬೆನ್ನಲ್ಲೇ ಕೃತಿ ಮದುವೆ ಬಗ್ಗೆ ಗುಸು ಗುಸು ಶುರುವಾಗಿದೆ.

ಎಂ.ಎಸ್ ಧೋನಿ ದಂಪತಿ ಜೊತೆ ಉತ್ತಮ ಒಡನಾಟ ಹೊಂದಿರುವ ಕಬೀರ್ ಬಹಿಯಾ ಅವರ ಕುಟುಂಬದ ಆಸ್ತಿಯ ಮೌಲ್ಯ 4500 ಕೋಟಿ ರೂ. ಎನ್ನಲಾಗಿದೆ. ಶ್ರೀಮಂತ ಕುಟುಂಬಗಳಲ್ಲಿ ಬಹಿಯಾ ಫ್ಯಾಮಿಲಿ ಕೂಡ ಒಂದಾಗಿದ್ದು, ಈ ಮನೆಗೆ ನಟಿ ಸೊಸೆಯಾಗ್ತಾರೆ ಎನ್ನಲಾಗಿದೆ. ಈ ಸುದ್ದಿ ನಿಜಾನಾ? ಎಂದು ಮುಂದಿನ ದಿನಗಳವರೆಗೂ ಕಾದುನೋಡಬೇಕಿದೆ. ಅಂದಹಾಗೆ, ಕಳೆದ ವರ್ಷ 'ಬಾಹುಬಲಿ' ಹೀರೋ ಪ್ರಭಾಸ್ ಜೊತೆ ಕೃತಿ ಸನೋನ್ ಹೆಸರು ಕೇಳಿ ಬಂದಿತ್ತು. ಇನ್ನೇನು ಮದುವೆ ಆಗಿಯೇ ಬಿಡುತ್ತಾರೆ ಎಂದೇ ಹೇಳಲಾಗಿತ್ತು. ಆ ಮೇಲೆ ಈ ವಿಚಾರ ಸುಳ್ಳು ಎಂದು ಎಲ್ಲರ ಅರಿವಿಗೆ ಬಂದಿತ್ತು.

## ನೇರ ನೀಳ ಕೂದಲಿಗಾಗಿ ಟಿಪ್ಸ್

### ಬ್ಯೂಟಿ ಟಿಪ್ಸ್

ನಯವಾದ ಉದ್ದನೆಯ ಕೂದಲು ನಿಮ್ಮದಾಗಬೇಕೆಂಬ ಬಯಕೆಯೇ ಅದಕ್ಕಾಗಿ ಬ್ಯೂಟಿ ಪಾರ್ಲರ್ ಬಾಗಿಲು ತಟ್ಟದೆ, ಮನೆಯಲ್ಲಿಯೇ ಕೂದಲ ಸ್ಟ್ರೈಟನಿಂಗ್ ಮಾಡಿಕೊಳ್ಳಬಹುದು. ಹೇಗೆಂದಿರಾ?

ನಾಲ್ಕು ಚಮಚ ಅಕ್ಕಿಗೆ ಎರಡು ಕಪ್ ನೀರು ಹಾಕಿ ಬೇಯಿಸಿ, ತಣಿಸಿ. ಮಿಕ್ಸಿಗೆ ಒಂದು ಚಮಚ ತುಪ್ಪ, ಒಂದು ಚಮಚ ತೆಂಗಿನ ತುರಿ ಸೇರಿಸಿ ಅನ್ನದೊಂದಿಗೆ ರುಬ್ಬಿ.ಅದನ್ನು ತಲೆಕೂದಲ ಬುಡದಿಂದ ಕೆಳಗಿನವರೆಗೆ ಹಚ್ಚಿ. ಇದರಿಂದ ಕೂದಲು ಉದ್ದವಾಗಿ, ಬಲಿಷ್ಠವಾಗಿ ಬೆಳೆಯುವುದು ಮಾತ್ರವಲ್ಲ, ಸ್ಟ್ರೈಟನಿಂಗ್ ಮಾಡಿದ ಪರಿಣಾಮವನ್ನು ನೀಡುತ್ತದೆ.

ತಲೆ ಕೂದಲು ಬಲಿಷ್ಠವಾಗಿಸಲು ಮತ್ತು ನಯವಾಗಿಸಲು ಅಕ್ಕಿಯಷ್ಟು ಉತ್ತಮ ಸಾಮಗ್ರಿ ಇನ್ನೊಂದಿಲ್ಲ. ಹಾಗಾಗಿ ಯಾವುದೇ ಅಡ್ಡ ಪರಿಣಾಮದ ಭಯವಿಲ್ಲದೆ ಇದನ್ನು ಬಳಸಿ ಹಾಗೂ ನೇರ ನೀಳ ಕೂದಲನ್ನು ನಿಮ್ಮದಾಗಿಸಿಕೊಳ್ಳಿ.



## ಭೀಮನ ಅಮಾವಾಸ್ಯೆ ವ್ರತಾಚರಣೆ ಹಾಗೂ ಮಹತ್ವ



ಹಿಂದೂ ಸಂಪ್ರದಾಯದ ಪ್ರಕಾರ ಆಷಾಢ ಮಾಸದ ಕೊನೆಯ ದಿನವನ್ನು ಅಥವಾ ಆಷಾಡ ಅಮಾವಾಸ್ಯೆಯನ್ನು ಭೀಮನ ಅಮಾವಾಸ್ಯೆ ಎಂದು ಆಚರಿಸಲಾಗುತ್ತದೆ. ಈ ಅಮಾವಾಸ್ಯೆಯನ್ನು ಭೀಮನ ಅಮಾವಾಸ್ಯೆ, ಜ್ಯೋತಿರ್ಭೀಮೇಶ್ವರ ಅಮಾವಾಸ್ಯೆ ಅಥವಾ ಆಷಾಢ ಅಮಾವಾಸ್ಯೆ ಎಂದು ಕರೆಯಲಾಗುತ್ತದೆ.

ಇಲ್ಲಿ ಭೀಮ ಎಂದರೆ ಮಹಾಭಾರತದಲ್ಲಿ ನಾವು ಕಾಣುವ ಭೀಮನಲ್ಲ. ಅಪರಿಮಿತ ಬಲ, ಭಕ್ತರ ಮನೋಭಿಷ್ಟ ಈಡೇರಿಕೆಯಂತಹ ಸದ್ಗುಣಗಳುಳ್ಳ ಶ್ರೀ ರುದ್ರದೇವರನ್ನೂ ಭೀಮ ಎಂದು ಕರೆಯಲಾಗುತ್ತದೆ. ಈ ಭೀಮನಾಮಕ ಶ್ರೀರುದ್ರದೇವರನ್ನು ಜ್ಯೋತಿ ರೂಪದ ದೀಪದಲ್ಲಿ ಆವಾಹಿಸಿ ಪೂಜಿಸುವುದರಿಂದ ಜ್ಯೋತಿರ್ಭೀಮೇಶ್ವರ ವ್ರತ ಎಂದು ಕರೆಯಲಾಗುತ್ತದೆ. ಈ ದಿನ ಗಂಡನ ಆಯಸ್ಸು ಆರೋಗ್ಯ ವೃದ್ಧಿಗಾಗಿ ಪತ್ನಿಯು ಜ್ಯೋತಿರ್ಭೀಮೇಶ್ವರನನ್ನು ಪ್ರಾರ್ಥಿಸಿ ವ್ರತಾಚರಣೆ ಮಾಡುವುದು ಸಂಪ್ರದಾಯ

**ಜ್ಯೋತಿರ್ಭೀಮೇಶ್ವರ ವ್ರತಾಚರಣೆ :** ಸಂಕಲ್ಪದಿಂದ ಪ್ರಾರಂಭಿಸಿ ಗಣಪತಿ ಪೂಜೆ ಮಾಡಿ ನಂತರ ಭೀಮೇಶ್ವರನ ಪೂಜೆ ನೆರವೇರಿಸಲಾಗುತ್ತೆ. ಗಣಪತಿ ಅಷ್ಟೋತ್ತರ, ಶಿವ ಅಷ್ಟೋತ್ತರ, ದೇವರ ಆವಾಹನೆ,ಸ್ಥಾಪನೆ, ಅರ್ಚನೆ, ಫಲಪುಷ್ಪ ನೈವೇದ್ಯ ಅರ್ಪಣೆಯ ನಂತರ ಆರತಿಯೊಂದಿಗೆ ಪೂಜೆ ಸಮಾಪ್ತಿಗೊಳಿಸಬಹುದು. ವ್ರತಾಚರಣೆಯ ಪ್ರಯುಕ್ತ 9 ಗಂಟಿನ ಗೌರಿ ದಾರ ಅಂದರೆ ಅರಿಶಿನ ಲೇಪಿತ ದಾರವನ್ನು ಭೀಮೇಶ್ವರನ ಮುಂದಿಟ್ಟು ಪೂಜೆ ಮಾಡಿ ಕನ್ಯೆಯರು ಹಾಗೂ ವಿವಾಹಿತರು ನಂತರ ಕೈಗೆ ಕಟ್ಟಿಕೊಳ್ಳುವುದು ಪದ್ಧತಿ. ಆ ನಂತರ ವಿವಾಹಿತ ಹೆಣ್ಣುಮಕ್ಕಳು ಗಂಡನ ಕಾಲಿಗೆ ನಮಸ್ಕರಿಸಿ ಪೂಜೆ ಸಂಪನ್ನಗೊಳಿಸುವುದು ವ್ರತಾಚರಣೆಯ ಭಾಗ.

**ಭೀಮನ ಅಮಾವಾಸ್ಯೆ ವ್ರತ ಕಥೆ:** ಜಾನಪದ ಪ್ರಕಾರ, ಭೀಮನ ಅಮವಾಸ್ಯೆಯಂದು, ಮಹಾನ್ ಯೋಧ ಭೀಮನು ಸಾವಿನ ದೇವರಾದ ಯಮನನ್ನು ಎದುರಿಸಿದನು. ಭೀಮನ ಶಕ್ತಿ ಮತ್ತು ಭಕ್ತಿಯಿಂದ ಪ್ರಭಾವಿತನಾದ ರಾಜ ಯಮ ಅವನಿಗೆ ವರವನ್ನು ನೀಡಿದನು. ಈ ದಿನದಂದು ಉಪವಾಸವನ್ನು ಆಚರಿಸುವ ಮತ್ತು ಯಮ ದೇವರಿಗೆ ಪ್ರಾರ್ಥನೆ ಸಲ್ಲಿಸುವವರು ಉತ್ತಮ ಆರೋಗ್ಯ, ದೀರ್ಘಾಯುಷ್ಯ ಮತ್ತು ಅಕಾಲಿಕ ಮರಣದಿಂದ ರಕ್ಷಣೆಯನ್ನು ಹೊಂದುತ್ತಾರೆ ಎನ್ನುವ ವರವನ್ನು ನೀಡಿದನು. ಅಂದಿನಿಂದ, ಭೀಮನ ಅಮವಾಸ್ಯೆಯನ್ನು ಯಮನ ಆಶೀರ್ವಾದವನ್ನು ಪಡೆಯಲು ಉಪವಾಸ ಮತ್ತು ಪೂಜೆಯ ದಿನವಾಗಿ ಆಚರಿಸಲಾಗುತ್ತದೆ.

**ವ್ರತದ ಪೌರಾಣಿಕ ಹಿನ್ನೆಲೆ:** ಹಿಂದೆ ಸೌರಾಷ್ಟ್ರ ದೇಶದಲ್ಲಿ ವಜ್ರಬಾಹು ರಾಜನ ಮಗ ಜಯಶೀಲ ಮೃತನಾದಾಗ, ರಾಜನು ತನ್ನ ಪಿತೃಗಳಿಗೆ ಯಾರು ತಿಲೋದಕವನ್ನು ಕೊಡುತ್ತಾರೆ ಎಂದು ಆಘಾತದಿಂದ , ತನ್ನ ಮಗನಿಗೆ ವಿವಾಹ ಮಾಡಿದರೆ ಆ ಹೆಣ್ಣಿನ ಮೂಲಕ ಪಿತೃಗಳಿಗೆ ಸದ್ಗತಿ ನೀಡಬಹುದೆಂದು ಯೋಚಿಸುತ್ತಾನೆ. ಯಾರು ತನ್ನ ಮೃತ ಪುತ್ರನ ವಿವಾಹಕ್ಕೆ ಹೆಣ್ಣು ಕೊಡುತ್ತಾರೋ ಅವರಿಗೆ ಯಥೇಷ್ಟ ದಾನ ಕೊಡುವುದಾಗಿ ಘೋಷಿಸುತ್ತಾನೆ. ಅದೇ ಊರಿನಲ್ಲಿದ್ದ ಒಬ್ಬ ಬಡ ಬ್ರಾಹ್ಮಣನು ತನ್ನ ಬಡತನದಿಂದ ದೂರಬರಲು ನಿರ್ಧರಿಸಿ, ತನ್ನ ಮಗಳನ್ನು ಆ ಮೃತ ರಾಜಕುಮಾರನಿಗೆ ಕೊಟ್ಟು ವಿವಾಹ ಮಾಡಿ ತನಗೆ ಬರಬೇಕಾದ ಧನಧಾನ್ಯಾದಿಗಳನ್ನು ಆ ಬ್ರಾಹ್ಮಣ ಪಡೆದುಕೊಳ್ಳುತ್ತಾನೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ನಿಮ್ಮ ವೃತಿಜೀವನದಲ್ಲಿ ಮುನ್ನಡೆಯುವಿರಿ, ಹಳೆ ಸ್ನೇಹಿತರೊಂದಿಗೆ ಪುನರ್ಮಿಲನ, ಪ್ರೀತಿಯ ಸಂಬಂಧದಲ್ಲಿ ಎಚ್ಚರಿಕೆ ಅಗತ್ಯ.

**ವೃಷಭ:** ಶುಭ ಕಾರ್ಯಗಳು ನಡೆಯುವ ಸಾಧ್ಯತೆ, ಕೋರ್ಟ್ ವ್ಯವಹಾರದಲ್ಲಿ ಜಯ, ಹಿರಿಯರಿಗೆ ಅನಾರೋಗ್ಯ.

**ಮಿಥುನ:** ಮನೆಗೆ ಹೊಸ ಅತಿಥಿ ಅಗಮನ, ಹೊಸ ವಾಹನ ಖರೀದಿ ಯೋಗ, ದೂರ ಪ್ರಯಾಣದಲ್ಲಿ ಎಚ್ಚರವಹಿಸಿ.

**ಕಟಕ:** ವಿದ್ಯಾರ್ಥಿಗಳಿಗೆ ಹೆಚ್ಚಿನ ಪರಿಶ್ರಮ ಅತ್ಯಗತ್ಯ, ಕುಟುಂಬದಲ್ಲಿ ಗೌರವ ಹೆಚ್ಚಾಗುತ್ತದೆ, ಅತಿಯಾದ ಕೋಪ ಒಳ್ಳೆಯದಲ್ಲ

**ಸಿಂಹ:** ಆರೋಗ್ಯದ ಬಗ್ಗೆ ನಿಗಾವಹಿಸಿ, ಕಲೆ ಮತ್ತು ಸಂಗೀತದ ಕಡೆಗೆ ಆಸಕ್ತಿ, ಆರ್ಥಿಕ ನಷ್ಟ, ಉದ್ಯೋಗ ವ್ಯವಹಾರ ಕುಂಠಿತ.

**ಕನ್ಯಾ:** ವೈವಾಹಿಕ ಜೀವನದಲ್ಲಿ ಸಂತೋಷ, ಉದ್ಯೋಗದಲ್ಲಿ ಬಡ್ತಿ ಸಾಧ್ಯತೆ, ಮಕ್ಕಳ ಜೊತೆ ಭಿನ್ನಾಭಿಪ್ರಾಯ.

**ತುಲಾ:** ಅವಿವಾಹಿತರಿಗೆ ವಿವಾಹಯೋಗ, ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ, ಅತಿಯಾಗಿ ಯಾರನ್ನು ನಂಬಬೇಡಿ.

**ವೃಶ್ಚಿಕ:** ದೀರ್ಘಾವಧಿ ಷೇರು ಹೂಡಿಕೆಯಲ್ಲಿ ಲಾಭ, ಉತ್ತಮ ಆರೋಗ್ಯ, ಹಿತ ಶತ್ರುಗಳಿಂದ ತೊಂದರೆ.

**ಧನುಸ್ಸು:** ಕೃಷಿ ಭೂಮಿಯಲ್ಲಿ ಉತ್ತಮ ಬೆಳೆ, ದೇವಾಲಯದ ಅಭಿವೃದ್ಧಿ ಕಾರ್ಯಕ್ಕೆ ಚಾಲನೆ, ಆರೋಗ್ಯದ ಬಗ್ಗೆ ಜಾಗೃತರಾಗಿರಿ.

**ಮಕರ:** ವಸ್ತ್ರಾಭರಣ ವ್ಯಾಪಾರಿಗಳಿಗೆ ಲಾಭ, ಪಾಲುದಾರಿಕೆ ವ್ಯವಹಾರದಲ್ಲಿಗಮನ ಅಗತ್ಯ, ಮಾತಿನಲ್ಲಿ ಮೃದುತ್ವವಿರಲಿ.

**ಕುಂಭ:** ಹೊಸ ವ್ಯಾಪಾರ ಆರಂಭಿಸುವ ಸಾಧ್ಯತೆ, ರಾಜಕೀಯ ನಾಯಕರಿಗೆ ಉತ್ತಮ ವಾರ, ಕುಟುಂಬದಲ್ಲಿ ಅಶಾಂತಿ.

**ಮೀನ:** ಲೇವಾದೇವಿ ಮಾಡುವವರಿಗೆ ನಷ್ಟ, ದೂರ ಪ್ರಯಾಣ ಒಳ್ಳೆಯದಲ್ಲ, ಮನೆಗೆ ನೆಂಟರಿಷ್ಟರ ಆಗಮನ.

## ಚಿನ್ನಾಭರಣ ವ್ಯಾಪಾರಿಗಳಿಗೆ ವ್ಯಾಪಾರ್ ವಿಕಾಸ್ ಗೋಲ್ಡ್ ಲೋನ್

ಚಿನ್ನಾಭರಣ ವ್ಯಾಪಾರಿಗಳು ಅಥವಾ ವರ್ತಕರ ಸಮುದಾಯವನ್ನು ಸಬಲೀಕರಣಗೊಳಿಸುವ ನಿರಂತರ ಪ್ರಯತ್ನದ ಭಾಗವಾಗಿ, 137 ವರ್ಷಗಳಷ್ಟು ತೀರಾ ಹಳೆಯದಾದ ಮುತ್ತೂಟ್ ಪಪ್ಪಚನ್ ಗ್ರೂಪ್ (ಮುತ್ತೂಟ್ ಬ್ಲೂ)ನ ಪ್ರಮುಖ ಕಂಪನಿಯಾದ ಮುತ್ತೂಟ್ ಫಿನ್ಕಾರ್ಪ್ ಲಿಮಿಟೆಡ್ ಹೊಸ ಯೋಜನೆಯೊಂದನ್ನು ಮಾರುಕಟ್ಟೆಗೆ ಪರಿಚಯಿಸಿದೆ ? ಅದು ''ವ್ಯಾಪಾರಿ ವಿಕಾಸ್ ಗೋಲ್ಡ್ ಲೋನ್''. ಈ ನವೀನ ಕೊಡುಗೆ ಅಥವಾ ಉತ್ಪನ್ನವನ್ನು ಚಿನ್ನಾಭರಣ ವ್ಯಾಪಾರಿಗಳ ವಿಕಸನಗೊಳ್ಳುತ್ತಿರುವ ದೈನಂದಿನ ಆರ್ಥಿಕ ಅಗತ್ಯಗಳನ್ನು ಪೂರೈಸಲು ನೆರವಾಗುವಂತೆ ವಿನ್ಯಾಸಗೊಳಿಸಲಾಗಿದೆ. ಈ ಯೋಜನೆಯು ಅವರಿಗೆ ಸರಿಸಾಟಿಯಿಲ್ಲದ ಹೊಂದಾಣಿಕೆ(ನಮ್ಯತೆ) ಮತ್ತು ಮೌಲ್ಯವನ್ನು ಒದಗಿಸುತ್ತದೆ.

ವ್ಯಾಪಾರಿಗಳು ತಮ್ಮ ಚಿನ್ನಾಭರಣಗಳಿಂದ ಗರಿಷ್ಠ ಸಾಲದ ಮೌಲ್ಯ ಪಡೆಯಲು ಅನುಕೂಲ ಮಾಡಿಕೊಡಬಹುದು. ಇದು ಅವರಿಗೆ ತಮ್ಮ ವ್ಯಾಪಾರ ವ್ಯವಹಾರಗಳನ್ನು ಬೆಂಬಲಿಸಲು ಮತ್ತು ವಿಸ್ತರಿಸಲು ಅಗತ್ಯವಾದ ಹಣ ಅಥವಾ ನಿಧಿ ಒದಗಿಸುತ್ತದೆ. ಈ ಯೋಜನೆಯು 7 ದಿನಗಳಿಂದ ಹಿಡಿದು 12 ತಿಂಗಳವರೆಗೆ ಅವಧಿ ಹೊಂದಿದ್ದು, ಸಾಕಷ್ಟು ನಮ್ಯತೆ ಅಥವಾ ಹೊಂದಾಣಿಕೆ ನೀಡುತ್ತದೆ. ಒಬ್ಬರ ಕಸ್ಟಮೈಸ್ ಮಾಡಿದ ಹಣದ ಅವಶ್ಯಕತೆಗಳನ್ನು ಆಧರಿಸಿದ ನಿರ್ಧಾರ ತೆಗೆದುಕೊಳ್ಳಲು ವ್ಯಾಪಾರಿಗಳಿಗೆ ಅವಕಾಶ ಕಲ್ಪಿಸುತ್ತದೆ. ವ್ಯಾಪಾರ್ ವಿಕಾಸ್ ಗೋಲ್ಡ್ ಲೋನ್ ಯೋಜನೆಯಲ್ಲಿ ಸುಲಭವಾದ ದೈನಂದಿನ ಮರುಪಾವತಿ ಆಯ್ಕೆಗಳಿವೆ. ವ್ಯಾಪಾರಿಗಳ ನಗದು ಹರಿವಿಗೆ ಅನುಗುಣವಾಗಿ ದೈನಂದಿನ ಬಡ್ಡಿ ದರ ಕಡಿಮೆ ಮಾಡಲು ಇದು ಅನುವು ಮಾಡಿಕೊಡುತ್ತದೆ. ಅಲ್ಲಿ ವ್ಯಾಪಾರಿಗಳು ದಿನಗಳ ಆಧಾರದಲ್ಲಿ ಮತ್ತು ಬಳಸಿದ ಮೊತ್ತಕ್ಕೆ ಮಾತ್ರ ಬಡ್ಡಿ ಪಾವತಿಸಬೇಕಾಗುತ್ತದೆ. ಆಕರ್ಷಕ ಬಡ್ಡಿ ದರದೊಂದಿಗೆ ಸಾಲ ಯೋಜನೆಯು ಹಣಕಾಸಿನ ಹೊಂದಾಣಿಕೆ ಅಥವಾ ನಮ್ಯತೆ ಬಯಸುವ ವ್ಯಾಪಾರಿಗಳಿಗೆ ಆಕರ್ಷಕ ಆಯ್ಕೆ ನೀಡುತ್ತದೆ. ಏಕೆಂದರೆ ಈ ಯೋಜನೆಯಲ್ಲಿ ಯಾವುದೇ ಪೂರ್ವಪಾವತಿ ಶುಲ್ಕಗಳಿಲ್ಲ, ಕ್ರೆಡಿಟ್ ಹಿಸ್ಟರಿಯಲ್ಲೂ ಸಹ ಹೊಂದಾಣಿಕೆ ಅಥವಾ ನಮ್ಯತೆ ನೀಡುತ್ತದೆ (ಸಿಬಿಲ್ ಮಾನದಂಡ). ಸಾಲದ ಬಡ್ಡಿ ದರವನ್ನು ಕಡಿಮೆ ಆಗುವ ಸಾಲ ಮೊತ್ತಕ್ಕೆ ಲೆಕ್ಕ ಹಾಕಲಾಗುತ್ತದೆ. ಸಾಲಗಾರರು ಬಾಕಿ ಇರುವ ಸಾಲ ಮೊತ್ತಕ್ಕೆ ಮಾತ್ರ ಬಡ್ಡಿ ಪಾವತಿಸುತ್ತಾರೆ ಎಂಬುದನ್ನು ಖಚಿತಪಡಿಸುತ್ತದೆ. ಈ ತರ್ಕಬದ್ಧ ಲೆಕ್ಕಾಚಾರವು ಸಾಲಗಾರನ ಆರ್ಥಿಕ ಹೊರೆಯನ್ನು ಮತ್ತಷ್ಟು ಕಡಿಮೆ ಮಾಡುತ್ತದೆ. ಮುತ್ತೂಟ್ ಫಿನ್ಕಾರ್ಪ್ನ ಸಿಇಒ ಶ್ರೀ ಶಾಜಿ ವರ್ಗೀಸ್ ಮಾತನಾಡಿ, ''ವ್ಯಾಪಾರ್ ವಿಕಾಸ್ ಗೋಲ್ಡ್ ಲೋನ್ ಪರಿಚಯಿಸಲು ನಾವು ಉತ್ಸುಕರಾಗಿದ್ದೇವೆ. ಇದು ಚಿನ್ನಾಭರಣ ವರ್ತಕರು ಅಥವಾ ವ್ಯಾಪಾರಿಗಳ ನಿರ್ದಿಷ್ಟ ಅಗತ್ಯಗಳನ್ನು ಪೂರೈಸಲು ಅನುವಾಗುವಂತೆ ವಿನ್ಯಾಸಗೊಳಿಸಲಾಗಿದೆ. ವಿಶೇಷವಾಗಿ ಸೂಕ್ಷ್ಮ ಮತ್ತು ಸಣ್ಣ ವ್ಯಾಪಾರಗಳನ್ನು ನಡೆಸುತ್ತಿರುವವರಿಗೆ ಪರಿಪೂರ್ಣ ಯೋಜನೆಯಾಗಿದೆ. ಮುತ್ತೂಟ್ ಫಿನ್ಕಾರ್ಪ್ನಲ್ಲಿ ವ್ಯಾಪಾರದ ಕ್ರಿಯಾತ್ಮಕ ಸ್ವರೂಪ ಮತ್ತು ನಗದು ಹರಿವಿನ ನಿರ್ವಹಣೆಯ ನಿರ್ಣಾಯಕ ಪಾತ್ರವನ್ನು ನಾವು ಗುರುತಿಸುತ್ತೇವೆ ಎಂದರು.



# ಕಮಲಾ ಹ್ಯಾರಿಸ್ ಎದುರು ಅಧ್ಯಕ್ಷೀಯ ಚರ್ಚೆಗೆ ಡೊನಾಲ್ಡ್ ಟ್ರಂಪ್ ಒಪ್ಪಿಗೆ

**ವಾಷಿಂಗ್ಟನ್:** ಸೆಪ್ಟೆಂಬರ್ 4 ರಂದು ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರೊಂದಿಗೆ ಅಧ್ಯಕ್ಷೀಯ ಚರ್ಚೆ ನಡೆಸಲು ಫಾಕ್ಸ್ ನ್ಯೂಸ್ ನೀಡಿದ ಪ್ರಸ್ತಾಪಕ್ಕೆ ಯುಎಸ್ ಮಾಜಿ ಅಧ್ಯಕ್ಷ ಮತ್ತು ರಿಪಬ್ಲಿಕನ್ ಅಧ್ಯಕ್ಷೀಯ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಒಪ್ಪಿಕೊಂಡಿದ್ದಾರೆ. ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿ ಹ್ಯಾರಿಸ್ ಅವರು ಡೆಮಾಕ್ರಟಿಕ್ ನಾಮನಿರ್ದೇಶನವನ್ನು ಗೆಲ್ಲಲು ಅಗತ್ಯವಾದ ಪ್ರತಿನಿಧಿ ಮತಗಳನ್ನು ಪಡೆದ ನಂತರ ಇದು ಸಂಭವಿಸಿದೆ. ಜೂನ್ನಲ್ಲಿ ಟ್ರಂಪ್ ವಿರುದ್ಧ ನೀರಸ ಚರ್ಚೆಯ ಪ್ರದರ್ಶನದ ನಂತರ ಅವರ ವಯಸ್ಸು ಮತ್ತು ಮಾನಸಿಕ ತೀಕ್ಷ್ಣತೆಯ ಕಳವಳಗಳನ್ನು ವ್ಯಕ್ತಪಡಿಸಿದ ಡೆಮೋಕ್ರಾಟ್ಗಳಿಂದ ಹೆಚ್ಚುತ್ತಿರುವ ಒತ್ತಡದ ನಂತರ ಅಧ್ಯಕ್ಷ ಜೋ ಬಿಡೆನ್ ಸ್ಪರ್ಧೆಯಿಂದ ಹಿಂದೆ ಸರಿದ ನಂತರ ಟ್ರಂಪ್ ಮತ್ತು ಹ್ಯಾರಿಸ್ ಇಬ್ಬರೂ ಅಧ್ಯಕ್ಷೀಯ ಚರ್ಚೆಯ ಭಾಗವಾಗುತ್ತಿರುವುದು ಇದೇ ಮೊದಲು.ಟ್ರೂತ್ ಸೋಷಿಯಲ್ ಕುರಿತ ಪೋಸ್ಟ್ನಲ್ಲಿ, ಹ್ಯಾರಿಸ್ ವಿರುದ್ಧದ ಅಧ್ಯಕ್ಷೀಯ ಚರ್ಚೆ ಪೆನ್ಸಿಲ್ವೇನಿಯಾದಲ್ಲಿ ನಡೆಯಲಿದೆ ಎಂದು ಟ್ರಂಪ್ ಹೇಳಿದರು. ಪ್ರೇಕ್ಷಕರಿಲ್ಲದ ಸಿಎನ್ಎನ್ ಆಯೋಜಿಸಿದ್ದ ಜೂನ್ ಚರ್ಚೆಗಿಂತ ಭಿನ್ನವಾಗಿ ಚರ್ಚೆಯನ್ನು ಪೂರ್ಣ ರಂಗದ ಪ್ರೇಕ್ಷಕರ ಮುಂದೆ ನಡೆಸಬೇಕು ಎಂದು ಅವರು ಪ್ರತಿಪಾದಿಸಿದರು. ಸೆಪ್ಟೆಂಬರ್ 4 ರ ಬುಧವಾರ ಕಮಲಾ ಹ್ಯಾರಿಸ್ ಅವರೊಂದಿಗೆ ಚರ್ಚಿಸಲು ನಾನು ಫಾಕ್ಸ್ ನ್ಯೂಸ್ನೊಂದಿಗೆ ಒಪ್ಪಿದ್ದೇನೆ. ಈ ಚರ್ಚೆಯನ್ನು ಈ ಹಿಂದೆ ಎಬಿಸಿಯಲ್ಲಿ ಸ್ಲೀಪಿ ಜೋ ಬೈಡನ್ ವಿರುದ್ಧ ನಿಗದಿಪಡಿಸಲಾಗಿತ್ತು, ಆದರೆ ಬೈಡನ್ ಇನ್ನು ಮುಂದೆ ಭಾಗವಹಿಸುವುದಿಲ್ಲ ಎಂದು ಕೊನೆಗೊಳಿಸಲಾಗಿದೆ? ಫಾಕ್ಸ್ ನ್ಯೂಸ್ ಚರ್ಚೆಯು ಗ್ರೇಟ್ ಕಾಮನ್ವೆಲ್ತ್ ಆಫ್ ಪೆನ್ಸಿಲ್ವೇನಿಯಾದಲ್ಲಿ, ನಿರ್ಧರಿಸಬೇಕಾದ ಪ್ರದೇಶದ ಸ್ಥಳದಲ್ಲಿ ನಡೆಯಲಿದೆ ಎಂದು ಅವರು ಹೇಳಿದರು.

# ಕಮಲಾ ಹ್ಯಾರಿಸ್‌ಗೆ ಭರ್ಜರಿ ಬೆಂಬಲ!

ಅಮೆರಿಕ ಅಧ್ಯಕ್ಷೀಯ ಚುನಾವಣೆ ಅಖಾಡದಲ್ಲಿ ಭಾರತ ಮೂಲದ ಕಮಲಾ ಹ್ಯಾರಿಸ್ ಈ ಬಾರಿ ಹೊಸ ಇತಿಹಾಸ ಸೃಷ್ಟಿಸಲು ಸಜ್ಜಾಗಿದ್ದಾರೆ. ಕಮಲಾ ಹ್ಯಾರಿಸ್ ಜಾಗತಿಕ ಮಟ್ಟದಲ್ಲಿ ದೊಡ್ಡ ಹೆಸರು ಗಳಿಸಿರುವ ಮಹಿಳೆ ಮಾತ್ರವಲ್ಲ, ಕಳೆದ 4 ವರ್ಷಗಳಿಂದಲೂ ಅಮೆರಿಕದಲ್ಲಿ ಉಪಾಧ್ಯಕ್ಷೆಯಾಗಿ ಕಾರ್ಯ ನಿರ್ವಹಿಸಿದ್ದಾರೆ. ಇದೇ ಕಾರಣಕ್ಕೆ ಡೆಮಾಕ್ರಟಿಕ್ ಪಕ್ಷದ ಎಲ್ಲಾ ನಾಯಕರು ಒಗ್ಗೂಡಿ ಟ್ರಂಪ್ ಸೋಲಿಗೆ ರಣಕಹಳೆ ಮೊಳಗಿಸಿದ್ದಾರೆ. ಡೊನಾಲ್ಡ್ ಟ್ರಂಪ್ ಈ ಬಾರಿ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಗೆಲ್ಲಬಾರದು ಎಂಬ ಒನ್ಲೈನ್ ಅಜೆಂಡಾ ಇಟ್ಟುಕೊಂಡು, ಡೆಮಾಕ್ರಟಿಕ್ ಪಕ್ಷದ ನಾಯಕರು ಅಖಾಡ ಪ್ರವೇಶ ಮಾಡಿದ್ದಾರೆ. ಇದೇ ಕಾರಣಕ್ಕೆ ಜೋ ಬೈಡನ್ ಅವರನ್ನು ಅಮೆರಿಕ ಅಧ್ಯಕ್ಷೀಯ ಚುನಾವಣೆ ಕಣದಿಂದ ಹಿಂದೆ ಸರಿಯುವಂತೆ ಮಾಡಿದ್ದಾರೆ. ಅಲ್ಲದೆ ಡೊನಾಲ್ಡ್ ಟ್ರಂಪ್ ಎದುರು ಈಗಿನ ಪರಿಸ್ಥಿತಿಗೆ ತಕ್ಕಂತೆ ಸರಿಯಾದ ತಿರುಗೇಟು ನೀಡುವ ಅಭ್ಯರ್ಥಿಯಾಗಿ ಕಮಲ ಹ್ಯಾರಿಸ್ ಅವರನ್ನ ಡೆಮಾಕ್ರಟಿಕ್ ಅಭ್ಯರ್ಥಿಯಾಗಿ ಆಯ್ಕೆ ಮಾಡಲಾಗಿದೆ. ಕೆಲವು ದಿನಗಳ ಹಿಂದೆಯೇ ಕಮಲಾ ಅವರನ್ನು ಅಭ್ಯರ್ಥಿ ಎಂದು ಆಯ್ಕೆ ಮಾಡಿದ್ದರೂ, ಅಧಿಕೃತ ಘೋಷಣೆ ಆಗಿದೆ.



# ಬಾಲಕಿ ಮೇಲೆ ಅತ್ಯಾಚಾರ, ಗಳಗಳನೇ ಕಣ್ಣೀರಿಟ್ಟ ಸಚಿವ

**ನವದಹೆಲಿ:** ಅತ್ಯಾಚಾರಿಗೆ ಯಾವುದೇ ಜಾತಿ ಇರಲ್ಲ.. ಹೀಗಿರುವಾಗ ಅತ್ಯಾಚಾರಿಗಳು ಯಾವುದೇ ಪಕ್ಷದವರಾಗಿದ್ದರೂ ಅಂಥವರನ್ನು ಸಮರ್ಥಿಸಿಕೊಳ್ಳಬಾರದು ಎಂದು ಗಳಗಳನೇ ಕಣ್ಣೀರು ಹಾಕುತ್ತಾ ಸಚಿವ ಸಂಜಯ್ ನಿಶಾದ್ ಮನವಿ ಮಾಡಿದರು. ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ 12 ವರ್ಷದ ಬಾಲಕಿ ಮೇಲೆ ನಡೆದ ಗ್ಯಾಂಗ್ ರೇಪ್ ಪ್ರಕಣಕ್ಕೆ ಸಂಬಂಧಿಸಿ ಬಾಲಕಿಯ ಕುಟುಂಬದ ನಿವಾಸಕ್ಕೆ ಭೇಟಿ ನೀಡಿದ ಬಳಿಕ ಮಾತನಾಡಿ, ಸಮಾಜವಾದಿ ಪಕ್ಷದ ನಾಯಕ ಹಾಗೂ ಆರೋಪಿಯೂ ಆಗಿರುವ ಮೊಯೀದ್ ಖಾನ್ ಬಗ್ಗೆ ಪಕ್ಷ ಯಾಕೆ ಇನ್ನು ತುಟಿ ಬಿಚ್ಚುತ್ತಿಲ್ಲ. ಅವನನ್ನು ಪಕ್ಷದಿಂದ ಯಾಕೆ ಇನ್ನೂ ಉಚ್ಚಾಟನೆ ಮಾಡಿಲ್ಲ? ಅವನ್ನು ಪಕ್ಷ ರಕ್ಷಣೆ ಮಾಡುತ್ತಿದೆ ಎಂದು ಆಕ್ರೋಶ ಹೊರಹಾಕಿದರು. ಅಲ್ಲದೇ ಎಸ್ಪಿ ಮಿತ್ರ ಪಕ್ಷವಾದ ಕಾಂಗ್ರೆಸ್ ಕೂಡ ಈ ಬಗ್ಗೆ ದನಿ ಎತ್ತಬೇಕು ಎಂದು ಆಗ್ರಹಿಸಿದರು. ಈಗಾಗಲೇ ಪ್ರಕರಣದ ಕ್ರಿಮಿನಲ್ಗಳ ಮನೆಗಳನ್ನು ಧ್ವಂಸಗೊಳಿಸುವ ಮೂಲಕ ಸಿಎಂ ಯೋಗಿ ಆದಿತ್ಯನಾಥ್ ನ್ಯಾಯ ಒದಗಿಸುವ ಕೆಲಸ ಮಾಡುತ್ತಿದ್ದಾರೆ ಎಂದರು.





# ಹಿಂದೂ ಸಂಪ್ರದಾಯದಂತೆ ಮತ್ತೊಮ್ಮೆ ಮಲ್ಯ ಪುತ್ರನ ವಿವಾಹ!

**ಲಂಡನ್:** ಭಾರತದಿಂದ ವಿದೇಶಕ್ಕೆ ಪರಾರಿಯಾಗಿರುವ ಉದ್ಯಮಿ ವಿಜಯ್ ಮಲ್ಯ ಪುತ್ರ ಸಿದ್ಧಾರ್ಥ್ ಮಲ್ಯ ತಮ್ಮ ಬಹುಕಾಲದ ಗೆಳತಿ ಜಾಸ್ಮಿನ್ ಸ್ಯಾಂಟಿಯಾಗೋ ಜೊತೆ ಜೂನ್ ನಲ್ಲಿ ದಾಂಪತ್ಯ ಜೀವನಕ್ಕೆ ಕಾಲಿರಿಸಿದ್ದರು. ಕ್ರಿಶ್ಚಿಯನ್ ಸಂಪ್ರದಾಯದ ಪ್ರಕಾರ ಲಂಡನ್ ಸಮೀಪದ ಐಷಾರಾಮಿ ಮ್ಯಾನ್ಷನ್ನಲ್ಲಿ ನಡೆದ ವಿಜಯ್ ಮಲ್ಯ ಮಗನ ಮದುವೆ ಅದ್ದೂರಿಯಾಗಿ ನಡೆದಿತ್ತು.

ಇದೀಗ ಮತ್ತೊಮ್ಮೆ ಇವರಿಬ್ಬರು ಹಿಂದೂ ಸಂಪ್ರದಾಯದಂತೆ ವಿವಾಹವಾಗಿರುವ ಪೋಟೋ ಹೊರಬಿದ್ದಿದ್ದು, ವಿಜಯ್ ಮಲ್ಯ ಅವರ ಲೇಡಿವಾಕ್ ಎಸ್ಟೇಟ್ ನಲ್ಲಿರುವ 14 ಮಿಲಿಯನ್ ಡಾಲರ್ ಮೌಲ್ಯದ ಬಂಗಲೆಯಲ್ಲಿ ಇವರಿಬ್ಬರ ಅದ್ದೂರಿ ವಿವಾಹ ಸಮಾರಂಭ ನಡೆದಿದೆ.

ಈ ಕಾರ್ಯಕ್ರಮದಲ್ಲಿ ವಿಜಯ್ ಮಲ್ಯ, ಅವರ ಮೊದಲ ಪತ್ನಿ ಸಮೀರಾ ತ್ಯಾಬ್ಜಿ ಕಾಣಿಸಿಕೊಂಡಿದ್ದಾರೆ. ಸಿದ್ಧಾರ್ಥ್ ಅವರು ವಿಜಯ್ ಮಲ್ಯ ಅವರ ಮೊದಲ ಪತ್ನಿ ಸಮೀರಾ ತ್ಯಾಬ್ಜಿ ಅವರ ಪುತ್ರರಾಗಿದ್ದಾರೆ.

ವಧು ಜಾಸ್ಮಿನ್ ಮರೂನ್ ಬಣ್ಣದ ಲೆಹೆಂಗಾ ಧರಿಸಿದ್ದರೆ, ತ್ಯಾಬ್ಜಿ ರೇಷ್ಮೆ ಸೀರೆ ಧರಿಸಿದ್ದರು. ವಿಜಯ್ ಮಲ್ಯ ಚಿನ್ನದ ಕಸೂತಿಯೊಂದಿಗೆ ಮರೂನ್ ಬಣ್ಣದ ಉಡುಪು, ಕನ್ನಡಕ, ಸಾಲಿಟೇರ್ ಕಿವಿಯೋಲೆ ಮತ್ತು ಕೈ ಗಡಿಯಾರ ಧರಿಸಿದ್ದರು

ವಿಜಯ್ ಮಲ್ಯ ಮೂರು ಮದುವೆಯಾಗಿದ್ದು, ಮೂವರು ಮಕ್ಕಳಿದ್ದು, ಈ ಪೈಕಿ ಸಿದ್ಧಾರ್ಥ್ ಹಿರಿಯ ಪುತ್ರನಾಗಿದ್ದಾರೆ.

# ಮತ್ತೊಮ್ಮೆ ಜಗತ್ತಿನ ಅತ್ಯಂತ ಜನಪ್ರಿಯ ನಾಯಕರಾದ ಪ್ರಧಾನಿ ನರೇಂದ್ರ ಮೋದಿ

**ದೆಹಲಿ:** ಪ್ರಧಾನಿ ನರೇಂದ್ರ ಮೋದಿ ಮತ್ತೊಮ್ಮೆ ವಿಶ್ವದ ಅತ್ಯಂತ ಜನಪ್ರಿಯ ನಾಯಕರಾಗಿ ಹೊರಹೊಮ್ಮಿದ್ದಾರೆ. ಅಮೆರಿಕ ಅಧ್ಯಕ್ಷ ಜೋ ಬೈಡೆನ್ ಮತ್ತು ಹೊಸದಾಗಿ ನೇಮಕಗೊಂಡ ಇಂಗ್ಲೆಂಡ್ ಪ್ರಧಾನಿ ಕೀರ್ ಸ್ಟಾರ್ಮರ್ ಅವರನ್ನೂ ಹಿಂದಿಕ್ಕಿ ಪ್ರಥಮ ಸ್ಥಾನದಲ್ಲಿದ್ದಾರೆ.

ಜಾಗತಿಕ ನಾಯಕರ ಪ್ರಮುಖ ನಿರ್ಧಾರಗಳನ್ನು ಟ್ರ್ಯಾಕ್ ಮಾಡುವ ಜಾಗತಿಕ ಗುಪ್ತಚರ ಸಂಸ್ಥೆಯಾದ ಮಾರ್ನಿಂಗ್ ಕನ್ಸಲ್ಟ್ ಇತ್ತೀಚಿನ ಶ್ರೇಯಾಂಕಗಳನ್ನು ಬಿಡುಗಡೆ ಮಾಡಿದೆ.

ಸಮೀಕ್ಷೆಯು ಜುಲೈ 8-14 ರವರೆಗೆ ಸಂಗ್ರಹಿಸಿದ ಡೇಟಾವನ್ನು ಆಧರಿಸಿದೆ. ಸಂಸ್ಥೆಯ ಪ್ರಕಾರ ಪ್ರಧಾನಿ ನರೇಂದ್ರ ಮೋದಿ ಅವರು ಶೇಕಡಾ 69 ರ ಅನುಮೋದನೆ ರೇಟಿಂಗ್ನೊಂದಿಗೆ ಮೊದಲ ಸ್ಥಾನದಲ್ಲಿದ್ದರೆ, ಮೆಕ್ಸಿಕನ್ ಅಧ್ಯಕ್ಷ ಆಂಡ್ರೆಸ್ ಮ್ಯಾನುಯೆಲ್ ಲೋಪೆಜ್ ಒಬ್ರಡಾರ್ ಅವರು ಶೇಕಡಾ 63 ರ ಅನುಮೋದನೆಯೊಂದಿಗೆ ಎರಡನೇ ಸ್ಥಾನವನ್ನು ಪಡೆದಿದ್ದಾರೆ. 25 ನಾಯಕರ ಪಟ್ಟಿಯಲ್ಲಿ ಜಪಾನ್ನ ಪ್ರಧಾನಿ ಫ್ಯೂಮಿಯೊ ಕಿಶಿಡಾ ಅವರು ಕೊನೆಯ ಸ್ಥಾನದಲ್ಲಿದ್ದಾರೆ.

ಇತರ ದೊಡ್ಡ ಜಾಗತಿಕ ನಾಯಕರ ಅನುಮೋದನೆ ರೇಟಿಂಗ್ಗಳು ಸಾಧಾರಣ ಮಟ್ಟದಲ್ಲಿವೆ. ಅಮೆರಿಕ ಅಧ್ಯಕ್ಷ ಜೋ ಬಿಡೆನ್ ಶೇಕಡಾ 39 ರ ಅನುಮೋದನೆಯನ್ನು ಹೊಂದಿದ್ದಾರೆ, ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ಶೇಕಡಾ 29, ಇಂಗ್ಲೆಂಡ್ ಪ್ರಧಾನಿ ಕೀರ್ ಸ್ಟಾರ್ಮರ್ ಅವರ ರೇಟಿಂಗ್ ಶೇಕಡಾ 45 ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಕೇವಲ ಶೇಕಡಾ 20 ರಷ್ಟಿದ್ದಾರೆ. ಗಮನಾರ್ಹವೆಂದರೆ ಹಿಂದಿನ ಸಮೀಕ್ಷೆಗಳಲ್ಲೂ ಪ್ರಧಾನಿ ಮೋದಿ ಜಾಗತಿಕ ರೇಟಿಂಗ್ಗಳಲ್ಲಿ ಅಗ್ರಸ್ಥಾನದಲ್ಲಿದ್ದರು.



## ಜುಲೈ 2024 ರ ಹೊತ್ತಿಗೆ ಟಾಪ್ ಹತ್ತು ಜನಪ್ರಿಯ ಜಾಗತಿಕ ನಾಯಕರು ಇಲ್ಲಿವೆ

**1. ಭಾರತದ ಪ್ರಧಾನಿ ನರೇಂದ್ರ ಮೋದಿ (ಶೇ 69) 2. ಮೆಕ್ಸಿಕೋ ಅಧ್ಯಕ್ಷ ಆಂಡ್ರೆಸ್ ಮ್ಯಾನುಯೆಲ್ ಲೋಪೆಜ್ ಒಬ್ರಡಾರ್ (63 ಪ್ರತಿಶತ) 3. ಅರ್ಜೆಂಟೀನಾ ಅಧ್ಯಕ್ಷ ಜೇವಿಯರ್ ಮಿಲೀ (60 ಪ್ರತಿಶತ) 4. ಸ್ವಿಟ್ಜರ್ಲೆಂಡ್ ಫೆಡರಲ್ ಕೌನ್ಸಿಲರ್ ವಿಯೋಲಾ ಅಮ್ಹೆರ್ಡ್ (52 ಶೇಕಡಾ) 5. ಐರ್ಲೆಂಡ್ನ ಸೈಮನ್ ಹ್ಯಾರಿಸ್ (ಶೇ. 47)**

# ಸೊಮಾಲಿಯಾ ಬೀಚ್ ರೆಸ್ಟೋರೆಂಟ್‌ನಲ್ಲಿ ಬಾಂಬ್ ದಾಳಿ: 37 ಮಂದಿ ಬಲಿ

**ಮೊಗದಿಶು:** ಸೊಮಾಲಿಯದ ರಾಜಧಾನಿಯ ಬೀಚ್ ರೆಸ್ಟೋರೆಂಟ್ವೊಂದರ ಮೇಲೆ ನಡೆದ ಬಾಂಬ್ ಸ್ಫೋಟದಲ್ಲಿ ಕನಿಷ್ಠ 37 ನಾಗರಿಕರು ಪ್ರಾಣ ಕಳೆದುಕೊಂಡಿದ್ದು, 212 ಜನರು ಗಾಯಗೊಂಡಿದ್ದಾರೆ.ಗಾಯಗೊಂಡವರಲ್ಲಿ 11 ಮಂದಿಯ ಸ್ಥಿತಿ ಚಿಂತಾಜನಕವಾಗಿದೆ ಎಂದು ಅಲ್ಲಿನ ಆರೋಗ್ಯ ಸಚಿವರು ಹೇಳಿದ್ದಾರೆ. ಇದು ಉಗ್ರಗಾಮಿ ಇಸ್ಲಾಮಿಸ್ಟ್ ಗುಂಪು ಅಲ್ ಶಬಾಬ್ ಕೃತ್ಯವೆಂದು ಸರ್ಕಾರ ಆರೋಪಿಸಿದೆ. ಈ ದಾಳಿಯಲ್ಲಿ ನಾಗರಿಕರ ಜೊತೆಗೆ ಒಬ್ಬ ಯೋಧ ಮೃತಪಟ್ಟಿದ್ದಾರೆ. ದಾಳಿಕೋರರಲ್ಲಿ ಒಬ್ಬ ತನ್ನನ್ನು ತಾನು ಸ್ಫೋಟಿಸಿಕೊಂಡ, ಮೂವರು ಭದ್ರತಾ ಪಡೆಗಳಿಂದ ಹತರಾಗಿದ್ದರೆ, ಒಬ್ಬ ದಾಳಿಕೋರನನ್ನು ಜೀವಂತವಾಗಿ ಸೆರೆಹಿಡಿಯಲಾಗಿದೆ ಎಂದು ಅಲ್ಲಿನ ಪೊಲೀಸ್ ಅಧಿಕಾರಿ ಮಾಹಿತಿ ನೀಡಿದ್ದಾರೆ. ಯಾವುದೇ ಉಗ್ರ ಸಂಘಟನೆಗಳು ಬಾಂಬ್ ದಾಳಿಯ ಹೊಣೆಗಾರಿಕೆಯನ್ನು ಪ್ರಕಟಿಸಿಲ್ಲ. ನಾನು ರೆಸ್ಟೋರೆಂಟ್ ಕಾಫಿ ಹೀರುತ್ತಾ ಸ್ನೇಹಿತರೊಂದಿಗೆ ಚಾಟ್ ಮಾಡುತ್ತಿದ್ದೆ, ಒಬ್ಬ ವ್ಯಕ್ತಿ ಓಡುತ್ತಿರುವುದನ್ನು ನೋಡಿದೆ, ಒಂದು ಸೆಕೆಂಡ್ನಲ್ಲಿ ಮಿಂಚು ಕಾಣಿಸಿಕೊಂಡು ದೊಡ್ಡ ಸ್ಫೋಟ ನಡೆದೇ ಹೋಯ್ತು. ನಾವು ಹೊಗೆಯಲ್ಲಿ ಸಿಲುಕಿದ್ದೆವು. ರೆಸ್ಟೋರೆಂಟ್ ಒಳಗೆ ಮತ್ತು ಹೊರಗೆ ಅನೇಕ ಜನರು ನೆಲಕ್ಕೊರಗಿದ್ದರು. ಗಾಯಾಳುಗಳು ರಕ್ತಸ್ರಾವದೊಂದಿಗೆ ಅಳುತ್ತಿದ್ದರು. ಬೀಚ್ನಲ್ಲಿ ಚಪ್ಪಲಿ, ಶೂಗಳು ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದು, ಜನರು ಸ್ಥಳದಿಂದ ಪರಾರಿಯಾಗಿದ್ದಾರೆ ಎಂದು ಘಟನೆಯಲ್ಲಿ ಬದುಕುಳಿದ ಹಸನ್ ಫರಾಹ್ ಎಂಬುವರು ವಿವರಿಸಿದ್ದಾರೆ.



# ಮಹಾರಾಷ್ಟ್ರದಲ್ಲಿ ಭಾರಿ ವರ್ಷಧಾರೆ, ರೆಡ್ ಅಲರ್ಟ್

**ಮುಂಬೈ:** ಪುಣೆ, ಪಾಲ್ಘಢ ಸೇರಿದಂತೆ ಮಹಾರಾಷ್ಟ್ರದ ಹಲವು ಜಿಲ್ಲೆಗಳಲ್ಲಿ ಇಂದು ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ. ಮಹಾರಾಷ್ಟ್ರದ ಮುಂಬೈ, ಪಾಲ್ಘರ್, ಪುಣೆ ಮತ್ತು ಸತಾರಾ ಜಿಲ್ಲೆಗಳಲ್ಲಿ ಭಾನುವಾರ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಭಾರತೀಯ ಹವಾಮಾನ ಇಲಾಖೆಯು ಆಗಸ್ಟ್ 4 ರಂದು ಪಾಲ್ಘಢ, ಪುಣೆ ಮತ್ತು ಸತಾರಾಕ್ಕೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಥಾಣೆ, ಮುಂಬೈ, ರಾಯಗಢ, ಸಿಂಧುದುರ್ಗ ಮತ್ತು ನಾಸಿಕ್‌ಗೆ ಆರೆಂಜ್ ಅಲರ್ಟ್ ಘೋಷಿಸಿದೆ. ಶನಿವಾರದಂದು ದೇಶದ ಹೆಚ್ಚಿನ ಭಾಗಗಳಲ್ಲಿ ಭಾರೀ ಮಳೆ ಸುರಿದಿದೆ, ಪಶ್ಚಿಮ ಬಂಗಾಳ ಮತ್ತು ಜಾರ್ಖಂಡ್ ನಲ್ಲಿ ಜನಜೀವನ ಅಸ್ತವ್ಯಸ್ಥವಾಗಿದೆ. ಮಧ್ಯಪ್ರದೇಶದಲ್ಲಿ ನಿರಂತರ ಮಳೆಯ ನಂತರ ಮನೆ ಕುಸಿದು ಇಬ್ಬರು ಮಕ್ಕಳು ಸಾವನ್ನಪ್ಪಿದ್ದಾರೆ. ಹಿಮಾಚಲ ಪ್ರದೇಶದಲ್ಲಿ ಮೇಘಸ್ಫೋಟ ಮತ್ತು ಭಾರೀ ಮಳೆಯಿಂದಾಗಿ ಹಠಾತ್ ಪ್ರವಾಹ ಮತ್ತು ಭೂಕುಸಿತದಿಂದಾಗಿ 114 ರಸ್ತೆಗಳನ್ನು ಮುಚ್ಚಲಾಗಿದೆ, ಆದರೆ ಆಗಸ್ಟ್ 7 ರವರೆಗೆ ಭಾರೀ ಮಳೆ ಮುಂದುವರಿಯುತ್ತದೆ ಎಂದು ಹವಾಮಾನ ಇಲಾಖೆ ಎಚ್ಚರಿಸಿದೆ. ರಾಜ್ಯದ ರಸ್ತೆ ಸಾರಿಗೆ ನಿಗಮವು 82 ಮಾರ್ಗಗಳಲ್ಲಿ ತನ್ನ ಬಸ್ ಸೇವೆಗಳನ್ನು ಸ್ಥಗಿತಗೊಳಿಸಿದೆ. ಶುಕ್ರವಾರ ಸಂಜೆಯಿಂದ ಜೋಗಿಂದರ್‌ನಗರದಲ್ಲಿ ಅತಿ ಹೆಚ್ಚು 85 ಮಿಮೀ, ಗೋಹರ್ 80 ಮಿಮೀ, ಶಿಲಾರು 76.4 ಮಿಮೀ, ಪೌಂಟಾ ಸಾಹಿಬ್ 67.2 ಮಿಮೀ, ಪಾಲಂಪುರ 57.2 ಮಿಮೀ, ಧರ್ಮಶಾಲಾ 56.2 ಮಿಮೀ ಮತ್ತು ಚೌಪಾಲ್ 52 ಮಿಮೀ ಮಳೆಯಾಗಿದೆ. ಸ್ಥಳೀಯ ಹವಾಮಾನ ಕಚೇರಿಯು ಹಿಮಾಚಲದಲ್ಲಿ ಆಗಸ್ಟ್ 7 ರವರೆಗೆ ಭಾರೀ ಮಳೆಯ ಹಳದಿ ಎಚ್ಚರಿಕೆಯನ್ನು ನೀಡಿದೆ. ವಯನಾಡಿನಲ್ಲಿ ಸಂಭವಿಸಿದ ಭೂ ಕುಸಿತದಲ್ಲಿ 200ಕ್ಕೂ ಹೆಚ್ಚು ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ರಕ್ಷಣಾ ಕಾರ್ಯಾಚರಣೆ ಮುಂದುವರೆದಿದೆ.

# ಮಧ್ಯ ಪ್ರಾಚ್ಯದಲ್ಲಿ ಮತ್ತೊಂದು ಯುದ್ಧದ ಕಾರ್ಮೋಡ

**ಟೆಹ್ರಾನ್:** ಇಸ್ರೇಲ್ –ಹಮಾಸ್ ನಡುವೆ ಕಳೆದ 9 ತಿಂಗಳಿಂದ ನಡೆಯುತ್ತಿರುವ ಯುದ್ಧ ಪೂರ್ಣಗೊಳ್ಳುವ ಮೊದಲೇ ಮಧ್ಯ ಪ್ರಾಚ್ಯದಲ್ಲಿ ಮತ್ತೊಂದು ಯುದ್ಧದ ಕಾರ್ಮೋಡ ಕವಿದಿದೆ. ಇರಾನ್ ಬೆಂಬಲಿತ ಸೇನಾಪಡೆ ಹೆಜ್ಬೊಲ್ಲಾದ ಕಮಾಂಡರ್ ಫೌದ್ ಶುಕ್ರ್ ನನ್ನು ಇಸ್ರೇಲ್ ರಕ್ಷಣಾ ಪಡೆ ನಡೆಸಿದ ವಾಯು ದಾಳಿಯಲ್ಲಿ ಮೃತಪಟ್ಟ ಬೆನ್ನಲ್ಲೇ ಇಸ್ರೇಲ್ ವಿರುದ್ಧ ಪ್ರತಿಕಾರಕ್ಕೆ ಇರಾನ್ ಹವಣಿಸುತ್ತಿದೆ.ಯಾವುದೇ ಸಂದರ್ಭದಲ್ಲಿ ಯುದ್ಧ ಘೋಷಣೆ ಮಾಡುವ ಸಂಭವ ಇದೆ. ಲೆಬನಾನ್ ರಾಜಧಾನಿ ಬೈರುತ್ ಪ್ರದೇಶದ ಮೇಲೆ ಇಸ್ರೇಲ್ ನಡೆಸಿದ ವಾಯು ದಾಳಿ ಮಧ್ಯ ಪ್ರಾಚ್ಯ ಬಿಕ್ಕಟ್ಟನ್ನು ಮತ್ತಷ್ಟು ಜಟಿಲಗೊಳಿಸಿದೆ. ತನ್ನ ಭೂಪ್ರದೇಶದ ಒಳಗೆ ಹೆಜ್ಬೊಲ್ಲಾ ಕಮಾಂಡರ್ ಫೌದ್ ಶುಕ್ರ್ ನನ್ನು ಹತ್ಯೆ ಮಾಡಿರುವುದು ಇರಾನ್ ಸರ್ಕಾರವನ್ನು ಕೆರಳಿಸಿದ್ದು, ಸೇಡು ತೀರಿಸಿಕೊಳ್ಳಲು ಮುಂದಾಗಿರುವ ಹೆಜ್ಬೊಲ್ಲಾ ಪಡೆಯ ಬೆಂಬಲದೊಂದಿಗೆ ಇಸ್ರೇಲ್ ಮೇಲೆ ದಾಳಿಗೆ ಸಿದ್ಧತೆ ಮಾಡಿಕೊಂಡಿದೆ. ಈ ಬೆಳವಣಿಗೆಯಿಂದಾಗಿ ಜಾಗತಿಕ ಆರ್ಥಿಕತೆಯಲ್ಲಿ ಏರುಪೇರಾಗುವ ಸಂಭವವಿದೆ.



# ಬಂಗಾಳಕ್ಕೆ ಪ್ರವಾಹ ಭೀತಿ, ಕೋಲ್ಕತ್ತಾ ವಿಮಾನ ನಿಲ್ದಾಣ ಸಂಪೂರ್ಣ ಜಲಾವೃತ

**ಕೋಲ್ಕತ್ತಾ:** ಮಳೆಯ ಅವಾಂತರ ಕೇವಲ ಕರ್ನಾಟಕದಲ್ಲಿ ಮಾತ್ರವಲ್ಲ ವಿವಿಧ ರಾಜ್ಯಗಳಲ್ಲೂ ಮುಂದುವರಿದಿದೆ. ಕೋಲ್ಕತ್ತಾದಲ್ಲಿ ಭಾರೀ ಮಳೆಗೆ ನೇತಾಜಿ ಸುಭಾಸ್ ಚಂದ್ರ ಬೋಸ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸಂಪೂರ್ಣ ಜಲಾವೃತಗೊಂಡಿದೆ.

ಪಶ್ಚಿಮ ಬಂಗಾಳದ ರಾಜಧಾನಿ ಹಾಗೂ ಸುತ್ತಮುತ್ತ ಪ್ರದೇಶಗಳಲ್ಲಿ ಹೆಚ್ಚಿನ ಮಳೆಯಾಗಿದ್ದರಿಂದ ವಿಮಾನ ನಿಲ್ದಾಣದಲ್ಲೂ ನೀರು ತುಂಬಿಕೊಂಡಿದೆ. ವಿಮಾನ ನಿಲ್ದಾಣದ ರನ್‌ವೇ ಹಾಗೂ ಟ್ಯಾಕ್ಸಿವೇಗಳಲ್ಲಿ ಮೊಣಕಾಲುದ್ದ ನೀರು ತುಂಬಿಕೊಂಡಿರುವ ವೀಡಿಯೋ ಜಾಲತಾಣದಲ್ಲಿ ಹರಿದಾಡುತ್ತಿವೆ. ಅಲ್ಲದೇ ಹೌರಾ, ಸಾಲ್ಟ್ ಲೇಕ್ ಮತ್ತು ಬ್ಯಾರಕ್‌ಪುರ ಸೇರಿದಂತೆ ಕೋಲ್ಕತ್ತಾ ಮತ್ತು ಅದರ ನೆರೆಯ ಪ್ರದೇಶಗಳು ನಿರಂತರ ಮಳೆಯಿಂದ ಮುಳುಗಿ ಹೋಗಿದೆ.

ಹವಾಮಾನ ಇಲಾಖೆ ಪ್ರಕಾರ, ಬಂಗಾಳದಲ್ಲಿ ಪ್ರವಾಹ ಉಂಟಾಗುವ ಸಾಧ್ಯತೆಯಿದೆ. ಹೌರಾ, ಪಶ್ಚಿಮ ಬರ್ಧಮಾನ್, ಬಿರ್ಭೂಮ್, ಪುರ್ಬಾ ಬರ್ಧಮಾನ್, ಹೂಗ್ಲಿ, ನಾಡಿಯಾ ಮತ್ತು ಉತ್ತರ ಮತ್ತು ದಕ್ಷಿಣ 24 ಪರಗಣಗಳು ಸೇರಿದಂತೆ ದಕ್ಷಿಣ ಜಿಲ್ಲೆಗಳಲ್ಲಿ ತುಂತುರು ಮಳೆಯಾಗಲಿದೆ. ಮಾನ್ಸೂನ್ ಕಾರಣದಿಂದ ಕೆಲವೆಡೆ ಮಳೆಯ ಆರ್ಭಟ ಇನ್ನೂ ಹೆಚ್ಚಾಗಲಿದೆ. ಈ ಪರಿಸ್ಥಿತಿ ಉತ್ತರ ಪ್ರದೇಶ, ಬಿಹಾರಕ್ಕೂ ತಲುಪಲಿದೆ ಎಂದು ಇಲಾಖೆ ಮಾಹಿತಿ ನೀಡಿದೆ.



ಇನ್ನೂ ಕೋಲ್ಕತ್ತಾದ ಹಲವು ಭಾಗಗಳಲ್ಲಿ ಅಪಾಯದ ಮಟ್ಟ ಮೀರಿ ನೀರು ಹರಿಯುತ್ತಿದೆ. ಹಾಗಾಗಿ ಸದ್ಯಕ್ಕೆ ಪರಿಸ್ಥಿತಿ ಹತೋಟಿಗೆ ತರುವುದು ಕಷ್ಟ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಳೆದ ಶುಕ್ರವಾರದಿಂದ ಈವರೆಗೆ ಪುರುಲಿಯಾ, ಮುರ್ಷಿದಾಬಾದ್, ಮಾಲ್ಡಾ, ಕೂಚ್‌ಬೆಹಾರ್, ಜಲ್ಪೈಗುರಿ, ಡಾರ್ಜಿಲಿಂಗ್ ಮತ್ತು ಕಾಲಿಂಪಾಂಗ್ ಪ್ರದೇಶಗಳಲ್ಲಿ 11 ಸೆಂ.ಮೀ. ನಷ್ಟು ಮಳೆಯಾಗಿದ್ದು, ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿರುವುದಾಗಿ ಕೋಲ್ಕತ್ತಾ ಸರ್ಕಾರ ತಿಳಿಸಿದೆ.

# ಕೋರ್ಟ್ ಸಹವಾಸವೇ ಸಾಕು ಎನ್ನುವಷ್ಟು ಜನಸಾಮಾನ್ಯರು ರೋಸಿಹೋಗಿದ್ದಾರೆ - ಸಿಜೆಐ

**ನವದೆಹಲಿ:** ಕೋರ್ಟ್ ಸಹವಾಸವೇ ಸಾಕು ಎನ್ನುವಷ್ಟು ಜನಸಾಮಾನ್ಯರು ರೋಸಿಹೋಗಿದ್ದು, ಜನರೇ ಇತ್ಯರ್ಥ ಮಾಡಿಕೊಳ್ಳುತ್ತಿದ್ದಾರೆ ಎಂದು ಮುಖ್ಯ ನ್ಯಾ. ಡಿ.ವೈ. ಚಂದ್ರಚೂಡ್ ಬೇಸರ ವ್ಯಕ್ತಪಡಿಸಿದ್ದಾರೆ.

ಕ್ರಿಮಿನಲ್ ಪ್ರಕರಣಗಳನ್ನು ಅನುಮಾನದ ದೃಷ್ಟಿಕೋನದಲ್ಲಿ ನೋಡುವ ಮೂಲಕ ಕೆಳ ನ್ಯಾಯಾಲಯದ ಜಡ್ಜ್‌ಗಳು ಆರೋಪಿಗಳಿಗೆ ಜಾಮೀನು ನೀಡಲು ಹಿಂಜರಿಯುತ್ತಿದ್ದಾರೆ ಎಂದು ಅವರು ವಿಶೇಷ ಲೋಕ ಅದಾಲತ್ನ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಹೇಳಿದರು.

ಕೆಳ ನ್ಯಾಯಾಲಯದಲ್ಲೇ ಜಾಮೀನು ಪಡೆಯಬೇಕಿದ್ದ ಜನರು ಜಾಮೀನಿಗಾಗಿ ಹೈಕೋರ್ಟ್ ಮೆಟ್ಟಿಲೇರುತ್ತಿದ್ದಾರೆ. ಹೈಕೋರ್ಟ್‌ನಲ್ಲಿ ಜಾಮೀನು ಪಡೆಯಬೇಕಿದ್ದವರು ಸುಪ್ರೀಂ ಕೋರ್ಟ್ ಹೋಗುತ್ತಾರೆ. ಪರಿಣಾಮ ನ್ಯಾಯದಾನ ವಿಳಂಬಗೊಂಡು, ಸಂಕೀರ್ಣ ಸಮಸ್ಯೆಗಳಿಗೆ ದಾರಿ ಮಾಡಿಕೊಟ್ಟಿದೆ ಎಂದು ಹೇಳಿದರು.



ಕೋರ್ಟ್ ವ್ಯವಸ್ಥೆಯಲ್ಲಿನ ವಿಳಂಬದ ಬಗ್ಗೆ ಜನರಲ್ಲಿರುವ ಅಸಮಾಧಾನವನ್ನು ದೂರ ಮಾಡುವ ಸಲುವಾಗಿಯೇ ಪರ್ಯಾಯ ವ್ಯವಸ್ಥೆಯಾಗಿ ಲೋಕ ಅದಾಲತ್ ಗಳನ್ನು ಮುಂಚೂಣಿಗೆ ತರಲಾಗುತ್ತಿದ್ದ ರಾಜ್ಯ ನಿರ್ವಹಣೆ ವ್ಯವಸ್ಥೆಯಲ್ಲಿ ಲೋಕ ಅದಾಲತ್ ಗಳ ಪಾತ್ರ ದೊಡ್ಡದಿದೆ.

ಕೋರ್ಟ್ ಸಹವಾಸವೇ ಸಾಕು ಎನ್ನುವಷ್ಟು ಜನಸಾಮಾನ್ಯರು ರೋಸಿಹೋಗಿರುವ ಬಗ್ಗೆ ನ್ಯಾಯಮೂರ್ತಿಗಳಿಗೆ ಕಳಕಳ ಇದೆ. ನ್ಯಾಯಾಂಗವು ಕೇವಲ ನ್ಯಾಯಮೂರ್ತಿಗಳಿಂದ ಮಾತ್ರವೇ ನಿಯಂತ್ರಿಸುವ ವ್ಯವಸ್ಥೆ ಅಲ್ಲ. ವಕೀಲರ ಪಾತ್ರ ಕೂಡ ಪ್ರಮುಖವಾಗಿದೆ. ಅದನ್ನು ಲೋಕ ಅದಾಲತ್ ಎತ್ತಿ ತೋರಿಸಿದೆ. ದಿಲ್ಲಿಯಲ್ಲಿ ಸುಪ್ರೀಂ ಕೋರ್ಟ್ ಇದ್ದರೂ ಕೂಡ ಅದು ಸುಪ್ರೀಂ ಕೋರ್ಟ್ ಆಫ್ ಇಂಡಿಯಾ' ಎನ್ನುವುದು ಲೋಕ ಅದಾಲತ್ ನಲ್ಲಿ ಕಂಡಿತು ಎಂದು ಅವರು ತಿಳಿಸಿದ್ದಾರೆ.

# ಅಕ್ರಮ ಮಾರ್ಗದ ಮೂಲಕ ಭಾರತ ಪ್ರವೇಶಿಸಿದ ಬಾಂಗ್ಲಾ ಪ್ರಜೆ

**ಬಾಂಗ್ಲಾದೇಶ:** ಬಾಂಗ್ಲಾದೇಶದ ಓರ್ವ ಯೂಟ್ಯೂಬರ್ ಬಾಂಗ್ಲಾದೇಶದವರು ಅಕ್ರಮವಾಗಿ ಭಾರತಕ್ಕೆ ಪ್ರವೇಶಿಸುವ ಮಾರ್ಗವನ್ನು ತೋರಿಸುವ ವೀಡಿಯೊ ವೈರಲ್ ಆದ ನಂತರ, ಬಾಂಗ್ಲಾದೇಶದ ಮತ್ತೋರ್ವ ಯೂಟ್ಯೂಬರ್ ಸಾಮಾಜಿಕ ಮಾಧ್ಯಮದಲ್ಲಿ ಇದೇ ರೀತಿಯ ವಿಡಿಯೋ ಹಾಕಿ ಗಮನ ಸೆಳೆದಿದ್ದಾರೆ. ಅಕ್ರಮ ವಲಸಿಗರು ಬಾಂಗ್ಲಾದೇಶದಿಂದ ಮೇಘಾಲಯದ ಮೂಲಕ ಭಾರತವನ್ನು ಹೇಗೆ ಪ್ರವೇಶಿಸುತ್ತಾರೆ ಎಂಬುದನ್ನು ವಿಡಿಯೋದಲ್ಲಿ ತೋರಿಸಿದ್ದಾರೆ.

3-4 ವರ್ಷದ ಹಿಂದಿನದ್ದು ಎಂದು ಹೇಳಲಾದ ವೀಡಿಯೊವನ್ನು ಈಗ ಯೂಟ್ಯೂಬ್ ಚಾನೆಲ್ನಿಂದ ತೆಗೆದುಹಾಕಲಾಗಿದ್ದರೂ, ಇದನ್ನು ಎಕ್ಸ್ ಖಾತೆಗಳಲ್ಲಿ ವ್ಯಾಪಕವಾಗಿ ಹಂಚಿಕೊಳ್ಳಲಾಗುತ್ತಿದೆ. ಈ ವೀಡಿಯೊದಲ್ಲಿ ಅವರು ಭಾರತಕ್ಕೆ ತೆರಳುವ ಮಾರ್ಗವನ್ನು ತೋರಿಸುವುದಲ್ಲದೆ, ಬಾಂಗ್ಲಾದೇಶದಿಂದ ಮೊದಲು ಸುರಂಗದ ಮೂಲಕ ಮೇಘಾಲಯವನ್ನು ಪ್ರವೇಶಿಸುವ ಬಗ್ಗೆ ವಿವರಿಸಿದ್ದು ಅಲ್ಲಿ ಸ್ಥಳೀಯರೊಂದಿಗೆ ಮಾತನಾಡಿದ್ದಾರೆ. ಇಲ್ಲಿಯವರೆಗೆ ಈ ವೀಡಿಯೋ ಲಕ್ಷಗಟ್ಟಲೆ ವೀಕ್ಷಣೆ ಗಳಿಸಿದೆ.



ಭಾರತದ ಗಡಿಯನ್ನು ಅಕ್ರಮವಾಗಿ ಪ್ರವೇಶಿಸುವ ಜನರ ವಿರುದ್ಧ ಭಾರತ ಸರ್ಕಾರ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ನೆಟ್ಟಿಗರು ಟೀಕಿಸಿದ್ದಾರೆ. ಈ ವಿಷಯವನ್ನು ಸಂಸತ್ತಿನಲ್ಲಿ ಪ್ರಸ್ತಾಪಿಸಬೇಕೆಂದು ಇಂಟರ್ನೆಟ್ ಬಳಕೆದಾರರು ಒತ್ತಾಯಿಸಿದ್ದಾರೆ.



# ವಯನಾಡು ಭೂಕುಸಿತ: ಘೋರ ದುರಂತಕ್ಕೆ ಬಲಿಯಾದವರ ಸಂಖ್ಯೆ 360ಕ್ಕೆ ಏರಿಕೆ

**ವಯನಾಡು:** ಉಪಕರಣಗಳು ಮತ್ತು ನಾಯಿಗಳನ್ನು ನಿಯೋಜಿಸಿ ಸಂಭಾವ್ಯ ಬದುಕುಳಿದವರನ್ನು ಹುಡುಕಲು ಅಥವಾ ಅವಶೇಷಗಳ ಅಡಿಯಲ್ಲಿ ಹೂತುಹೋದ ಶವಗಳನ್ನು ಹೊರತೆಗೆಯಲು ನಿಯೋಜಿಸಿವೆ.

ಇದರ ನಡುವೆ ಘೋರ ದುರಂತದಲ್ಲಿ ಬಲಿಯಾದವರ ಸಂಖ್ಯೆ 360ಕ್ಕೆ ಏರಿಕೆಯಾಗಿದೆ.

ಗುಡ್ಡಗಾಡು ಜಿಲ್ಲೆಯಲ್ಲಿ ಸಂಭವಿಸಿದ ಭೂಕುಸಿತದ ನಂತರ ಐದನೇ ದಿನಕ್ಕೆ ಕಾಲಿಟ್ಟಿರುವ ಈ ತೀವ್ರ ಶೋಧ ಕಾರ್ಯಾಚರಣೆಯು ಕನಿಷ್ಠ 360 ಜನರನ್ನು ಬಲಿ ತೆಗೆದುಕೊಂಡಿದೆ. ಆದಾಗ್ಯೂ, ಸುಮಾರು 206 ಜನರು ಇನ್ನೂ ಕಾಣೆಯಾಗಿರುವುದರಿಂದ, ಸಾವಿನ ಸಂಖ್ಯೆ ಹೆಚ್ಚಾಗುವ ನಿರೀಕ್ಷೆಯಿದೆ.

ಅಧಿಕೃತ ಮೂಲಗಳ ಪ್ರಕಾರ, ಈವರೆಗೆ 341 ಶವಪರೀಕ್ಷೆಗಳು ಪೂರ್ಣಗೊಂಡಿವೆ ಮತ್ತು 146 ಶವಗಳನ್ನು ಗುರುತಿಸಲಾಗಿದೆ ಎಂಬುದಾಗಿ ತಿಳಿದು ಬಂದಿದೆ.

ವೈಮಾನಿಕ ಡ್ರೋನ್ ಚಿತ್ರಗಳು ಮತ್ತು ಸೆಲ್ ಫೋನ್‌ಗಳಿಂದ ಜಿಪಿಎಸ್ ನಿರ್ದೇಶಾಂಕಗಳನ್ನು ಬಳಸಿಕೊಂಡು, ರಕ್ಷಣಾ ಕಾರ್ಯಕರ್ತರು ಶುಕ್ರವಾರ ಪೀಡಿತ ಪ್ರದೇಶಗಳಲ್ಲಿ ಜನರ ಕೊನೆಯ ತಿಳಿದಿರುವ ಸ್ಥಳಗಳನ್ನು ಗುರುತಿಸಿದ್ದಾರೆ. ಸೇನೆಯು 190 ಅಡಿ ಉದ್ದದ ಬೈಲಿ ಸೇತುವೆಯನ್ನು ಪೂರ್ಣಗೊಳಿಸುವ ಮೂಲಕ ತ್ವರಿತ ಶೋಧ ಪ್ರಯತ್ನಗಳಿಗೆ ಬಲ ನೀಡಲಾಯಿತು. ಇದು ಭಾರಿ ಯಂತ್ರೋಪಕರಣಗಳು ಮತ್ತು ಆಂಬ್ಯುಲೆನ್ಸ್‌ಗಳ ಸಂಚಾರಕ್ಕೆ ಅನುಕೂಲ ಮಾಡಿಕೊಟ್ಟಿತು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಟೆನೆಂಟ್' ಸಿನಿಮಾದಲ್ಲಿ ಧರ್ಮ ಕೀರ್ತಿರಾಜ್-ತಿಲಕ್‌ಗೆ ಜೊತೆಯಾದ ಸೋನು ಗೌಡ



ಕನ್ನಡ ಚಿತ್ರರಂಗದಲ್ಲಿ ಹೊಸ ಹೊಸ ಪ್ರಯೋಗಗಳು ನಡೆಯುತ್ತಲೇ ಇರುತ್ತವೆ. ಅದರ ಭಾಗವಾಗಿ ಮೂಡಿ ಬರ್ತಿರುವ ಸಿನಿಮಾ ಟೆನೆಂಟ್. ಟೆನೆಂಟ್ ಎಂದರೆ ಬಾಡಿಗೆದಾರ..ಯುವ ಪ್ರತಿಭೆ ಶ್ರೀಧರ್ ಶಾಸ್ತ್ರೀ ನಿರ್ದೇಶನ ಈ ಚಿತ್ರದ ಫಸ್ಟ್ ಲುಕ್ ರಿಲೀಸ್ ಆಗಿದೆ. ವಿಎಫ್ ಎಕ್ಸ್ ನಲ್ಲಿ 4 ವರ್ಷದ ಅನುಭವವಿರುವ ಶ್ರೀಧರ್ ಮೊದಲ ಪ್ರಯತ್ನ ಟೆನೆಂಟ್. ಒಂದಷ್ಟು ಕಿರುಚಿತ್ರ ನಿರ್ದೇಶಿಸಿರುವ ಅವರೀಗ ನಿರ್ದೇಶಕರಾಗಿ ಸ್ಯಾಂಡಲ್ ವುಡ್ ಗೆ ಹೆಜ್ಜೆ ಇಡುತ್ತಿದ್ದಾರೆ.



ಶ್ರೀಧರ್ ಹೊಸ ಪ್ರಯತ್ನಕ್ಕೆ ಪ್ರತಿಭಾನ್ವಿತ ತಾರಾಬಳಗ ಸಾಥ್ ಕೊಟ್ಟಿದೆ. ಧರ್ಮ ಕೀರ್ತಿರಾಜ್, ತಿಲಕ್ ರಾಜ್, ಸೋನು ಗೌಡ, ರಾಕೇಶ್ ಮಯ್ಯ ಹಾಗೂ ಉಗ್ರಂ ಮಂಜು ಈ ಚಿತ್ರದಲ್ಲಿ ಮುಖ್ಯಭೂಮಿಕೆಯಲ್ಲಿ ನಟಿಸುತ್ತಿದ್ದಾರೆ.

ಕ್ರೈಮ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ಶ್ರೀಧರ್ ಶಾಸ್ತ್ರೀ ಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಈಗಾಗಲೇ ಸಿನಿಮಾದ ಶೂಟಿಂಗ್ ಮುಕ್ತಾಯಗೊಂಡಿದೆ. ಬೆಂಗಳೂರಿನ ಮನೆಯೊಂದರಲ್ಲಿ ಇಡೀ ಚಿತ್ರದ ಚಿತ್ರೀಕರಣ ನಡೆಸಲಾಗಿದೆ. ಮಾಸ್ಟರ್ ಚಾಯ್ಸ್ ಕ್ರಿಯೇಷನ್ ನಡಿ ನಾಗರಾಜ್ ಟಿ ಟೆನೆಂಟ್ ಸಿನಿಮಾ ನಿರ್ಮಿಸುತ್ತಿದ್ದು, ಪೃಥ್ವಿರಾಜ್ ಸಹ ನಿರ್ಮಾಪಕರಾಗಿ ಕೈ ಜೋಡಿಸಿದ್ದಾರೆ.

ಗಿರೀಶ್ ಹೋತೂರ್ ಸಂಗೀತ, ಉಜ್ವಲ್ ಚಂದ್ರ ಸಂಕಲನ, ಮನೋಹರ್ ಜೋಷಿ ಛಾಯಾಗ್ರಹಣ ಚಿತ್ರಕ್ಕಿದೆ. ಶ್ರೀಧರ್ ಶಾಸ್ತ್ರಿ, ಪ್ರವೀಣ್ ಪ್ರಕಾಶ್, ಪ್ರದೀಪ್ ಚಂದ್ರ, ಪ್ರಸನ್ನ ಭಟ್, ಪುರಷೋತ್ತಮ್ ಎ, ರಾಘವೇಂದ್ರ ಸಿ.ಪಿ, ಕಾರ್ತಿಕ್ ಎಸ್.ಎಸ್ ಸಂಭಾಷಣೆ ಬರೆದಿದ್ದು, ಐಶ್ವರ್ಯ ರಂಗರಾಜನ್, ಅನಿರುದ್ಧ ಶಾಸ್ತ್ರಿ, ಗಿರೀಶ್ ಹೋತೂರ್ ಹಾಡುಗಳಿಗೆ ಧ್ವನಿಯಾಗಿದ್ದಾರೆ. ಸದ್ಯ ಫಸ್ಟ್ ಲುಕ್ ರಿಲೀಸ್ ಮಾಡಿರುವ ಚಿತ್ರತಂಡ ಶೀಘ್ರದಲ್ಲೇ ಟೀಸರ್ ಬಿಡುಗಡೆ ಮಾಡಲು ಸಜ್ಜಾಗುತ್ತಿದೆ.



# ತರುಣ್-ಸೋನಲ್ ಮದುವೆ ಲವ್ ಸ್ಟೋರಿಗೆ ದರ್ಶನ್ ಕಾರಣ

ಆಗಸ್ಟ್ 10 ಮತ್ತು 11ನೇ ತಾರೀಖು ಬೆಂಗಳೂರಿನಲ್ಲಿ ಹೊಸ ಜೀವನಕ್ಕೆ ಕಾಲಿಡುತ್ತಿದ್ದಾರೆ ಕಾಟೇರ ಖ್ಯಾತಿಯ ನಿರ್ದೇಶಕ ತರುಣ್ ಸುಧೀರ್ ಮತ್ತು ನಟಿ ಸೋನಲ್. 10ನೇ ತಾರೀಖು ಆರತಕ್ಷತೆ ಕಾರ್ಯಕ್ರಮವಿದ್ದರೆ 11ನೇ ತಾರೀಖು ಈ ಜೋಡಿ ಸಪ್ತಪದಿ ತುಳಿಯಲಿದೆ. ಮದುವೆ ಕುರಿತಾಗಿ ಮಾಧ್ಯಮಗಳ ಜೊತೆ ಅನೇಕ ವಿಷಯಗಳನ್ನು ಹಂಚಿಕೊಂಡಿದೆ ಈ ಜೋಡಿ.

ಈ ಜೋಡಿಯ ಲವ್ ಸ್ಟೋರಿಗೆ ದರ್ಶನ್ ಕಾರಣವಂತೆ. ಈ ಕುರಿತಂತೆ ಮಾತನಾಡಿದ್ದಾರೆ ತರುಣ್. 'ರಾಬರ್ಟ್ ಸೆಟ್ ನಲ್ಲಿ ದರ್ಶನ್ ಸರ್ ತಮಾಷೆಯಾಗಿ ರೇಗಿಸ್ತಿದ್ರು. ಸೋನಾಲ್ ಮದುವೆ ಮಾಡಿಕೊಳ್ತಿಯಾ ಅಂತ ರೇಗಿಸ್ತಿದ್ರು. ಸೋನಾಲ್ ಯಾವ ಸೆಟ್ ಗೆ ಹೋದ್ರೂ, ಮದ್ವೆ ಬಗ್ಗೆ ಕೇಳ್ತಿದ್ರಂತೆ. ಸೋನಾಲ್ ಫೋನ್ ಮಾಡಿ ಅವತ್ತು ರೂಮರ್ಸ್ ಬಗ್ಗೆ ಹೇಳಿದ್ರು. 2023 ಜನವರಿಯಲ್ಲಿ ಮತ್ತಷ್ಟು ಕ್ಲೋಸ್ ಆಗ್ತಾ ಹೋದ್ವಿ. ಅವ್ರ ಫ್ಯೂಚರ್, ಫ್ಯಾಮಿಲಿ ಬಗ್ಗೆ ನೋಡ್ತಾ ಬಂದ್ವಿ. ಕಾಟೇರ ರಿಲೀಸ್ ಆಗೋವರೆಗೂ ಮದುವೆಗೆ ಟೈಂ ಕೇಳಿದ್ದೆ. ಕಾಟೇರ ಸಿನಿಮಾ ರೆಸ್ಪಾನ್ಸ್ ಮೇಲೆ ನನ್ ಮದ್ವೆಗೆ ಡಿಸೈಡ್ ಮಾಡಿದ್ದು. ದರ್ಶನ್ ಸರ್ ಕೂಡಾ ಸೋನಲ್ ಮನೇಲಿ ಮಾತಾಡಿದ್ರು. ಫೈನಲಿ ಈಗ ಫ್ಯಾಮಿಲಿಯಲ್ಲಿ ಮಾತುಕತೆ ಮಾಡಿ ಮದುವೆಗೆ ನಿರ್ಧಾರ ಮಾಡಿದ್ವಿ' ಅಂತಾರೆ.



**ತಮಾಷೆನೇ ನಿಜಾ ಆಯ್ತು..**

ಲವ್ ಮತ್ತು ಮದುವೆ ಕುರಿತಂತೆ ಮಾತಾಡಿದ ಸೋನಲ್ ಮಂಥೆರೋ 'ನಾವು ಟಚ್ ಅಲ್ಲಿ ಇರ್ತಿರಲಿಲ್ಲ. ರಾಬರ್ಟ್ ಸಿನಿಮಾ ಟೈಮ್ ನಲ್ಲಿ ದರ್ಶನ್ ಸರ್ ತಮಾಷೆ ಮಾಡ್ತಿದ್ರು. ರೀಸೆಂಟ್ ಆಗಿ ಎಲ್ರು ಹೇಳೋದನ್ನ ಒಮ್ಮೆ ಥಿಂಕ್ ಮಾಡೋಣ ಅಂತ ಟ್ರೈ ಮಾಡಿದ್ವಿ. ನಾವು ನಮ್ಮ ಲವ್ ನ ಸೀಕ್ರೆಟ್ ಆಗಿ ಇಡೋದು ನನ್ನ ಡಿಸಿಷನ್ ಆಗಿತ್ತು. ಮದ್ವೆ ಆದ್ಮೇಲೂ ಸಿನಿಮಾ ನಿಲ್ಲಸಲ್ಲ ಮಾಡ್ತೀನಿ. ದರ್ಶನ್ ಸರ್ ನ ತರುಣ್ ಮೀಟ್ ಆಗಿದ್ದಾರೆ. ನನಗೆ ಅಲ್ಲಿಹೋಗೋಕೆ ಅವ್ರನ್ನ ಆತರ ನೋಡೋಕೆ ಇಷ್ಟ ಇಲ್ಲ. ಅವ್ರು ಅಷ್ಟರಲ್ಲಿ ಬರ್ತಾರೆ ಅನ್ನಿಸುತ್ತೆ ನೋಡೋಣ' ಅಂತಾರೆ.

ದರ್ಶನ್ ಸರ್ ನ ಮಿಸ್ ಮಾಡ್ಕೋತೀವಿ ಅಂತಾರೆ ತರುಣ್ ಮತ್ತು ಸೋನಲ್. ದರ್ಶನ್ ಸರ್ ಎಲ್ಲಿದ್ರೂ ಅವ್ರ ವಿಶಸ್ ಇರುತ್ತೆ. ದರ್ಶನ್ ಸರ್ ಆಶೀರ್ವಾದ ಯಾವಾಗ್ಲೂ ಇರುತ್ತೆ. ನಮ್ ತಂದೆಯಷ್ಟೇ ದರ್ಶನ್ ಸರ್ ನ ಗೌರವಿಸ್ತೀನಿ. ಬಾಬಿಗೆ (ವಿಜಯಲಕ್ಷ್ಮಿ) ಇನ್ವಿಟೇಷನ್ ಕೊಟ್ಟಿದ್ದೀನಿ. ಅವ್ರು ಬರ್ತೀನಿ ಅಂದಿದಾರೆ. ಬೆಂಗಳೂರಿನಲ್ಲಿ ಹಿಂದೂ ಸಂಪ್ರದಾಯದ ಪ್ರಕಾರ ಮದುವೆ ಆಗ್ತೀವಿ. ಬೆಂಗಳೂರಿನಲ್ಲಿ ಮದುವೆ ನಂತರ ಮಂಗಳೂರಿನಲ್ಲೂ ಒಂದು ಫಂಕ್ಷನ್ ಮಾಡ್ತಾರಂತೆ ತರುಣ್ ಮತ್ತು ಸೋನಲ್.

# ನಾಳೆ ಹೊರಬೀಳಲಿದೆ 'ದೇವರ' ಚಿತ್ರದ ಅಪ್‌ಡೇಟ್



ತೆಲುಗಿನ ಸ್ಟಾರ್ ನಟ ಜ್ಯೂ.ಎನ್‌ಟಿಆರ್ ಫ್ಯಾನ್ಸ್‌ಗೆ ಸಿಹಿಸುದ್ದಿ ಸಿಕ್ಕಿದೆ. 'ದೇವರ' ಸಿನಿಮಾಗಾಗಿ ಎದುರು ನೋಡ್ತಿದವರಿಗೆ ಕ್ರೇಜಿ ಅಪ್‌ಡೇಟ್ ಸಿಕ್ಕಿದೆ. ಕಾಡಿನಲ್ಲಿ ಜಾನ್ವಿ ಕಪೂರ್ ಜೊತೆ ಜ್ಯೂ.ಎನ್‌ಟಿಆರ್ ರೊಮ್ಯಾಂಟಿಕ್ ಮೂಡ್‌ನಲ್ಲಿರುವ ಕಲರ್‌ಫುಲ್ ಪೋಸ್ಟರ್‌ವೊಂದನ್ನು ಹಂಚಿಕೊಂಡಿದ್ದಾರೆ.

'ದೇವರ' ಸಿನಿಮಾದ ಎರಡನೇ ಸಾಂಗ್ ರಿಲೀಸ್ ಮಾಡೋದಕ್ಕೆ ಮುಹೂರ್ತ ಫಿಕ್ಸ್ ಆಗಿದೆ. ಇದೇ ನಾಳೆ ಜ್ಯೂ.ಎನ್‌ಟಿಆರ್ ಜೊತೆಗಿನ ಜಾನ್ವಿ ಕಪೂರ್ ರೊಮ್ಯಾಂಟಿಕ್ ಸಾಂಗ್ ರಿಲೀಸ್ ಆಗಲಿದೆ ಎಂದು ಚಿತ್ರತಂಡ ಅನೌನ್ಸ್ ಮಾಡಿದೆ.

ಈ ಹಾಡನ್ನು ಥೈಲ್ಯಾಂಡ್ ಕಾಡಿನಲ್ಲಿ ಚಿತ್ರೀಕರಿಸಲಾಗಿದೆ. ಹಾಡು ಸೊಗಸಾಗಿ ಮೂಡಿ ಬಂದಿದೆಯಂತೆ. ಸದ್ಯ ರಿಲೀಸ್ ಆಗಿರುವ ಇಬ್ಬರ ಪೋಸ್ಟರ್ ನೋಡಿ, ಚಿತ್ರದ ಸಾಂಗ್ ನೋಡಲು ಫ್ಯಾನ್ಸ್ ಎದುರು ನೋಡ್ತಿದ್ದಾರೆ. ಇನ್ನೂ ಈ ಚಿತ್ರ ಬಹುಭಾಷೆಗಳಲ್ಲಿ ಸೆ.27ರಂದು ರಿಲೀಸ್ ಆಗಲಿದೆ.

ಈ ಚಿತ್ರದಲ್ಲಿ ಜ್ಯೂ.ಎನ್‌ಟಿಆರ್ ಡಬಲ್ ರೋಲ್‌ನಲ್ಲಿ ನಟಿಸಿದ್ದಾರೆ. ಇವರ ಜೊತೆ ಜಾನ್ವಿ ಕಪೂರ್, ಸೈಫ್ ಅಲಿ ಖಾನ್, ಚೈತ್ರಾ ರೈ ಸೇರಿದಂತೆ ಅನೇಕರು ನಟಿಸಿದ್ದಾರೆ. 'ಆರ್‌ಆರ್‌ಆರ್' ಸಿನಿಮಾದ ಸಕ್ಸಸ್ ಬಳಿಕ ಬರುತ್ತಿರುವ 'ದೇವರ' ಚಿತ್ರದ ಮೇಲೆ ಅಭಿಮಾನಿಗಳು ಬೆಟ್ಟದಷ್ಟು ನಿರೀಕ್ಷೆ ಇಟ್ಟುಕೊಂಡಿದ್ದಾರೆ.

## ಒಲಿಂಪಿಕ್ಸ್ ಪದಕ ಗೆದ್ದ ಬೆನ್ನಲ್ಲೇ ಮನು ಭಾಕರ್‌ಗೆ ಭರ್ಜರಿ ಆಫರ್

# ಬ್ರ್ಯಾಂಡ್ ಮೌಲ್ಯ 6 ಪಟ್ಟು ಹೆಚ್ಚಳ

2024ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಎರಡು ಪದಕ ಗೆದ್ದು ದಾಖಲೆ ಬರೆದಿರುವ ಭಾರತದ ಮನು ಭಾಕರ್‌ಗೆ ಈಗ ಜಾಹೀರಾತು ಸಂಸ್ಥೆಗಳಿಂದ ಭರ್ಜರಿ ಆಫರ್‌ಗಳು ಬರುತ್ತಿವೆ ಎಂದು ವರದಿಯಾಗಿದೆ.

ಮನು ಭಾಕರ್ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿರುವಾಗಲೇ ಸುಮಾರು 40 ಜಾಹೀರಾತು ಕಂಪನಿಗಳು ಅವರನ್ನು ಸಂಪರ್ಕಿಸಿವೆ ಕೋಟಿ ಕೋಟಿ ರೂ. ಮೌಲ್ಯದ ಒಂದೆರಡು ಒಪ್ಪಂದಗಳು ಸಹ ಮುಗಿದಿವೆ. ಪ್ಯಾರಿಸ್ ಒಲಿಂಪಿಕ್ಸ್‌ಗೂ ಮುನ್ನ ಮನು ಭಾಕರ್ ಅವರ ಬ್ರ್ಯಾಂಡ್ ಮೌಲ್ಯವು 20-25 ಲಕ್ಷ ರೂ.ನಷ್ಟಿತ್ತು. ಆದರೀಗ 6-7 ಪಟ್ಟು ಮೌಲ್ಯ ಹೆಚ್ಚಾಗಿದೆ ಎಂದು ಹೇಳಲಾಗಿದೆ.

22 ವರ್ಷ ವಯಸ್ಸಿನಲ್ಲಿ ಮನು ಭಾಕರ್ ಅವರಿಗೆ ಸದ್ಯ ಒಲಿಂಪಿಕ್ಸ್‌ನಲ್ಲಿ ಎರಡು ಪದಕ ಒಲಿದಿದ್ದು, 3ನೇ ಪದಕ ಕೊಂಚದಲ್ಲೇ ಕೈತಪ್ಪಿದೆ. ಹೀಗಿರುವಾಗಲೇ ಕಳೆದ 2-3 ದಿನಗಳಲ್ಲಿ ಸುಮಾರು 40 ಬ್ರ್ಯಾಂಡ್ ಕಂಪನಿಗಳು ಅವರನ್ನ ಸಂಪರ್ಕಿಸಿ ಅನುಮೋದನೆ ಕೇಳಿವೆ. ಒಂದೆರಡು ಕಂಪನಿಗಳ ಒಪ್ಪಂದಗಳು ಮುಕ್ತಾಯಗೊಂಡಿದ್ದು, ಉಳಿದ ಕಂಪನಿಗಳು ಅವರ ದೀರ್ಘಾವಧಿ ಹಾಗೂ ಅಲ್ಪಾವಧಿ ಕಾಂಟ್ರ್ಯಾಕ್ಟ್‌ಗೆ ಅನುಮೋದನೆ ಪಡೆಯಲು ಕಾಯುತ್ತಿವೆ ಎಂದು ಸ್ಪೋರ್ಟ್ಸ್ ಎಂಟರ್‌ಟೈನ್‌ಮೆಂಟ್ ಕಂಪನಿ ತಿಳಿಸಿರುವುದಾಗಿ ವರದಿಗಳು ಉಲ್ಲೇಖಿಸಿವೆ.

ಈ ಹಿಂದೆಯು ಟೋಕಿಯೋ ಒಲಿಂಪಿಕ್ಸ್‌ನಲ್ಲಿ ಚಿನ್ನದ ಪದಕ ಗೆದ್ದ ಬಳಿಕ ನೀರಜ್ ಚೋಪ್ರಾ ಅವರ ಬ್ರ್ಯಾಂಡ್ ಮೌಲ್ಯ ಹೆಚ್ಚಾಗಿತ್ತು. ಅದೇ ರೀತಿ ಮನು ಭಾಕರ್ ಪ್ರಸಕ್ತ ವರ್ಷದಲ್ಲಿ ದೇಶದ ಬ್ರ್ಯಾಂಡ್ ಆಗುವ ಸಾಧ್ಯತೆ ಎಂದು ಹೇಳಲಾಗುತ್ತಿದೆ.



**ಕೈ ತಪ್ಪಿದ ಹ್ಯಾಟ್ರಿಕ್ ಸಾಧನೆ:** ಒಂದೇ ಒಲಿಂಪಿಕ್ಸ್‌ನಲ್ಲಿ ಎರಡು ಪದಕ ಗೆದ್ದು ದಾಖಲೆ ಬರೆದಿದ್ದ ಭಾರತದ ಮನು ಭಾಕರ್ ಅವರಿಗೆ ಮೂರನೇ ಪದಕ ಜಸ್ಟ್ ಮಿಸ್ ಆಯಿತು. 25 ಮೀ ಸ್ಪೋರ್ಟ್ಸ್ ಪಿಸ್ತೂಲ್ ವಿಭಾಗದ ಫೈನಲ್‌ನಲ್ಲಿ 8 ಸ್ಪರ್ಧಿಗಳಿದ್ದರು. ಉತ್ತಮ ಪ್ರದರ್ಶನ ನೀಡಿದ ಮನು ಭಾಕರ್ ಅಂತಿಮವಾಗಿ 4ನೇ ಸ್ಥಾನ ಪಡೆದರು. 3ನೇ ಸ್ಪರ್ಧಿಯೊಂದಿಗೆ ಜಂಟಿಯಾಗಿ 28 ಅಂಕ ಪಡೆದರೂ ಹಂಗೇರಿ ಸ್ಪರ್ಧಿ ಈ ಹಿಂದಿನ ಸುತ್ತಿನಲ್ಲಿ ಮುನ್ನಡೆಯಲ್ಲಿದ್ದ ಕಾರಣ ಮನು ಭಾಕರ್ ಅವರ 3ನೇ ಪದಕ ಗೆಲ್ಲುವ ಕನಸು ಭಗ್ನಗೊಂಡಿತು. 22 ವರ್ಷದ ಮನು ಭಾಕರ್ ಈ ಒಲಿಂಪಿಕ್ಸ್‌ನಲ್ಲಿ ಮನು 10 ಮೀ ಏರ್ ಪಿಸ್ತೂಲ್ ಮತ್ತು 10 ಮೀ ಏರ್ ಪಿಸ್ತೂಲ್ ಮಿಶ್ರ (ಸರಬ್ಜೋತ್ ಸಿಂಗ್ ಜೊತೆಗೂಡಿ) ತಂಡ ವಿಭಾಗಗಳಲ್ಲಿ ಕಂಚಿನ ಪದಕಗಳನ್ನು ಗೆದ್ದಿದ್ದರು.

# ಮಳೆಯಿಂದಾಗಿ ಅನಧಿಕೃತ ಮನೆಗಳು ಬಿದ್ದರೂ 1.25 ಲಕ್ಷ ರೂ. ಪರಿಹಾರ

**ಶಿವಮೊಗ್ಗ:** ಮಳೆಯಿಂದಾಗಿ ಅನಧಿಕೃತ ಮನೆಗಳು ಬಿದ್ದರೂ 1.25 ಲಕ್ಷ ರೂ. ಪರಿಹಾರ ಕೊಡುತ್ತೇವೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಘೋಷಿಸಿದರು. ಶಿವಮೊಗ್ಗದಲ್ಲಿ ಮಾತನಾಡಿದ ಅವರು, ಕಳೆದ ಬಾರಿ 5 ಲಕ್ಷ ರೂ. ಪರಿಹಾರ ಕೊಡುತ್ತಾರೆ ಅಂತಾ ಅವರೇ ಮನೆ ಕೆಡವಿಕೊಂಡರು. ಕಳೆದ ಬಾರಿ ಪ್ರಭಾವ ಇದ್ದವರು 5 ಲಕ್ಷ ರೂ. ಪಡೆದಿದ್ದರು. ಇನ್ನುಳಿದವರು 1 ಲಕ್ಷ ರೂ. ಪಡೆದಿದ್ದರು. ಆದರೆ ಈ ಬಾರಿ ಮನೆ ಬಿದ್ದವರಿಗೆ ಪೂರ್ತಿ ಮನೆ ಕಟ್ಟಿ ಕೊಡುವ ಕೆಲಸ ಮಾಡುತ್ತೇವೆ ಎಂದರು. ವಾಲ್ಮೀಕಿ ನಿಗಮ ಹಗರಣ ವಿಚಾರವಾಗಿ ಪ್ರತಿಕ್ರಿಯಿಸಿ, ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಹಳ ಸ್ಪಷ್ಟವಾಗಿ ಹೇಳಿದ್ದಾರೆ. ವಿಧಾನಸಭೆಯೊಳಗೆ ಹಾಗೂ ಹೊರಗೂ ಹೇಳಿದ್ದಾರೆ. ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ ಎಂದರು.

ಮುಡಾ ಹಗರಣ ಆರೋಪದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಮೇಲೆ ಬಹಳ ಹಗುರವಾಗಿ ಮಾತನಾಡುತ್ತಿದ್ದಾರೆ.



ಬಸನಗೌಡ ಪಾಟೀಲ್ ಯತ್ನಾಳ್ ಕೂಡ ಅವರ ಪಕ್ಷದವರೇ. ವಿಜಯೇಂದ್ರ ಬಗ್ಗೆ ಯತ್ನಾಳ್ ಮಾತನಾಡ್ತಿದ್ದಾರೆ. ಅದರ ಬಗ್ಗೆ ಪ್ರತಿಕ್ರಿಯಿಸಲ್ಲ. ಡಿಕೆ ಶಿವಕುಮಾರ್ ಬಗ್ಗೆ ಮಾತನಾಡಲು ಏನು ಯೋಗ್ಯತೆ ಇದೆ ವಿಜಯೇಂದ್ರ ಎಲ್ಲಿದ್ದರು, ಇವರು ಏನು ಕೆಲಸ ಮಾಡ್ತಿದ್ದರು ವಿಜಯೇಂದ್ರ ಆಸ್ತಿ ಎಷ್ಟು, ಅವರ ಆಸ್ತಿ ಹೇಗೆ ಬಂತು ಹೇಳಬೇಕಲ್ಲ. ವಿಜಯೇಂದ್ರ ಮೇಲೂ ಕೇಸ್ ಇದೆ. ಬಡಾ ಸೈನ್, ಚೋಟಾ ಸೈನ್, ಮನಿ ಲ್ಯಾಂಡರಿಂಗ್ ಮಾಡಿದ್ದಾರೆ ಎಂದು ಮಧು ಬಂಗಾರಪ್ಪ ಆಕ್ರೋಶ ವ್ಯಕ್ತಪಡಿಸಿದರು.

ಡಿಕೆ ಶಿವಕುಮಾರ್ ತಪ್ಪು ಮಾಡದಿದ್ದರೂ ಜೈಲಿಗೆ ಹೋಗಿದ್ದರು. ಅವರು ಜೈಲಿಗೆ ಹೋಗಲು ಯಡಿಯೂರಪ್ಪ, ವಿಜಯೇಂದ್ರ ಕಾರಣ. ಡಿಕೆಶಿ ಬೆಳೆಯಬಾರದು, ಅವರನ್ನು ತುಳಿಯಬೇಕು ಎಂದು ಹಾಗೆ ಮಾಡಿದರು. ಕೇಂದ್ರ ಸರಕಾರದ ಮೇಲೆ ಒತ್ತಡ ಹಾಕಿ ಡಿಕೆಶಿಯನ್ನು ಜೈಲಿಗೆ ಕಳುಹಿಸಿದರು ಎಂದು ಆರೋಪಿಸಿದರು.

2012 ರಲ್ಲಿ ಮುಡಾ ಹಗರಣ ನಡೆದಿದೆ. 2012 ರಲ್ಲಿ ಬಿಜೆಪಿ ಸರಕಾರ ಇತ್ತು. ಆಗ ಮುಡಾ ಅಧ್ಯಕ್ಷರಾಗಿದ್ದವರು ರಾಜೀವ್. ಅವರು ಅಧ್ಯಕ್ಷರಾಗಿದ್ದರೂ ಮುಡಾ ನಿರ್ವಹಣೆ ಮಾಡ್ತಿದ್ದಿದ್ದು ವಿಜಯೇಂದ್ರ. ಸಿದ್ದರಾಮಯ್ಯ ಯಾವುದೇ ತಪ್ಪು ಮಾಡಿಲ್ಲ. ಇಡೀ ಸಚಿವ ಸಂಪುಟ ಸಿದ್ದರಾಮಯ್ಯ ಜೊತೆ ನಿಲ್ಲಲಿದೆ. ವಿಜಯೇಂದ್ರ ಕಾರಣದಿಂದಲೇ ಯಡಿಯೂರಪ್ಪ ಪೂರ್ತಿಯಾಗಿ ಅಧಿಕಾರ ಮಾಡಲಾಗಲಿಲ್ಲ. ವಿಜಯೇಂದ್ರ ಭ್ರಷ್ಟಾಚಾರದ ಬಗ್ಗೆ ಮಾತನಾಡಬೇಕಾದರೆ ಹುಷಾರಾಗಿ ಇರಬೇಕು ಎಂದು ಮಧು ಬಂಗಾರಪ್ಪ ಹೇಳಿದರು.

# ಬೆಂಗಳೂರಿಗೆ ಮತ್ತೊಂದು ಹೆಮ್ಮೆಯ ವಿಷಯ

40 ಪ್ರಾಕ್ಟೀಸ್ ಪಿಚ್‌ಗಳು, ಇಂಡೋರ್ ಕ್ರಿಕೆಟ್ ಪಿಚ್ ಹಾಗೂ ಒಲಿಂಪಿಕ್ಸ್ ಗಾತ್ರದ ಈಜುಕೊಳ ಸೇರಿ ಅನೇಕ ಅತ್ಯಾಧುನಿಕ ಸೌಕರ್ಯಗಳನ್ನು ಒಳಗೊಂಡಿರುವ ನೂತನ ರಾಷ್ಟ್ರೀಯ ಕ್ರಿಕೆಟ್ ಅಕಾಡೆಮಿ ಬೆಂಗಳೂರಿನಲ್ಲಿ ಉದ್ಘಾಟನೆಯಾಗಲಿದೆ ಎಂದು ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಹೇಳಿದ್ದಾರೆ.

ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಅವರು ಮಾಹಿತಿ ಹಂಚಿಕೊಂಡಿದ್ದಾರೆ. ಬಿಸಿಸಿಐನ ಹೊಸ ರಾಷ್ಟ್ರೀಯ ಕ್ರಿಕೆಟ್ ಅಕಾಡೆಮಿ ಬಹುತೇಕ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಉದ್ಘಾಟನಾಯಾಗಲಿದೆ ಎಂದು ತಿಳಿಸಿದ್ದಾರೆ.

ಉದ್ಘಾಟನೆಗೊಳ್ಳಲಿರುವ ನೂತನ ಕ್ರಿಕೆಟ್ ಅಕಾಡೆಮಿಯಲ್ಲಿ ಮೂರು ವಿಶ್ವದರ್ಜೆಯ ಆಟದ ಮೈದಾನಗಳು, 45 ಅಭ್ಯಾಸ ಪಿಚ್‌ಗಳು, ಇಂಡೋರ್ ಕ್ರಿಕೆಟ್ ಪಿಚ್‌ಗಳು, ಒಲಿಂಪಿಕ್ಸ್ ಗಾತ್ರದ ಈಜುಕೊಳ, ತರಬೇತಿ, ಚೇತರಿಕೆ ಹಾಗೂ




ಕ್ರೀಡಾ ವಿಜ್ಞಾನ ಸಂಸ್ಥೆಯಂತಹ ಸೌಲಭ್ಯಗಳು ಇರಲಿವೆ ಎಂದು ಜಯ್ ಶಾ ಮಾಹಿತಿ ಹಂಚಿಕೊಂಡಿದ್ದಾರೆ.

ಈ ಅಕಾಡೆಮಿಯು ನಮ್ಮ ದೇಶದ ಪ್ರಸ್ತುತ ಹಾಗೂ ಭವಿಷ್ಯದ ಆಟಗಾರರು ತಮ್ಮ ಕೌಶಲ್ಯ ಹೆಚ್ಚಿಸಿಕೊಳ್ಳಲು ಹಾಗೂ ಆಟಗಾರರಿಗೆ ಉತ್ತಮ ವಾತಾವರಣ ಕಲ್ಪಿಸಲು ಸಹಾಯಕವಾಗುತ್ತದೆ ಎಂದು ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ.

# ನಮ್ಮ ಸರ್ಕಾರ ಅಲ್ಲಾಡಿಸಲು ಸಾಧ್ಯವಿಲ್ಲ, ಅದು ನಿಮ್ಮ ಭ್ರಮೆ, ತಿರುಕನ ಕನಸು

**ರಾಮನಗರ:** ನಮ್ಮ ಸರ್ಕಾರವನ್ನು ಅಲ್ಲಾಡಿಸುವುದಕ್ಕೆ ಆಗುವುದಿಲ್ಲ, ಅದು ನಿಮ್ಮ ಭ್ರಮೆ. ತಿರುಕನ ಕನಸು ಎಂದು ಡಿಸಿಎಂ ಡಿಕೆ ಶಿವಕುಮಾರ್ ವಾಗ್ದಾಳಿ ಮಾಡಿದ್ದಾರೆ. ಮುಡಾ ಹಗರಣದ ವಿರುದ್ಧ ಬಿಜೆಪಿ ಮತ್ತು ಜೆಡಿಎಸ್ ಪಾದಯಾತ್ರೆಗೆ ಟಕ್ಕರ್ ಕೊಡಲು ರಾಮನಗರದಲ್ಲಿ ನಡೆದ ಕಾಂಗ್ರೆಸ್ ಜನಾಂದೋಲ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನವೆಂಬರ್, ಡಿಸೆಂಬರ್‌ಗೆ ಸರ್ಕಾರ ಪಲ್ಟಿ ಮಾಡುತ್ತೇವೆ ಅಂತಾರೆ. ಅದೇನು ಹೊಡೆಯೋಕೆ ಮಡಕೆನಾ ಎಂದು ಟಾಂಗ್ ನೀಡಿದ್ದಾರೆ.



**2028ಕ್ಕೆ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರುತ್ತೆ:** ಪಾದಯಾತ್ರೆಗೆ ಮುನ್ನ ಆಗ ನಿಮ್ಮ ಮಂತ್ರಿಗಳು ಕೇಳಿದ ಪ್ರಶ್ನೆಗೆ ಉತ್ತರ ಕೊಡಿ. ಆರ್‌ಟಿಜಿಎಸ್‌ನಲ್ಲಿ ಅಕೌಂಟ್‌ಗೆ ಹಣ ಹೋಗಿದೆ. ಕಾಂಗ್ರೆಸ್ ಶಕ್ತಿ, ದೇಶದ ಶಕ್ತಿ. ದೇಶವನ್ನ ಆಳುವ ಶಕ್ತಿ ಮತ್ತೆ ಉದ್ಭವ ಆಗುತ್ತೆ. 2028ಕ್ಕೆ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರುತ್ತೆ ಎಂದು ಹೇಳಿದ್ದಾರೆ.

ಪಾದಯಾತ್ರೆ ಮದ್ದೂರು, ಮಂಡ್ಯ, ಶ್ರೀರಂಗಪಟ್ಟಣ, ಮೈಸೂರು, ಪಾಂಡವಪುರ ಕಡೆ ಕಾಂಗ್ರೆಸ್ ಶಾಸಕರು ಇದ್ದಾರೆ. ನಿನ್ನೆ ಜೆಡಿಎಸ್ ಬಾವುಟವೇ ಇರಲಿಲ್ಲ. ನಾವು ನಿನ್ನೆ ಮಾತಾಡಿದ್ದಕ್ಕೆ ಜೆಡಿಎಸ್ ಬಾವುಟ ಹಾಕಿದ್ದಾರೆ.

**ಹೆಚ್‌ಡಿ ಕುಮಾರಸ್ವಾಮಿ ವಿರುದ್ಧ ಕಿಡಿ:** ಬಿಜೆಪಿ ಶಾಸಕ ಯತ್ನಾಳ್, ಪತ್ರಿಕಾ ಜಾಹೀರಾತಿಗೆ ಬಿಜೆಪಿ ಉತ್ತರ ಕೊಡಬೇಕು. ಕಾವೇರಿ, ಮೇಕೆದಾಟು ನೀರಿಗೆ ಹೆಜ್ಜೆ ಹಾಕಿಲ್ಲ. ಈಗ ಕುಮಾರಸ್ವಾಮಿ ಮಂತ್ರಿ ಆಗಿದ್ದಾರೆ. ಫ್ಯಾಕ್ಟರಿ ಮಾಡ್ತೀನಿ ಅಂದಿದ್ದೀರಿ. ಉದ್ಯೋಗಿ ಕೊಡಿ, ಖಾಲಿ ಮಾತನಾಡಬೇಡಿ. ಚನ್ನಪಟ್ಟಣಕ್ಕೆ ಹೋಗಿದ್ದಾಗ 22 ಸಾವಿರ ಜನ ಅರ್ಜಿ ಕೊಟ್ಟಿದ್ದಾರೆ. ಅಭಿವೃದ್ಧಿ ವಿಚಾರ ಆಮೇಲೆ ಮಾತನಾಡುತ್ತೀನಿ ಎಂದು ಕಿಡಿಕಾರಿದ್ದಾರೆ.

ನಾನು ಬರುವಾಗ ವಿಪರೀತ ಮಳೆ. ಇಷ್ಟು ದೊಡ್ಡ ಸಂಖ್ಯೆಯಲ್ಲಿ ಬಂದಿದ್ದೀರಿ. ಪಾದಯಾತ್ರೆ ಮಾಡುವವರಿಗೆ ನೀವು ಪ್ರಶ್ನೆ ಕೇಳಿ. ನುಡಿದಂತೆ ನಡೆದಿದ್ದೇನೆ, ಬದುಕನ್ನ ಬದಲಾವಣೆ ಮಾಡಿದ್ದೇವೆ. ಯಾವುದೇ ಈ ರೀತಿಯ ಕಾರ್ಯಕ್ರಮ ಬಿಜೆಪಿ ಮಾಡಿಲ್ಲ. ನಿಮ್ಮ ಬದುಕು ನಮ್ಮ ಉಸಿರು ಎಂದರು.

ಯಡಿಯೂರಪ್ಪನವರು ಜೈಲಿಗೆ ಹೋಗಲು ಜೆಡಿಎಸ್‌ನವರು ಕಾರಣ

ಪೆನ್ ಡ್ರೈವ್ ಬಗ್ಗೆ ಯಾಕೆ ಚರ್ಚೆ ಮಾಡುತ್ತಿಲ್ಲ. ಪ್ರಧಾನಿ ಮೋದಿ ಬಳಿ ಯಾಕೆ ಮಾತನಾಡುತ್ತಿಲ್ಲ. ಬಿಜೆಪಿ ಯಾಕೆ ಬಾಯಿ ಮುಚ್ಚಿಕೊಂಡಿದೆ. ಬಿಚ್ಚಿ ಬಿಚ್ಚಿ ರಾಜ್ಯದ ಜನತೆಯ ಮುಂದೆ ಇಡಬೇಕು. ಭ್ರಷ್ಟಾಚಾರ ಪಿತಾಮಹ ಎಂದಿದ್ದಾರೆ. ನಿಮ್ಮ ತಂದೆ ಯಾಕೆ ರಾಜೀನಾಮೆ ಕೊಟ್ಟರು. ಕಣ್ಣೀರು ಹಾಕಿ ಹೋದವರು ಯಾರು ಯಾಕೆ ರಾಜೀನಾಮೆ ಅಂಗೀಕಾರ ಮಾಡಿದರು. ಯಡಿಯೂರಪ್ಪನವರು ಜೈಲಿಗೆ ಹೋಗಲು ಜೆಡಿಎಸ್‌ನವರು ಕಾರಣ. ಈಗ ಅವರೊಂದಿಗೆ ಪಾದಯಾತ್ರೆ ಎಂದು ಡಿಕೆ ಶಿವಕುಮಾರ್ ಕಿಡಿಕಾರಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com